ಸಂಪಾದಕರು :
ಎಂ.ಎಸ್. ವಿಕಾಸ್

# ಜನತಾ ವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ದಾವಣಗೆರೆ
ಮಂಗಳವಾರ, ನವೆಂಬರ್ 12, 2024

ಸಂಪುಟ : 51 ಸಂಚಿಕೆ : 179 ☎ 08192-254736 ✆ 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com




# ಓಬವ್ವನ ಶೌರ್ಯದ ಗುಣ ಅಳವಡಿಸಿಕೊಳ್ಳಿ

## ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ

ದಾವಣಗೆರೆ, ನ.11- ಹೆಣ್ಣು ಮಕ್ಕಳು ಒನಕೆ ಓಬವ್ವನ ಧೈರ್ಯ, ಶೌರ್ಯದ ಗುಣಗಳನ್ನು ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ವೀರ ವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವೀರ ವನಿತೆ ಒನಕೆ ಓಬವ್ವನ ಸಮಯ ಪ್ರಜ್ಞೆ, ಧೈರ್ಯ ಮತ್ತು ಸಾಹಸ ನಮ್ಮ ನಾಡಿನ ಹೆಣ್ಣು ಮಕ್ಕಳಿಗೆ ಸ್ಫೂರ್ತಿಯಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಒನಕೆ ಓಬವ್ವ, ರಾಣಿ ಚನ್ನಮ್ಮ, ಅಬ್ಬಕ್ಕ, ಗಾಂಧೀಜಿ, ನೆಹರು, ಬಾಬಾ ಸಾಹೇಬ್ ಅಂಬೇಡ್ಕರ್ ಇಂತಹ ಮಹನೀಯರು ತಮಗಾಗಿ ಕೆಲಸ ಮಾಡಲಿಲ್ಲ, ಬದಲಾಗಿ ದೇಶಕ್ಕಾಗಿ, ಸಮಾಜಕ್ಕಾಗಿ , ರಾಷ್ಟ್ರಕ್ಕಾಗಿ ತ್ಯಾಗ ಮಾಡಿದ್ದರಿಂದ ಇತಿಹಾಸದ ಪುಟಗಳಲ್ಲಿ ಅವರು ಅಜರಾಮರವಾಗಿ ಉಳಿದಿದ್ದಾರೆ. ಅದೇ ರೀತಿ ನಾವುಗಳು ಸಮಾಜದ ಒಳಿತಿಗಾಗಿ ಕೆಲಸ ಮಾಡಿದಾಗ ಮಾತ್ರ ಇತಿಹಾಸ ಪುಟ ಸೇರಲು ಸಾಧ್ಯ ಎಂದರು.

ರಾಜ್ಯ ಛಲವಾದಿ ಸಮಾಜದ ಮುಖಂಡರಾದ ಎಂ.ಸಿ.ಓಂಕಾರಪ್ಪ, ಒನಕೆ ಓಬವ್ವನ ತ್ಯಾಗ, ಧೈರ್ಯ, ಸ್ವಾಮಿ ನಿಷ್ಠೆಯ ಬಗ್ಗೆ ಉಪನ್ಯಾಸ ನೀಡಿದರು. ಹೆಚ್ಚುವರಿ ಪೊಲೀಸ್ ಅಧಿಕಾರಿ ವಿಜಯ್ ಕುಮಾರ್ ಎಂ. ಸಂತೋಷ್, ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ದುಡಾ ಸದಸ್ಯ ಗಿರೀಶ್, ಪಾಲಿಕೆ ಮೇಯರ್ ಕೆ. ಚಮನ್ ಸಾಬ್, ಉಪ ಮೇಯರ್ ಸೋಗಿ ಶಾಂತಕುಮಾರ್, ಪಾಲಿಕೆ ಸದಸ್ಯ ಗಡಿಗುಡಾಳ್ (3ನೇ ಪುಟಕ್ಕೆ)

# ಪ್ರಜ್ವಲ್ ಜಾಮೀನು ಅರ್ಜಿ ಸುಪ್ರೀಂ ಕೋರ್ಟ್‌ನಲ್ಲಿ ವಜಾ



ಬೆಂಗಳೂರು, ನ. 11 - ಅತ್ಯಾಚಾರ ಆರೋಪ ಪ್ರಕರಣದಲ್ಲಿ ಜೈಲು ಪಾಲಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಜಾಮೀನು ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಜಾಗೊಳಿಸಿದೆ.

ನ್ಯಾಯಮೂರ್ತಿ ಸತೀಶ್‌ಚಂದ್ರ ವರ್ಮ ಮತ್ತು ಬೇಲಾ ಎಂ. ತ್ರಿವೇದಿ ಅವರನ್ನೊಳಗೊಂಡ ದ್ವಿಸದಸ್ಯ ನ್ಯಾಯಪೀಠ ವಿಚಾರಣೆ ನಡೆಸಿ, ಜಾಮೀನು ಅರ್ಜಿ ವಜಾಗೊಳಿಸಿತು.

ಕಳೆದ ಅಕ್ಟೋಬರ್ 21ರಂದು ಪ್ರಜ್ವಲ್ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ಸಹಾ ತಿರಸ್ಕರಿಸಿತ್ತು. ಪ್ರಜ್ವಲ್ ಅತ್ಯಂತ ಪ್ರಭಾವಿ ವ್ಯಕ್ತಿ ಎಂಬುದನ್ನು ಗಮನಿಸಿದ ನ್ಯಾಯಾಲಯ, ಕರ್ನಾಟಕ ಹೈಕೋರ್ಟ್ ನೀಡಿರುವ ಆದೇಶದಲ್ಲಿ ತಾವು ಮಧ್ಯೆ ಪ್ರವೇಶಿಸುವುದಿಲ್ಲ ಎಂದು ಹೇಳುವ ಮೂಲಕ ನ್ಯಾಯಪೀಠ ಅರ್ಜಿ ವಜಾಗೊಳಿಸಿತು.

ಪ್ರಜ್ವಲ್ ರೇವಣ್ಣ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ (3ನೇ ಪುಟಕ್ಕೆ)

# ಕುಟುಂಬ ರಾಜಕಾರಣವೇ ಪ್ರತಿಷ್ಠೆ

## ಮೂರು ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣಾ ಪ್ರಚಾರಕ್ಕೆ ತೆರೆ

ಬೆಂಗಳೂರು, ನ. 11 - ಕುಟುಂಬ ರಾಜಕಾರಣವೇ ಪ್ರತಿಷ್ಠೆಯಾಗಿರುವ ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಬಹಿರಂಗ ಪ್ರಚಾರಕ್ಕೆ ತೆರೆ ಬಿದ್ದಿದೆ.

ಚನ್ನಪಟ್ಟಣ, ಶಿಗ್ಗಾಂವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆಯುತ್ತಿರುವ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ತೆರೆ ಬೀಳುತ್ತಿದ್ದಂತೆ ಮತದಾರರಲ್ಲದವರು ಕ್ಷೇತ್ರ ತೆರವುಗೊಳಿಸುವಂತೆ ಸಂಬಂಧಪಟ್ಟ ಜಿಲ್ಲಾ ಚುನಾವಣಾಧಿಕಾರಿಗಳು ಆದೇಶ ಮಾಡಿದ್ದಾರೆ.

ಈ ಕ್ಷೇತ್ರಗಳಿಗೆ ನವೆಂಬರ್ 13ರಂದು ಮತದಾನ ನಡೆಯಲಿದ್ದು, ಅಭ್ಯರ್ಥಿಗಳು ಮನೆ-ಮನೆಗೆ ತೆರಳಿ ಮತ ಯಾಚಿಸಬಹುದಾಗಿದೆ.

**ನಾಳೆ ಮತದಾನ**

ಉಪಚುನಾವಣೆಯನ್ನು ಸರ್ಕಾರ ಎಷ್ಟು ಪ್ರತಿಷ್ಠೆಯಾಗಿ ತೆಗೆದುಕೊಂಡಿದೆಯೋ, ಅಷ್ಟೇ ಪ್ರತಿಷ್ಠೆಯಾಗಿ ಪ್ರತಿಪಕ್ಷ ಎನ್‌ಡಿಎ ಮೈತ್ರಿಕೂಟ ತೆಗೆದುಕೊಂಡಿದೆ. ಉಪಚುನಾವಣೆಯ ಎಲ್ಲಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಪೆಟ್ಟು ನೀಡಲು ಅವಿರತ ಹೋರಾಟ ನಡೆಸಿದೆ.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಕುಟುಂಬದ ಕುಡಿ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಚನ್ನಪಟ್ಟಣದಿಂದ ತಮ್ಮ ಅದೃಷ್ಟ ಪರೀಕ್ಷೆಗೆ ಕಣಕ್ಕಿಳಿದಿದ್ದಾರೆ.

ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್, ಎನ್‌ಡಿಎ ಅಭ್ಯರ್ಥಿ ನಿಖಿಲ್‌ಗೆ ಪ್ರತಿಸ್ಪರ್ಧಿ. ಕ್ಷೇತ್ರದಲ್ಲಿ ಯೋಗೇಶ್ವರ್‌ಗಿಂತ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ, ಪಕ್ಷದ ಅಭ್ಯರ್ಥಿ ಗೆಲುವು ಹೆಚ್ಚು ಪ್ರತಿಷ್ಠೆಯಾಗಿದ್ದು, ಗೌಡರ ಕುಟುಂಬದ ವಿರುದ್ಧ ಟೊಂಕ ಕಟ್ಟಿ ಹೋರಾಟ ನಡೆಸಿದ್ದಾರೆ.

ಇನ್ನು ಶಿಗ್ಗಾಂವಿಯಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಬೊಮ್ಮಾಯಿ ಬಿಜೆಪಿ ಅಭ್ಯರ್ಥಿಯಾಗಿ ಕಣದಲ್ಲಿದ್ದಾರೆ. ಸಂಡೂರು ಕ್ಷೇತ್ರದಲ್ಲಿ ಮಾಜಿ ಸಚಿವ ಹಾಗೂ ಹಾಲಿ ಸಂಸದ ಇ.ತುಕಾರಾಂ ಪತ್ನಿ ಅನ್ನಪೂರ್ಣ ಕಾಂಗ್ರೆಸ್‌ನ ಅಭ್ಯರ್ಥಿಯಾಗಿದ್ದಾರೆ. ಇಲ್ಲಿ ಸಚಿವ ಸಂತೋಷ್ (2ನೇ ಪುಟಕ್ಕೆ)

**'ಮಾಲತೀ ಮಾಧವ'**

ಒಡನಾಟ ರಂಗ ತಂಡ, ಸಿದ್ಧಗಂಗಾ ವಿದ್ಯಾ ಸಂಸ್ಥೆ, ಹಾಗೂ ಇನ್‌ಸೈಟ್ಸ್ ಕೋಚಿಂಗ್ ಇನ್‌ಸ್ಟಿಟ್ಯೂಟ್ ಸಹಯೋಗದೊಂದಿಗೆ ದಾವಣಗೆರೆ ಸಿದ್ಧಗಂಗಾ ವಿದ್ಯಾಸಂಸ್ಥೆ ಆವರಣದಲ್ಲಿ 'ನೀನಾಸಮ್ ತಿರುಗಾಟ-2024' ಅಂಗವಾಗಿ ಸೋಮವಾರ ಸಂಜೆ 'ಮಾಲತೀ ಮಾಧವ' ನಾಟಕ ಪ್ರದರ್ಶನ ನಡೆಯಿತು.



# ನಿರಭಿಮಾನಿಗಳಾದರೆ ಕಾವೇರಿಯೂ ಕೈ ತಪ್ಪಿಯಾಳು

## ತರಳಬಾಳು ನುಡಿ ಹಬ್ಬದ ಸಮಾರೋಪ ಸಮಾರಂಭದಲ್ಲಿ ಡಾ.ಎಚ್.ಎಸ್ ಹರಿಶಂಕರ್ ಎಚ್ಚರಿಕೆ




**ಕನ್ನಡ ಉಳುವಿನ ಹೋರಾಟಕ್ಕೆ ತರಳಬಾಳು ಜಗದ್ಗುರುಗಳ ನೇತೃತ್ವ ಬೇಕು**

ಕನ್ನಡ ಭಾಷೆಯ ಉಳುವಿಗಾಗಿ ಹೋರಾಟದ ಅವಶ್ಯಕತೆ ಇದ್ದು, ತರಳಬಾಳು ಜಗದ್ಗುರುಗಳವರ ನೇತೃತ್ವದಲ್ಲಿ ಚಳವಳಿಯನ್ನು ಹಮ್ಮಿಕೊಳ್ಳುವ ಅಗತ್ಯತೆ ಇದೆ.

-ಪ್ರೊ. ಬಿ.ಡಿ. ಕುಂಬಾರ, ಉಪಕುಲಪತಿ, ದಾವಣಗೆರೆ ವಿಶ್ವವಿದ್ಯಾನಿಲಯ

ಸಿರಿಗೆರೆ, ನ.11- ಕನ್ನಡಿಗರಾದ ನಾವು ನಾಡು ಮತ್ತು ನುಡಿಯ ಬಗ್ಗೆ ನಿರಭಿಮಾನಿಗಳಾದರೆ ಮುಂದೆ ಕಾವೇರಿಯನ್ನೂ ಸಹ ಕಳೆದುಕೊಳ್ಳ ಬೇಕಾಗಬಹುದು ಎಂದು ಮೈಸೂರಿನ ವಿಶ್ರಾಂತ ಪ್ರಾಧ್ಯಾಪಕ ಡಾ.ಎಚ್.ಎಸ್ ಹರಿಶಂಕರ್ ಎಚ್ಚರಿಸಿದರು.

ಸಿರಿಗೆರೆಯ ಶ್ರೀ ಗುರುಶಾಂತೇಶ್ವರ ದಾಸೋಹ ಮಂಟಪದಲ್ಲಿ ಜರುಗಿದ 'ತರಳಬಾಳು ನುಡಿ ಹಬ್ಬ-2024'ರ ಸಮಾರೋಪ ಸಮಾರಂಭದಲ್ಲಿ ಅವರು ಸಮಾರೋಪ ಭಾಷಣ ಮಾಡಿದರು.

ಕನ್ನಡದ ಉಳಿವಿಗೆ ಎಲ್ಲರ ಸಹಕಾರ ಅಗತ್ಯ. ಭಾಷೆಯ ಬಗೆಗಿನ ಆಚರಣೆ ನವೆಂಬರ್ ತಿಂಗಳಿಗೆ ಮಾತ್ರವೇ ಸೀಮಿತವಾಗಬಾರದು. ಕನ್ನಡ ಭಾಷೆಗೆ ಹಲವು ಸಂಕಷ್ಟಗಳಿವೆ. ಕನ್ನಡ ಭಾಷೆಯನ್ನು ಉಳಿಸಿ, ಬೆಳೆಸಿಕೊಂಡು ಹೋಗಲು ರಾಜಕಾರಣಿಗಳು, ಭಾಷಾಭಿಮಾನಿಗಳು, ಧರ್ಮ ಗುರುಗಳು ಸೇರಿ ದಂತೆ ಎಲ್ಲರೂ ಚರ್ಚೆ ಮಾಡಬೇಕಾದ ಅಗತ್ಯ ಇದೆ. ವಿಶ್ವವಿದ್ಯಾನಿಲಯಗಳಲ್ಲಿ ಓದುತ್ತಿರುವ ವಿದ್ಯಾರ್ಥಿ ಗಳು ಹಳಗನ್ನಡ ಓದುವುದರಿಂದ ದೂರವಾಗಿದ್ದಾರೆ. 20ನೇ ಶತಮಾನದಲ್ಲಿ ಹಲವು ಪ್ರಮುಖ ಗ್ರಂಥಗಳು ಪ್ರಕಟಗೊಂಡಿದ್ದರೂ ಅವು ಓದುಗರಿಗೆ ಮುಟ್ಟುತ್ತಿಲ್ಲ ಎಂದು ಅವರು ವಿಷಾದಿಸಿದರು.

ತರಳಬಾಳು ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಯವರು ಆಶೀರ್ವಚನ ನೀಡಿ, ಕನ್ನಡಕ್ಕೆ ತನ್ನದೇ ಆದ ವಿಶಿಷ್ಟ ಸ್ಥಾನವಿದೆ. ವಿದ್ಯಾರ್ಥಿಗಳು ಸಮಯವನ್ನು ಸರಿಯಾಗಿ ಸದ್ಬಳಕೆ ಮಾಡಿ ಕೊಂಡಾಗ ಮಾತ್ರ ಉತ್ತಮ ಸ್ಥಾನ, ಸನ್ಮಾನಗಳು ಪಡೆಯುವ ಅವಕಾಶಗಳು ಲಭಿಸುತ್ತವೆ. ಸಾಹಿತಿಗಳ, ವಿದ್ವಾಂಸರ ಸ್ಫೂರ್ತಿ ಪಡೆದು ನಿಮ್ಮ ವ್ಯಕ್ತಿತ್ವವನ್ನು ದೊಡ್ಡ ಮಟ್ಟದಲ್ಲಿ ರೂಪಿಸಿಕೊಳ್ಳುವಂತೆ ಕರೆ ನೀಡಿದರು.

ದಾವಣಗೆರೆ ವಿಶ್ವವಿದ್ಯಾಲಯದ ಉಪಕುಲ ಪತಿ ಪ್ರೊ.ಬಿ.ಡಿ.ಕುಂಬಾರ ಮಾತನಾಡಿ, 21ನೇ ಶತಮಾನದಲ್ಲಿ ಕನ್ನಡ ನಾಡು, ನುಡಿಯ ಬಗ್ಗೆ ಅಭಿಮಾನ, ಸಾಂಪ್ರದಾಯಿಕವಾಗಿ, ಧಾರ್ಮಿಕ ವಾಗಿ ಕ್ರಾಂತಿ ಮಾಡುತ್ತಿರುವ ಏಕೈಕ ಮಠ ಸಿರಿಗೆರೆ ಮಠ. ಕನ್ನಡ ಭಾಷೆಯ ಉಳಿವಿಗೆ ಚಳುವಳಿಯ ಅವಶ್ಯಕತೆ ಇದ್ದು, ತರಳಬಾಳು ಶ್ರೀಗಳ ನೇತೃತ್ವದಲ್ಲಿ ಚಳವಳಿಯನ್ನು ಹಮ್ಮಿಕೊಳ್ಳಬೇಕಿದೆ ಎಂದರು.

ಬೆಂಗಳೂರು ಕಸಾಪ ಗೌರವ ಕೋಶಾಧ್ಯಕ್ಷ ಡಾ.ಬಿ.ಎಂ.ಪಟೇಲ್ ಪಾಂಡು ಮಾತನಾಡಿ, ಸಾಹಿತ್ಯ ಸಮ್ಮೇಳನದ ಮಾದರಿಯಲ್ಲಿ ನುಡಿಹಬ್ಬ ಯಶಸ್ವಿಯಾಗಿದೆ. ಸಿರಿಗೆರೆ ವಿದ್ಯಾಸಂಸ್ಥೆಯಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳು ಕನ್ನಡ (3ನೇ ಪುಟಕ್ಕೆ)

# ಆನ್‌ಲೈನ್ ಮೂಲಕ 10.45 ಕೋಟಿ ರೂ. ವಂಚನೆ

ದಾವಣಗೆರೆ, ನ.11- ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಯೊಬ್ಬರ ಮಾತು ನಂಬಿ ಆನ್‌ಲೈನ್ ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿದ ಮಹಿಳೆಯೊಬ್ಬರು 10.45 ಕೋಟಿ ರೂ. ವಂಚನೆಗೊಳಗಾದ ಘಟನೆ ನಡೆದಿದೆ.

ನಗರದ ಪ್ರತಿಷ್ಠಿತ ವಿಶ್ವ ಚೇತನ ವಿದ್ಯಾಸಂಸ್ಥೆಯ ನಿರ್ದೇಶಕರಾದ ವಿ. ವಿಜಯಲಕ್ಷ್ಮಿ ವೀರಮಾಚಿನೇನಿ ವಂಚನೆಗೊಳಗಾದವರು.

**ಸರ್ಕಾರಿ ಅಧಿಕಾರಿ ಮಾತು ನಂಬಿ ಹಣ ಕಳೆದುಕೊಂಡ ಮಹಿಳೆ**

ಇವರಿಗೆ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಡಾ.ಡಿ. ಉಮೇಶ್ ಅಂತರ ರಾಷ್ಟ್ರೀಯ ಗೋಲ್ಡ್ ಮ್ಯಾನ್ ಸ್ಯಾಚ್ ಕಂಪನಿಯಲ್ಲಿ ದೊಡ್ಡ ಮೊತ್ತದ ಹಣ ಹೂಡಿಕೆ ಮಾಡಿದರೆ ಹೆಚ್ಚು ಹೆಚ್ಚು ಲಾಭ ಬರುತ್ತದೆಂದು ಹೇಳಿದ್ದರು.

ಇವರ ಮಾತು ಕೇಳಿದ ವಿಜಯಲಕ್ಷ್ಮಿ ಅವರು, ಹಂತ ಹಂತವಾಗಿ ಜೂ.12 ರಿಂದ ಆ.2 ರ ವರೆಗೆ 10.45 ಕೋಟಿ ರೂಪಾಯಿಗೂ ಹೆಚ್ಚು ಹಣ ಹೂಡಿಕೆ ಮಾಡಿದ್ದರು.

ಹೂಡಿದ್ದ ಹಣ 10.45 ಕೋಟಿ ರೂ.ಗಳಾಗಿದ್ದರೂ, ಆನ್‌ಲೈನ್‌ನಲ್ಲಿ 23 ಕೋಟಿ ರೂಪಾಯಿ ಎಂದು ತೋರಿಸುತ್ತಿತ್ತು. ಹೂಡಿಕೆಯ ಜತೆಗೆ ಹೆಚ್ಚುವರಿಯಾಗಿ ಬಂದ ಹಣವೂ ಸೇರಿದಂತೆ ಎಲ್ಲ ಹಣವನ್ನು ಬಿಡಿಸಿಕೊಳ್ಳಲು ಮುಂದಾದಾಗ ಕಂಪನಿಯವರು ಅರ್ಧಕ್ಕೆ ಹಣವನ್ನು ಡ್ರಾ ಮಾಡಿಕೊಳ್ಳಲು ಬರುವುದಿಲ್ಲ. ಮತ್ತಷ್ಟು ಹಣ (3ನೇ ಪುಟಕ್ಕೆ)

# ಹರಪನಹಳ್ಳಿ ಪುರಸಭೆ ಅಧ್ಯಕ್ಷರಾಗಿ ಫಾತೀಮಾಬೀ





**ಉಪಾಧ್ಯಕ್ಷರಾಗಿ ಎಚ್. ಕೊಟ್ರೇಶ್ ಅವಿರೋಧ ಆಯ್ಕೆ**

ಹರಪನಹಳ್ಳಿ, ನ.11- ಪಟ್ಟಣದ ಪುರಸಭೆ ಅಧ್ಯಕ್ಷರಾಗಿ 20ನೇ ವಾರ್ಡಿನ ಫಾತೀಮಾಬೀ ಹಾಗೂ ಉಪಾಧ್ಯಕ್ಷರಾಗಿ 21ನೇ ವಾರ್ಡಿನ ಎಚ್.ಕೊಟ್ರೇಶ್ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ತಹಶೀಲ್ದಾರ್ ಗಿರೀಶಬಾಬು ತಿಳಿಸಿದರು.

ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಪಕ್ಷದ ಫಾತೀಮಾಬೀ ಎಂ., 19ನೇ ವಾರ್ಡಿನ ಸುಮಾ ವಾಗೀಶ್ ನಾಮಪತ್ರ ಸಲ್ಲಿಸಿದ್ದರು. ಉಪಾಧ್ಯಕ್ಷ ಸ್ಥಾನಕ್ಕೆ 21ನೇ ವಾರ್ಡಿನ ಕಾಂಗ್ರೆಸ್ ಪಕ್ಷದ ಎಚ್.ಕೊಟ್ರೇಶ್ ಮಾತ್ರ ನಾಮಪತ್ರ ಸಲ್ಲಿಸಿದ್ದರು. 19 ಮತಗಳನ್ನು ಪಡೆದ ಫಾತೀಮಾಬೀ, ನಾಲ್ಕು ಮತಗಳ ಅಂತರದಿಂದ ಸುಮಾ ವಾಗೀಶ್ ಅವರನ್ನು ಪರಾಭವಗೊಳಿಸಿದರು.

ಉಪಾಧ್ಯಕ್ಷ ಸ್ಥಾನಕ್ಕೆ ಎಚ್.ಕೊಟ್ರೇಶ್ ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಗೊಂಡರು.

ಈ ವೇಳೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಪುರಸಭೆಯನ್ನು ನಗರಸಭೆಯನ್ನಾಗಿ ಮಾಡಲು ಉಸ್ತುವಾರಿ ಸಚಿವರಲ್ಲಿ ಚರ್ಚಿಸುತ್ತೇನೆ. ಪಕ್ಷೇತರರು ಇಬ್ಬರು ಹಾಗೂ ಒಬ್ಬ ಜೆಡಿಎಸ್ ಸದಸ್ಯರು ಸೇರಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರಿಗೆ ಬೆಂಬಲ ವ್ಯಕ್ತಪಡಿಸಿದ್ದೀರಿ. ಅಭಿವೃದ್ಧಿ ವಿಚಾರದಲ್ಲಿ ಪಕ್ಷಾತೀತವಾಗಿ ಕೆಲಸ ಮಾಡಿ ಎಂದರು.

ಹರಪನಹಳ್ಳಿಯಲ್ಲಿ ಕೇಂದ್ರೀಯ ವಿದ್ಯಾಲಯ ಹಾಗೂ ಕೇಂದ್ರದ ಅನುದಾನಗಳನ್ನು ತರಲು ಶ್ರಮಿಸುತ್ತೇನೆ. ತಾಲ್ಲೂಕಿನ ಉಚ್ಚಂಗಿ ದುರ್ಗದ ಸಮಗ್ರ ಅಭಿವೃದ್ಧಿಗೆ ಹಾಗೂ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮಾಡಲು ಶ್ರಮಿಸುತ್ತೇವೆ ಎಂದರು.

ಶಾ ಸ ಕ ರಾ ದ (3ನೇ ಪುಟಕ್ಕೆ)

# ಹೆಚ್ಚಿನ ಅನುದಾನ ತಂದು ಹರಿಹರ ಅಭಿವೃದ್ಧಿ

## ದುಡಾ ಶಾಖಾ ಕಚೇರಿ ಉದ್ಘಾಟಿಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಭರವಸೆ

ಹರಿಹರ, ನ.11- ಜಿಲ್ಲಾ ಉಸ್ತುವಾರಿ ಸಚಿವರ ಜೊತೆ ಚರ್ಚಿಸಿ ಹಿಂದುಳಿದಿರುವ ಹರಿಹರ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ತರುವ ಮೂಲಕ ಅಭಿವೃದ್ಧಿ ಪಡಿಸಲಾಗುವುದು ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ನಗರಸಭೆ ಆವರಣದಲ್ಲಿ ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಶಾಖಾ ಕಚೇರಿ ಉದ್ಘಾಟಿಸಿ ಅವರು ಮಾತನಾಡಿದರು.

ಚುನಾವಣಾ ಪ್ರಚಾರದ ವೇಳೆ ಇಲ್ಲಿನ ಜನರು ದುಡಾ ಶಾಖಾ ಕಚೇರಿ ಆರಂಭಿಸುವಂತೆ ಮನವಿ ಮಾಡಿದ್ದರು. ಅಂದು ನೀಡಿದ ಭರವಸೆ ಮೇರೆಗೆ ಇಂದು ಕಚೇರಿ ಆರಂಭಿಸಲಾಗಿದೆ ಎಂದರು.

ಜನರ ಸಮಸ್ಯೆಗಳಿಗೆ ಪರಿಹಾರ ನೀಡುವಂತಾದಾಗ ಮಾತ್ರ ಇಲ್ಲಿ ಕಚೇರಿ ಆರಂಭಿಸಿದ್ದಕ್ಕೂ ಸಾರ್ಥಕವಾಗುತ್ತದೆ. ದುಡಾ ಅಧ್ಯಕ್ಷರು ಹಾಗೂ ಸದಸ್ಯರು ಜನರ ಸಮಸ್ಯೆಗಳಿಗೆ ಸರಿಯಾದ ರೀತಿ ಸ್ಪಂದಿಸಬೇಕು ಎಂದು ಸಲಹೆ ನೀಡಿದರು.

ಹರಿಹರ ನಗರದಲ್ಲಿ ಇರುವಂತಹ ಪಾರ್ಕ್ ಅಭಿವೃದ್ಧಿ, ಶಾಶ್ವತ ಕುಡಿಯುವ ನೀರು ಶೇಖರಣಾ ಘಟಕ ಸ್ಥಾಪನೆ. ರಸ್ತೆ ದುರಸ್ತಿ ಸಮಸ್ಯೆಗಳ ಬಗ್ಗೆ ನಗರಸಭೆ ಅಧ್ಯಕ್ಷರಾದ ಕವಿತ ನಮ್ಮ ಗಮನಕ್ಕೆ ತಂದಿದ್ದಾರೆ ಎಂದ ಸಂಸದರು, ಆದ್ಯತೆ ಮೇರೆಗೆ



ಸಮಸ್ಯೆಗಳನ್ನು ಬಗೆಹರಿಸುವುದಾಗಿ ಹೇಳಿದರು.

ಶಾಸಕ ಬಿ. ಪಿ. ಹರೀಶ್ ಮಾತನಾಡಿ, ಹರಿಹರ ನಗರದಲ್ಲಿ ಶೇ.70ರಷ್ಟು ಬಡಾವಣೆಗಳು ಲೇ ಔಟ್ ಪ್ಲಾನ್ ಪ್ರಕಾರ ಇಲ್ಲ. ಇಲ್ಲಿನ ಜನರು ಸಾಕಷ್ಟು ಸಮಸ್ಯೆಗಳಲ್ಲಿ ಮುಳುಗಿದ್ದಾರೆ. ಅವುಗಳನ್ನು ಹೇಗೆ ಬಗೆಹರಿಸುತ್ತಾರೆ ಎಂಬುದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ ಎಂದರು.

ನಗರದಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮತಿ ಪಡೆಯದೆ, ಕಾನೂನು ಉಲ್ಲಂಘಿಸಿ ಬಡಾವಣೆ ನಿರ್ಮಿಸಿದ್ದಾರೆ. ದೇಶದಲ್ಲಿ ಎಲ್ಲಿಯೂ ಪ್ರಾಧಿಕಾರದ ಅನುಮತಿ ಇಲ್ಲದೆ ಬ್ಯಾಂಕ್‌ನವರು ಸಾಲ ನೀಡುವುದಿಲ್ಲ. ಆದರೆ ಇಲ್ಲಿನ ರಾಷ್ಟ್ರೀಕೃತ ಬ್ಯಾಂಕುಗಳು ಸಾಲ ನೀಡುತ್ತಿರುವುದು ವಿಚಿತ್ರವಾಗಿದೆ ಎಂದರು.

ರಾಜ ಕಾಲುವೆ ಕಾಮಗಾರಿ ವೀಕ್ಷಣೆ ವೇಳೆ ಶಾಸಕರು ಹಾಗೂ ಜೆಡಿಎಸ್ ಪಕ್ಷದವರು ಸಹಕಾರ ನೀಡುತ್ತಿಲ್ಲ ಎಂದು ಸಂಸದರು ಆರೋಪಿಸಿದ್ದಾರೆ. ಆದರೆ ರಾಜ ಕಾಲುವೆ ನಿರ್ಮಾಣ ಕಾಮಗಾರಿ 2022ರ ಡಿಸೆಂಬರ್ ತಿಂಗಳಲ್ಲಿ ಬಿಜೆಪಿ ಸರ್ಕಾರ ಬಿಡುಗಡೆ ಮಾಡಿದ್ದ ಅನುದಾನದಿಂದಲೇ ನಡೆಯುತ್ತಿದೆ. ನಾವು ಅಭಿವೃದ್ಧಿ ವಿಚಾರದಲ್ಲಿ ಎಂದೂ ಅಸಹಕಾರ ತೋರಿಲ್ಲ ಎಂದು ಸ್ಪಷ್ಟಪಡಿಸಿದರು.

ತಾ ಲ್ಲೂ ಕಿ ನ (2ನೇ ಪುಟಕ್ಕೆ)

# ಸಾಹುಕಾರನನ್ನು ಮೆಚ್ಚಿಸಿಕೊಂಡ್ರೆ ಆಯ್ತಾ?

ಹರಿಹರ, ನ.11- ಬಿಜೆಪಿ ಶಾಸಕ ಬಿ.ಪಿ.ಹರೀಶ್, ನಗರಸಭೆ ಪೌರಾಯುಕ್ತರನ್ನು ಏಕವಚನದಲ್ಲಿ ನಿಂದಿಸಿದ ಘಟನೆ ನಡೆಯಿತು.

ಸೋಮವಾರ ಬೆಳಿಗ್ಗೆ 11 ಕ್ಕೆ ನಿಗದಿಯಾಗಿದ್ದ 'ದುಡಾ' ಶಾಖಾ ಕಚೇರಿ ಉದ್ಘಾಟನೆ ಕಾರ್ಯಕ್ರಮಕ್ಕೆ ಶಾಸಕ ಬಿ.ಪಿ. ಹರೀಶ್ ಅವರನ್ನು ನಗರಸಭೆ ಪೌರಾಯುಕ್ತರು ಶಿಷ್ಟಾಚಾರದ ಪ್ರಕಾರ ಆಹ್ವಾನ ನೀಡಿರಲಿಲ್ಲ. ಇದರಿಂದ ಕುಪಿತಗೊಂಡ ಶಾಸಕರು, ಕಾರ್ಯಕ್ರಮದ ಸ್ಥಳಕ್ಕೆ ಆಗಮಿಸಿ, ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದರು. ಪೌರಾಯುಕ್ತರನ್ನು ಏಕವಚನದಲ್ಲಿ ತರಾಟೆಗೆ ತೆಗೆದುಕೊಂಡರು.

**ಪೌರಾಯುಕ್ತರನ್ನು ತರಾಟೆಗೆ ತೆಗೆದುಕೊಂಡ ಶಾಸಕ ಹರೀಶ್**

'ಸಾಹುಕಾರನನ್ನು (ಸಚಿವ ಎಸ್.ಎಸ್. ಮಲ್ಲಿಕಾರ್ಜುನ್) ಮೆಚ್ಚಿಸಿಕೊಂಡರೆ ಆಯ್ತು. ಪ್ರತಿಯೊಂದಕ್ಕೂ ಅಧ್ಯಕ್ಷರು ಫೋನ್ ಮಾಡ್ತಾರೆ. ನೀನೇನು ಮಾಡಿದ್ದೀಯಾ? ಮುಚ್ಕಂಡಿರು. ಮಾಡಬಾರ್ದು ಮಾಡಿ ಸರಿಯಾಗಿ ಮಾತಾಡು ಅಂತೀಯಾ? ಸರ್ಕಾರಿ ಅಧಿಕಾರಿಯಾಗಿ ನೀನು ತಿಳಿದುಕೋಬೇಕು ಏನು ಮಾಡಬೇಕು ಅಂತ. ಅವರ ಸೇವೆ ಮಾಡೋಕೆ ಬಂದೀಯಾ ಇಲ್ಲಿಗೆ? ಏನು ಆ ಕಡೆ ನೋಡ್ತೀಯಾ? ನಾಚಿಕೆ ಆಗಬೇಕು ಇವನಿಗೆ, ಥೂ ಮುಖ ತೋರಿಸಬೇಡ ಹೋಗು ಆಕಡೆ...' ಎಂದು ಶಾಸಕ ಹರೀಶ್ ಪೌರಾಯುಕ್ತರ ಮೇಲೆ ಕಿಡಿಕಾರಿದರು.

# ಸಂತೃಪ್ತಿಗಿಂತ ಮಿಗಿಲಾದ ಸಂಪತ್ತಿಲ್ಲ ರಂಭಾಪುರಿ ಜಗದ್ಗುರುಗಳ ಪ್ರತಿಪಾದನೆ



ಭದ್ರಾವತಿ, ನ. 11 - ಮನುಷ್ಯನ ಮನಸ್ಸು ಸಿರಿವಂತವಾದರೆ ಸಂಪತ್ತು ಇಲ್ಲದಿದ್ದರೂ ನಾವು ಸಿರಿವಂತರೆ. ಮನಸ್ಸೇ ಬಡವಾಗಿದ್ದರೆ ನಮ್ಮಲ್ಲಿ ಸಂಪತ್ತು ಇದ್ದರೂ ನಾವು ಬಡವರೇ. ಸಂತೃಪ್ತಿಗಿಂತ ಶ್ರೇಷ್ಠವಾದ ಸಂಪತ್ತಿಲ್ಲವೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ನಗರದ ಸಹ್ಯಾದ್ರಿ ಬಡಾವಣೆಯಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಆಸೆ ಕಳೆದುಕೊಂಡು ಬದುಕಬಹುದು. ಆದರೆ ಆಸಕ್ತಿ ಕಳೆದುಕೊಂಡು ಬದುಕಬಾರದು. ಆಡುವ ಮಾತುಗಳಿಗೆ ಕೊಲ್ಲುವ ಮತ್ತು ಕಾಪಾಡುವ ಸಾಮರ್ಥ್ಯ ಎರಡೂ ಇದೆ. ಮಾತುಗಳಲ್ಲಿ ಕರುಣೆ ಹಾಗೂ ನೈಜತೆಯಿದ್ದರೆ ಬದುಕು ಬಲಗೊಳ್ಳುತ್ತದೆ. ಹಣವನ್ನು ಇವತ್ತಲ್ಲ ನಾಳೆಯಾದರೂ ಸಂಪಾದಿಸಬಹುದು. ಆದರೆ ಜೊತೆಗಿರುವ ವ್ಯಕ್ತಿಯನ್ನು ಕಳೆದುಕೊಳ್ಳಬಾರದು. ಸಮಯ, ಸ್ನೇಹ, ಆರೋಗ್ಯ ಇವುಗಳಿಗೆ ಬೆಲೆ ಕಟ್ಟಲಾಗದು. ಜೀವನದ ಕೆಟ್ಟ ಘಟನೆಗಳನ್ನು ಮರೆತು ಬಿಡಬೇಕು. ಆದರೆ ಅದರಿಂದ ಕಲಿತ ಪಾಠಗಳನ್ನು ಯಾವಾಗಲೂ ಮರೆಯಬಾರದು. ಸಾಸಿವೆಯಷ್ಟು ಸುಖಕ್ಕೆ ಸಾಗರದಷ್ಟು ಕಷ್ಟ ಬಿಟ್ಟಿದ್ದಲ್ಲ. ಸುಖ-ದು:ಖಗಳಲ್ಲಿ ಸಮನಾಗಿ ಬಾಳುವುದೇ ಮನುಷ್ಯನ ಗುರಿಯಾಗಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಮೌಲ್ಯಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ದೇವರು ಮತ್ತು ಶ್ರೀ ಗುರುವನ್ನು ಯಾವತ್ತಿಗೂ ಮರೆಯಬಾರದೆಂದರು.

ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು.

ಕೂಡ್ಲಿಗೆರೆ ಹಾಲೇಶ್, ಬಿ.ಕೆ. ಜಗನ್ನಾಥ ಹಾಗೂ ವೀರಗಾಸೆ ತಂಡದವರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಚನ್ನಗಿರಿಯ ಡಾ. ಕೇದಾರ ಶಿವಶಾಂತವೀರ ಶಿವಾಚಾರ್ಯರಿಂದ ಪ್ರಾರ್ಥನೆ ಜರುಗಿತು. ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು ನಿರೂಪಿಸಿದರು.

ಮನು ಸ್ವಾಗತಿಸಿದರು. ಸ್ವಾಮಿ ವಂದಿಸಿದರು. ಶಿವಮೊಗ್ಗದ ಶಾಂತಾ ಆನಂದ ಇವರಿಂದ ಸುಗಮ ಸಂಗೀತ ಕಾರ್ಯಕ್ರಮ ಜರುಗಿತು.

# ಸಮಾಜ ಸಂಘಟನೆಗೆ ಬದುಕನ್ನೇ ಮೀಸಲಿಟ್ಟಿದ್ದ ಹಾನಗಲ್ಲ : ಶ್ರೀ ಕುಮಾರ ಶಿವಯೋಗಿಗಳು



**ರಾಣೇಬೆನ್ನೂರಿನ ಕಾರ್ಯಕ್ರಮದಲ್ಲಿ ಆವರಗೊಳ್ಳದ ಶ್ರೀಗಳು**

ರಾಣೇಬೆನ್ನೂರು,ನ.11- ಸಮಾಜದ ಕಣ್ಣೀರು ಒರೆಸಿ ಸುಂದರ ಹಾಗೂ ಸದೃಢವಾದ ಸಮಾಜ ನಿರ್ಮಿಸಲು ತಮ್ಮ ಜೀವವನ್ನೇ ಶ್ರೀಗಂಧದಂತೆ ತೇಯ್ದು ಸುಗಂಧ ಬೀರಿದ ಹಾನಗಲ್ಲ ಶ್ರೀ ಕುಮಾರ ಶಿವಯೋಗಿಗಳು ಅಖಿಲ ಭಾರತ ವೀರಶೈವ ಮಹಾಸಭಾ ಸಂಘಟಿಸಿದ್ದರು ಎಂದು ಆವರಗೊಳ್ಳದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ಶ್ಲಾಘಿಸಿದರು.

ಇಲ್ಲಿನ ಆದಿಶಕ್ತಿ ದೇವಸ್ಥಾನದ ಸಭಾ ಭವನದಲ್ಲಿ ನಡೆದ ವೀರಶೈವ ಮಹಾಸಭಾದ ತಾಲ್ಲೂಕು ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ ಶಿವಯೋಗಿಗಳ 157ನೇ ಜಯಂತಿ ಕಾರ್ಯಕ್ರಮದ ಸಾನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಸುಂದರ ಸಮಾಜ ಕಟ್ಟುವ ಧ್ಯೇಯದ ಶಿವಯೋಗಿ ಗಳು ಬಾಗಲಕೋಟೆ ಜಿಲ್ಲೆಯಲ್ಲಿ ಶಿವಯೋಗ ಮಂದಿರವನ್ನು ಸ್ಥಾಪಿಸಿ, ಸಮಾಜದ ಹಿತಚಿಂತನೆ ಬಯಸುವ ಮಠಾಧೀಶರಿಗೆ ಅಲ್ಲಿ ತರಬೇತಿ ನೀಡುವ ಮೂಲಕ ಸಮಾಜ ಸಂಘಟನೆಗೆ ತಮ್ಮ ಬದುಕು ಮೀಸಲಿರಿಸಿದ್ದರು ಎಂದು ಓಂಕಾರ ಶ್ರೀಗಳು ನುಡಿದರು.

ಜಂಗಮ ಕ್ಷೇತ್ರ ಲಿಂಗನಾಯ್ಕನಹಳ್ಳಿ ಚನ್ನವೀರ ಸ್ವಾಮೀಜಿ, ದೊಡ್ಡಪೇಟೆ ವಿರಕ್ತ ಮಠದ ಗುರುಬಸವ ಶ್ರೀ ಗಳು, ಮಹಾಸಭೆ ಜಿಲ್ಲಾಧ್ಯಕ್ಷ ಎಂ.ಎಸ್.ಕೋರಿಶೆಟ್ರು, ತಾಲ್ಲೂಕು ಘಟಕದ ಅಧ್ಯಕ್ಷ ಕೆ.ಎಂ. ಕೋರಧಾನ್ಯಮಠ, ಖಜಾಂಚಿ ಮಲ್ಲೇಶಣ್ಣ ಅರಕೇರಿ, ಮಾಜಿ ಅಧ್ಯಕ್ಷ ಕೆ.ಎಂ.ಬಂದಮ್ಮನವರ ಮತ್ತಿತರರಿದ್ದರು.

ಮಹಿಳಾ ಘಟಕದ ಪುಷ್ಪಾ ಬದಾಮಿ, ಸರೋಜ ಹೂಲಿಹಳ್ಳಿ, ವಿನಯ ಪಾಟೀಲ, ಕವಿತಾ ಕೋತಂಬ್ರಿ, ಲೀಲಾ ಪಟ್ಟಣಶೆಟ್ಟಿ ಮತ್ತು ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಮಲೇಬೆನ್ನೂರಿನಲ್ಲಿಂದು ವಿವಿಧ ಕಾಮಗಾರಿಗಳಿಗೆ ಚಾಲನೆ

ಪುರಸಭೆ ಆವರಣದಲ್ಲಿ ಇಂದು ಬೆಳಗ್ಗೆ 11 ಗಂಟೆಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಭಜಕ್ಕನವರ್ ತಿಳಿಸಿದ್ದಾರೆ. ಪುರಸಭೆ ಪ್ರಭಾರಿ ಅಧ್ಯಕ್ಷೆ ನಫ್ಸಿಯಾ ಬಾನು ಚಮನ್‌ಷಾ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಶಾಸಕ ಬಿ.ಪಿ. ಹರೀಶ್, ಜಿಲ್ಲಾ ಉಸ್ತುವಾರು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಸೇರಿದಂತೆ ಇನ್ನೂ ಅನೇಕ ಭಾಗವಹಿಸಿಲಿದ್ದಾರೆ.

## ಬ್ಯಾಡಗಿಯಲ್ಲಿ ಕೊಪ್ಪಳ ಶ್ರೀ ಪ್ರವಚನ

ರಾಣೇಬೆನ್ನೂರು, ನ.11- ಬ್ಯಾಡಗಿಯ ಎಸ್.ಜೆ.ಜೆ.ಎಂ ಕಾಲೇಜು ಕ್ರೀಡಾಂಗಣದಲ್ಲಿ ನಾಡಿದ್ದು ದಿನಾಂಕ 13 ರಿಂದ 24 ರವರೆಗೆ ಪ್ರತಿದಿನ ಸಂಜೆ 6 ರಿಂದ 7 ಗಂಟೆಯವರೆಗೆ ಕೊಪ್ಪಳ ಗವಿಸಿದ್ದೇಶ್ವರ ಮಠದ ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿ ಪ್ರವಚನ ನಡೆಸುವರು.

# ರಾಣೇಬೆನ್ನೂರು ಶನೈಶ್ಚರ ಮಠದಲ್ಲಿ ನಾಡಿದ್ದು ಅತಿರುದ್ರ ಮಹಾಯಾಗ

ರಾಣೇಬೆನ್ನೂರು, ನ.11- ಇಲ್ಲಿನ ಗಂಗಾಪುರ ರಸ್ತೆಯ ಶನೈಶ್ಚರ ಮಂದಿರದಲ್ಲಿ ಸ್ವಾಮಿಯ ಬಯಲು ಆಲಯದ ದ್ವಾದಶ ಪ್ರತಿಷ್ಠಾನ



ಮಹೋತ್ಸವದ ನಿಮಿತ್ಯ ಪೀಠಾಧಿಪತಿ ಹಿರೇಮಠದ ಶ್ರೀ ಶಿವಯೋಗಿ ಶಿವಾಚಾರ್ಯ ಸ್ವಾಮಿಗಳ ನೇತೃತ್ವದಲ್ಲಿ ಇದೇ ದಿನಾಂಕ 14 ರಿಂದ 30ರವರೆಗೆ ಸಂಕಲ್ಪಯುಕ್ತ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಅಷ್ಟಬಂಧ ಬ್ರಹ್ಮ ಕಲಶೋತ್ಸವ, ವಿಶ್ವ ಶಾಂತಿ ಹಾಗೂ ಪ್ರಾಚೀನ ಧರ್ಮ ಪರಂಪರೆಯ ಸಂವರ್ಧನೆಗೆ ಅತಿರುದ್ರ ಮಹಾಯಾಗ, ಲಕ್ಷ ರುದ್ರಾಕ್ಷಿ ಅರ್ಚನೆ, ಕೋಟಿ ಬಿಲ್ವಾರ್ಚನೆ, ಕೋಟಿ ಪಂಚಾಕ್ಷರಿ ಮಂತ್ರ ಜಪಯಜ್ಞ, ಭದ್ರಕಾಳಿ ಸಮೇತ ಶ್ರೀ ವೀರಭದ್ರಸ್ವಾಮಿ ಕಲ್ಯಾಣ ಮಹೋತ್ಸವ, ರೈತ ಚೈತನ್ಯ ಜ್ಯೋತಿ ಯಾತ್ರೆ, ಮಾತೃ ಸಂಗಮ ಮುಂತಾದ ಕಾರ್ಯಕ್ರಮಗಳು ಜರುಗುತ್ತವೆ.

ಮನುಕುಲ ಸದ್ಭಾವನಾ ರಾಷ್ಟ್ರೀಯ ಪ್ರಶಸ್ತಿ ಪ್ರದಾನ, ತಿಲ ಲಕ್ಷ ದೀಪೋತ್ಸವ ಮುಂತಾಗಿ ಶ್ರೀ ಮಠದಲ್ಲಿ ಲೋಕ ಕಲ್ಯಾಣಾರ್ಥವಾಗಿ ಪ್ರತಿವರ್ಷವೂ ನಡೆಯುವ ಈ ಸಮಾರಂಭಕ್ಕೆ ಜಗದ್ಗುರುಗಳು, ನಾಡಿನ ಹರಗುರು ಚರ ಮೂರ್ತಿಗಳು, ಜಿಲ್ಲೆಯ ಹಾಗೂ ಹೊರ ಜಿಲ್ಲೆಗಳ ಜನಪ್ರತಿನಿಧಿಗಳು ಭಾಗವಹಿಸುತ್ತಿದ್ದಾರೆ ಎಂದು ಶ್ರೀ ಗಳು ಹೇಳಿದರು.

## ನೇರ ತೆರಿಗೆ ಸಂಗ್ರಹ ಶೇ.15.41ರಷ್ಟು ಹೆಚ್ಚಳ

ನವದೆಹಲಿ, ನ. 11 – ಏಪ್ರಿಲ್ 1ರಿಂದ ನವೆಂಬರ್ 10ರ ನಡುವೆ ನೇರ ತೆರಿಗೆ ಸಂಗ್ರಹ ಶೇ.15.41ರಷ್ಟು ಹೆಚ್ಚಾಗಿ 12.11 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ. ಕಾರ್ಪೊರೇಟ್ ತೆರಿಗೆ ಪ್ರಮಾಣ 5.10 ಲಕ್ಷ ಕೋಟಿ ರೂ. ಹಾಗೂ ಕಾರ್ಪೊರೇಟೇತರ ತೆರಿಗೆ ಪ್ರಮಾಣ 6.62 ಲಕ್ಷ ಕೋಟಿ ರೂ. ಆಗಿದೆ. ಇತರೆ ತೆರಿಗೆ ಪ್ರಮಾಣ 35,923 ಕೋಟಿ ರೂ.ಗಳಷ್ಟಿದೆ.

# ಗೆಲ್ಲುವುದು ಮುಖ್ಯವಲ್ಲ, ಭಾಗವಹಿಸುವುದು ಮುಖ್ಯ

ದಾವಣಗೆರೆ, ನ. 11- ಕ್ರೀಡೆಯಲ್ಲಿ ಗೆಲ್ಲುವುದು ಮುಖ್ಯವಲ್ಲ ಭಾಗವಹಿಸುವುದು ಮುಖ್ಯ. ಇಂದು ಕ್ರೀಡೆಗಳಲ್ಲಿ ಭಾಗವಹಿಸುವವರ ಸಂಖ್ಯೆ ಕಡಿಮೆಯಾಗುತ್ತದೆ. ಮೊಬೈಲ್ ಬಳಕೆ ಹೆಚ್ಚಾಗಿ ದೈಹಿಕ ಸಾಮರ್ಥ್ಯವನ್ನು ಯುವ ಪೀಳಿಗೆ ಕಳೆದುಕೊಳ್ಳುತ್ತಿದೆ ಎಂದು ಹರಿಹರದ ಹಿರಿಯ ಕಬಡ್ಡಿ ಕ್ರೀಡಾಪಟು ನಿಜಗುಣ ಹೇಳಿದರು.

ನಗರದ ಎ.ಆರ್.ಎಂ. ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ, ಐ.ಕ್ಯೂ.ಎ.ಸಿ. ಘಟಕ ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಸಹಯೋಗದಲ್ಲಿ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಈಜುಕೊಳ ಹರಿಹರದಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯಾವುದೇ ಕ್ರೀಡೆಯಲ್ಲಿ ಭಾಗವಹಿಸಿದರೂ ದೈಹಿಕವಾಗಿ ಸದೃಢರಾಗುತ್ತಾರೆ. ಆದ್ದರಿಂದ ಇವತ್ತಿನ ಮಕ್ಕಳು ಕ್ರೀಡೆಯಾಡಲು ಮುಂದೆ ಬರಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪಾಂಶುಪಾಲ ಅಣ್ಣಯ್ಯ ಎಂ.ಡಿ. ವಹಿಸಿದ್ದರು. ಕಾಡಜ್ಜಿ ಶಿವಪ್ಪ, ದೈಹಿಕ ಶಿಕ್ಷಣ ನಿರ್ದೇಶಕರಾದ ಬಸವ ರಾಜ ವಿ. ದಮ್ಮಳ್ಳಿ, ಡಾ. ವೀರಪ್ಪ, ಡಾ. ಶಿವಶಂಕರ ರೆಡ್ಡಿ, ಜಾನ್ ಫರ್ನಾಂಡೀಸ್, ಡಾ. ರೇಖಾ, ಡಾ. ಚಂದ್ರಶೇಖರ್, ಸುನೀತ ಹೆಚ್. ಇ. ಮಂಜುನಾಥ ಸಜ್ಜನ್, ಕರುಣಾಕರ್ ಐ.ಕ್ಯೂ.ಎ.ಸಿ ಸಂಚಾಲಕ ಅಂಜಿನಪ್ಪ ಡಿ. ಭಾಗವಹಿಸಿದ್ದರು.





# ಮಲೇಬೆನ್ನೂರಿನಲ್ಲಿ ಒನಕೆ ಓಬವ್ವ ಜಯಂತಿ

ಮಲೇಬೆನ್ನೂರು ನ. 11 - ಇಲ್ಲಿನ ಪುರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ವೀರ ವನಿತೆ ಒನಕೆ ಓಬವ್ವನವರ ಜಯಂತಿಯನ್ನು ಆಚರಿಸಲಾಯಿತು. ಪುರಸಭೆ ಪ್ರಭಾರಿ ಅಧ್ಯಕ್ಷೆ ನಫ್ಸಿಯಾ ಬಾನು ಚಮನ್ ಷಾ, ಸ್ಥಾಯಿ ಸಮಿತಿ ಅಧ್ಯಕ್ಷ ಬಿ ಮಂಜುನಾಥ್, ಮುಖ್ಯಾಧಿಕಾರಿ ಭಜಕ್ಕನವರ್ ಅವರು ಒನಕೆ ಓಬವ್ವನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿದರು.

ಸದಸ್ಯರಾದ ಗೌಡ್ರ ಮಂಜಣ್ಣ, ಕೆ. ಜಿ. ಲೋಕೇಶ್, ಖಲೀಲ್, ನಯಾಜ್, ಭೋವಿ ಶಿವು, ದಾದಾಪೀರ್, ಟಿ. ಹನುಮಂತಪ್ಪ, ಷಾ ಅಬ್ರಾರ್, ಸಾಬೀರ್ ಅಲಿ, ಕೆ.ಪಿ. ಗಂಗಾಧರ್, ಪಿ. ಆರ್. ರಾಜು, ಓ. ಜಿ. ಕುಮಾರ್, ಯೂಸುಫ್, ಅಧಿಕಾರಿಗಳಾದ ಉಮೇಶ್, ನವೀನ್, ಶಿವರಾಜ್, ಮಂಜುನಾಥ್ ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ನಾಡ ಕಛೇರಿಯಲ್ಲಿ ನಡೆದ ಜಯಂತಿ ಕಾರ್ಯಕ್ರಮದಲ್ಲಿ ವೀರ ವನಿತೆ ಒನಕೆ ಓಬವ್ವನವರ ಭಾವಚಿತ್ರಕ್ಕೆ ಉಪ ತಹಶೀಲ್ದಾರ್ ಆರ್. ರವಿ ಅವರು ಪುಷ್ಪಾರ್ಚನೆ ಮಾಡಿ ಅವರ ಹೋರಾಟವನ್ನು ಸ್ಮರಿಸಿದರು. ಗ್ರಾಮಲೆಕ್ಕಾಧಿಕಾರಿಗಳಾದ ಅಣ್ಣಪ್ಪ, ಷರೀಫ್ ಹಾಗೂ ನಾಡ ಕಛೇರಿ ಸಿಬ್ಬಂದಿ ವರ್ಗದವರು ಈ ವೇಳೆ ಹಾಜರಿದ್ದರು.

# ನಾಗರಿಕ ಬಂದೂಕು ತರಬೇತಿ ಶಿಬಿರ ಆರಂಭ



ದಾವಣಗೆರೆ, ನ.11- ನಗರದ ಜಿಲ್ಲಾ ಸಶ್ರಸ್ತ್ರ ಮೀಸಲು ಪಡೆ ಆವರಣದಲ್ಲಿ ನಾಗರಿಕ ಬಂದೂಕು ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭ ನಡೆಯಿತು.

ಸ್ವಾಗತ ಭಾಷಣ ಹಾಗೂ ಪ್ರಾಸ್ತಾವಿಕ ನುಡಿಯನ್ನು ಡಿ.ಎ.ಆರ್. ಪೊಲೀಸ್ ಉಪಾಧೀಕ್ಷಕ ಪಿ.ಬಿ. ಪ್ರಕಾಶ್ ನಡೆಸಿದರು. ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ. ಸಂತೋಷ್ ಅವರು ದೀಪ ಬೆಳಗಿಸಿ ಸಮಾರಂಭವನ್ನು ಉದ್ಘಾಟಿಸಿದರು.

ಅತಿಥಿಗಳಾಗಿ ನಗರ ಉಪವಿಭಾಗ ಪೊಲೀಸ್ ಉಪಾಧೀಕ್ಷಕ ಮಲ್ಲೇಶ್ ದೊಡ್ಡಮನಿ, ಡಿ.ಎ.ಆರ್. ಪೊಲೀಸ್ ನಿರೀಕ್ಷಕ ಹೆಚ್.ಬಿ. ಸೋ ಮ ಶೇ ಖ ರ್ ಉಪಸ್ಥಿತರಿದ್ದರು.

ಕಾ ರ್ಯ ಕ್ರ ಮ ದ ಲ್ಲಿ ಡಿ.ಎ.ಆರ್. ಸಿಬ್ಬಂದಿಗಳಾದ ಕೆ. ಪಿ. ಶರತ್, ಬಿ. ಎಸ್. ಪುಟ್ಟಪ್ಪ, ಟಿ. ಬಸವರಾಜ್, ಹೆಚ್. ವೇದಮೂರ್ತಿ, ಹನುಮಂತಪ್ಪ, ವೀರನಗೌಡ್ರು, ಆರ್. ಎಸ್.ಐ. ಮಹೇಶ್ ಪಾಟೀಲ್. ಶಿಬಿರಾರ್ಥಿಗಳಾದ ಎಂ. ಜಿ. ಶ್ರೀಕಾಂತ್, ಸಿ.ಕೆ. ರಂಗಪ್ಪ, ಚೇತನಾ ಶಿವಕುಮಾರ್, ಕೆ.ಎನ್. ಮಂಜುನಾಥ್ ಭಾಗವಹಿಸಿದ್ದರು.

## ಹೊನ್ನಾಳಿಗೆ ಇಂದು ನಿರ್ಮಲ ತುಂಗಭದ್ರಾ ಅಭಿಯಾನ

ನಿರ್ಮಲ ತುಂಗಭದ್ರಾ ಅಭಿಯಾನವು ಇಂದು ಬೆಳಿಗ್ಗೆ ನ್ಯಾಮತಿ ತಾಲ್ಲೂಕು ಚೀಲೂರು ಪ್ರವೇಶಿಸಲಿದೆ ಎಂದು ಅಭಿಯಾನದ ತಾಲ್ಲೂಕು ಕಾರ್ಯದರ್ಶಿ ವಾಸಪ್ಪ ತಿಳಿಸಿದ್ದಾರೆ.

ಚೀಲೂರು ನಂತರ ಗೋವಿನ ಕೋವಿಯಲ್ಲಿ ಜನ ಜಾಗೃತಿ ಸಭೆ ನಡೆಯಲಿದೆ. ನಂತರ ಹೊನ್ನಾಳಿ ತಾಲ್ಲೂಕು ಹರಳಹಳ್ಳಿ, ದಿಡಗೂರು ಮಾರ್ಗವಾಗಿ ಪಟ್ಟಣದ ಟಿಬಿ ವೃತ್ತದಲ್ಲಿ ಸಮಾವೇಶಗೊಂಡು ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಸಾರ್ವಜನಿಕರ ಜಾಗೃತಿಯೊಂದಿಗೆ ಅರಿವು ಮೂಡಿಸಿ ರಾತ್ರಿ ಹಿರೇಕಲ್ಮಠದಲ್ಲಿ ಪ್ರವಾಸದ ತಂಡವು ವಿಶ್ರಾಂತಿ ಪಡೆಯಲಿದೆ ಎಂದು ಅವರು ಹೇಳಿದ್ದಾರೆ.

ನಾಳೆ ಬುಧವಾರ ಮಠದಿಂದ ತುಂಗಭದ್ರಾ ನದಿ ಸೇತುವೆ ಮಾರ್ಗವಾಗಿ ಗೊಲ್ಲರಹಳ್ಳಿ, ಬೇಲಿಮಲ್ಲೂರು, ಕೋಟೆಮಲ್ಲೂರು, ಚಿಕ್ಕಗೋಣಿಗೆರೆ, ಹಿರೇಗೋಣಿಗೆರೆ, ಹರಗನಹಳ್ಳಿ ಮಾರ್ಗವಾಗಿ ಸಂಚರಿಸಿ ಕೋಣನತಲೆ ಮಠದಲ್ಲಿ ತಂಡವು ವಿಶ್ರಾಂತಿ ಪಡೆಯಲಿದೆ. ಬುಧವಾರ ಹರಿಹರ ತಾಲ್ಲೂಕಿಗೆ ಅಭಿಯಾನವು ಮುಂದುವರೆಯಲಿದೆ.

## ನಗರದಲ್ಲಿ ಇಂದು ಕುರಿ-ಮೇಕೆ ಸಾಕಾಣಿಕೆ ತರಬೇತಿ

ಪಶುಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರದಲ್ಲಿ ರೈತರಿಗೆ ಪಶು ಸಂಗೋ ಪನಾ ಚಟುವಟಿಕೆಗಳ ತರಬೇತಿ ಆಯೋಜಿಸಲಾಗಿದೆ. ಇಂದು ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಹಾಗೂ ಇದೇ ದಿನಾಂಕ 15 ಮತ್ತು 16ರಂದು ಕೋಳಿ ಸಾಕಾಣಿಕೆ ತರಬೇತಿ, ಇದೇ ದಿನಾಂಕ 29, 30ರಂದು ಆಧುನಿಕ ಹೈನುಗಾರಿಕೆ ತರಬೇತಿ ನಡೆಯಲಿದೆ. ಮಾಹಿತಿಗಾಗಿ 08192-233787 ಸಂಪರ್ಕಿಸಿ.

## ಅಂತರರಾಜ್ಯ ಮಂಡಳಿ ಪುನರ್‌ರಚನೆ

ನವದೆಹಲಿ, ನ. 11 – ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಅಂತರರಾಜ್ಯ ಮಂಡಳಿಯನ್ನು ಪುನರ್‌ರಚಿಸಲಾಗಿದ್ದು, ಇದರಲ್ಲಿ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳು, ಒಂಭತ್ತು ಕೇಂದ್ರ ಸಚಿವರನ್ನು ಸದಸ್ಯರಾಗಿ ಹಾಗೂ 13 ಕೇಂದ್ರ ಸಚಿವರನ್ನು ಶಾಶ್ವತ ಆಹ್ವಾನಿತರಾಗಿ ನೇಮಿಸಲಾಗಿದೆ.

ಈ ಬಗ್ಗೆ ಕೇಂದ್ರ ಗೃಹ ಸಚಿವಾಲಯ ಅಧಿಸೂಚನೆ ಹೊರಡಿಸಿದೆ. ಸಮಿತಿಯಲ್ಲಿ ಸೇರ್ಪಡೆಯಾಗಿರುವವರಲ್ಲಿ ಜೆಡಿಯು, ಜೆಡಿಎಸ್, ಟಿಡಿಪಿ ಹಾಗೂ ಎಲ್‌ಜೆಪಿ ಸಚಿವರೂ ಇದ್ದಾರೆ.

# ಕುಟುಂಬ ರಾಜಕಾರಣವೇ ಪ್ರತಿಷ್ಠೆ

**(1ನೇ ಪುಟದಿಂದ)** ಲಾಡ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಡೂರು ಉಳಿಸಿಕೊಳ್ಳುವುದು ಪ್ರತಿಷ್ಠೆಯಾಗಿದೆ. ಇದೇ ಕಾರಣಕ್ಕಾಗಿ ಮುಖ್ಯಮಂತ್ರಿ ಅವರು ಕ್ಷೇತ್ರದಲ್ಲಿ ಐದು ದಿನ ಬಿಡಾರ ಹೂಡಿ ಪ್ರಚಾರ ಕೈಗೊಂಡಿದ್ದಾರೆ.

ಅಷ್ಟೇ ಪ್ರತಿಷ್ಠೆಯಾಗಿ ತೆಗೆದುಕೊಂಡಿರುವ ಬಿಜೆಪಿ, ಕಾಂಗ್ರೆಸ್‌ನಿಂದ ಕ್ಷೇತ್ರ ಕಸಿದುಕೊಳ್ಳಲು ಮಾಜಿ ಮುಖ್ಯಮಂತ್ರಿ ಬಿ. ಎಸ್.ಯಡಿಯೂರಪ್ಪ ಸೇರಿದಂತೆ ದಿಗ್ಗಜ ನಾಯಕರುಗಳನ್ನು ಪ್ರಚಾರಕ್ಕಿಳಿಸಿದೆ. ಮೂರು ಕ್ಷೇತ್ರಗಳಲ್ಲಿ ಎಚ್.ಡಿ.ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ ಹಾಗೂ ಇ. ತುಕಾರಾಂ ಲೋಕಸಭೆಗೆ ಆಯ್ಕೆಗೊಂಡಿದ್ದರಿಂದ ಈ ಸ್ಥಾನಗಳು ತೆರವಾಗಿದ್ದು ಉಪಚುನಾವಣೆ ಎದುರಾಗಿದೆ.

ಪ್ರಚಾರಕ್ಕೆ ಕೊನೆಯ ದಿನದಂದು ಮೂರೂ ಕ್ಷೇತ್ರಗಳಲ್ಲೂ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಬೃಹತ್ ಬಹಿರಂಗ ಸಮಾವೇಶ ನಡೆಸಿ ಮತದಾರರ ಓಲೈಕೆಗೆ ಪ್ರಯತ್ನಿಸಿದವು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಂಪುಟ ಸಚಿವರು ಹಾಗೂ ಕಾಂಗ್ರೆಸ್‌ನ ಘಟಾನುಘಟಿಗಳೂ ಸೇರಿದಂತೆ ಇಡೀ ಸರ್ಕಾರ ಚನ್ನಪಟ್ಟಣದಲ್ಲೇ ಬಿಡಾರ ಹೂಡಿ ಮತದಾರರ ಒಲವಿಗೆ ಪ್ರಯತ್ನ ನಡೆಸಿದರು.

ಸರ್ಕಾರದ ವಿರುದ್ಧ ಬಹಿರಂಗ ಕದನಕ್ಕೆ ಇಳಿದಿರುವ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಈ ಕ್ಷೇತ್ರದಲ್ಲೇ ಬೃಹತ್ ಬಹಿರಂಗ ಸಭೆ ಮತ್ತು ಪಾದಯಾತ್ರೆ ನಡೆಸಿದರು. ಪ್ರಚಾರ ಕಾರ್ಯದಲ್ಲಿ ಹೆಚ್.ಡಿ.ದೇವೇಗೌಡ, ಹೆಚ್. ಡಿ.ಕುಮಾರಸ್ವಾಮಿ, ಆರ್.ಅಶೋಕ್, ಡಾ. ಅಶ್ವತ್ಥನಾರಾಯಣ ಸೇರಿದಂತೆ ಹಲವು ಮುಖಂಡರು ಪಾಲ್ಗೊಂಡಿದ್ದರು.

ಉಪಚುನಾವಣೆಯ ದಿನದಂದು ಮತದಾನಕ್ಕೆ ಅನುಕೂಲವಾಗುವಂತೆ ಮೂರೂ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಸರ್ಕಾರಿ ಹಾಗೂ ಸಾರ್ವಜನಿಕ ಸಂಸ್ಥೆಗಳಿಗೆ ರಜೆ ಘೋಷಿಸಲಾಗಿದೆ.

# ಅನುದಾನ ತಂದು ಹರಿಹರ ಅಭಿವೃದ್ಧಿ

**(1ನೇ ಪುಟದಿಂದ)** ಅಧಿಕಾರಿಗಳಿಗೆ ಸರ್ಕಾರ ಇದ್ದವರನ್ನು ಮೆಚ್ಚಿಸಿಕೊಂಡರೆ ಸಾಕು ಎಂಬ ಮನಸ್ಥಿತಿ ಇದೆ. ಪ್ರೋಟೋಕಾಲ್ ಮರೆತು ಆಹ್ವಾನ ಪತ್ರಿಕೆಯಲ್ಲಿ ಹೆಸರು ಹಾಕದ ವಿಚಾರವನ್ನು ಹಕ್ಕು ಚ್ಯುತಿ ಸಮಿತಿಯಲ್ಲಿ ತರುತ್ತೇನೆ ಎಂದು ಎಚ್ಚರಿಸಿದರು.

ನಗರಸಭೆ ಅಧ್ಯಕ್ಷೆ ಕವಿತಾ ಮಾರುತಿ ಮಾತನಾಡಿ, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರವು ಶೇ. 70- ದಾವಣಗೆರೆಗೆ, ಶೇ. 30 ರಷ್ಟು ಅನುದಾನ ಹರಿಹರ ನಗರಕ್ಕೆ ಎಂದು ಸರ್ಕಾರ ನಿರ್ದೇಶನ ನೀಡಿದೆ. ಅದರಂತೆ ನಗರದಲ್ಲಿ ಶೇ.30 ರ ಅನುದಾನ ದಿಂದ ಪಾರ್ಕ್, ರಸ್ತೆ, ಮುಂತಾದ ಅಭಿವೃದ್ಧಿ ಕೆಲಸಗಳಿಗೆ ದುಡಾ ಮುಂದಾಗುವಂತೆ ಹೇಳಿದರು.

ಈ ವೇಳೆ ಮಾಜಿ ಶಾಸಕ ಎಸ್. ರಾಮಪ್ಪ, ದುಡಾ ಆಯುಕ್ತರು ಮಾತನಾಡಿದರು.

ಸದಸ್ಯರಾದ ವಾಣಿ ಬಕ್ಕೇಶ್, ಜಬ್ಬಾರಸಾಬ್, ಜಾಕೀರ್, ನಗರಸಭೆ ಉಪಾಧ್ಯಕ್ಷ ಜಂಬಣ್ಣ ಗುತ್ತೂರು, ನಗರಸಭೆ ಸದಸ್ಯರಾದ ಎ. ವಾಮನಮೂರ್ತಿ, ಶಂಕರ್ ಖಟಾವ್ಕರ್, ಕೆ. ಜಿ. ಸಿದ್ದೇಶ್, ಆರ್.ಸಿ. ಜಾವೇದ್, ಅಶ್ವಿನಿ ಕೃಷ್ಣ, ಪಿ.ಎನ್. ವಿರುಪಾಕ್ಷಪ್ಪ, ಪಕ್ಕೀರಮ್ಮ ನಾಗರತ್ನ, ಹನುಮಂತಪ್ಪ, ಸುಮಿತ್ರಮ್ಮ, ಪಾರ್ವತಮ್ಮ ಉಷಾ ಮಂಜುನಾಥ್, ದಿನೇಶ್ ಬಾಬು, ದಾದಾ ಖಲಂದರ್, ಶಾಯಿನಾ ಬಾನು, ಲಕ್ಷ್ಮಿ ಮೋಹನ್, ಅಲೀಂ, ವಸಂತ್, ರಜನಿಕಾಂತ್, ಮುಖಂಡರಾದ ನಂದಿಗಾವಿ ಶ್ರೀನಿವಾಸ್, ಕೃಷ್ಣ ಸಾ ಭೂತೆ, ಗುತ್ತೂರು ಹಾಲೇಶ್ ಗೌಡ್ರು, ಟಿ.ಜೆ. ಮುರುಗೇಶಪ್ಪ, ಬಿ. ರೇವಣಸಿದ್ದಪ್ಪ, ಫೈರೋಜ್ ಆಹ್ಮದ್, ರೇವಣಸಿದ್ದಪ್ಪ ಅಮರಾವತಿ, ಸಿ.ಎನ್. ಹುಲುಗೇಶ್, ಅಜಿತ್ ಸಾವಂತ್, ದುಡಾ ಆಯುಕ್ತರು ಹಾಗೂ ಇತರರು ಹಾಜರಿದ್ದರು.

## ಹುಬ್ಬಳ್ಳಿ - ಬೆಂಗಳೂರು ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್ ರೈಲುಗಳ ಅವಧಿ ವಿಸ್ತರಣೆ

ದಾವಣಗೆರೆ, ನ.11- ಶ್ರೀ ಸಿದ್ಧಾರೂಢ ಸ್ವಾಮೀಜಿ ಹುಬ್ಬಳ್ಳಿ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಬೆಂಗಳೂರು ನಿಲ್ದಾಣಗಳ ನಡುವೆ ಪ್ರತಿದಿನ ಸಂಚರಿಸುವ ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್ ವಿಶೇಷ (ರೈಲು ಸಂಖ್ಯೆ 07339/07340) ರೈಲುಗಳ ಅವಧಿಯನ್ನು ಈಗಿರುವ ನಿಲುಗಡೆ ಮತ್ತು ಸಮಯದೊಂದಿಗೆ ವಿಸ್ತರಿಸಲು ನೈಋತ್ಯ ರೈಲ್ವೆ ನಿರ್ಧರಿಸಿದೆ.

ರೈಲು ಸಂಖ್ಯೆ 07339 ಎಸ್‌ಎಸ್‌ಎಸ್ ಹುಬ್ಬಳ್ಳಿ-ಕೆಎಸ್‌ಆರ್ ಬೆಂಗಳೂರು ಡೈಲಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ವಿಶೇಷ ರೈಲು ಸೇವೆ ಈ ಮೊದಲು ಡಿಸೆಂಬರ್ 31, 2024 ರವರೆಗೆ ಓಡಿಸಲು ನಿಗದಿಪಡಿಸಲಾಗಿತ್ತು. ಈಗ ಜನವರಿ 1, 2025 ರಿಂದ ಜೂನ್ 30, 2025 ರವರೆಗೆ ವಿಸ್ತರಿಸಲಾಗಿದೆ.

ರೈಲು ಸಂಖ್ಯೆ 07340 ಕೆಎಸ್‌ಆರ್ ಬೆಂಗಳೂರು - ಎಸ್‌ಎಸ್‌ಎಸ್ ಹುಬ್ಬಳ್ಳಿ ಡೈಲಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ವಿಶೇಷ ರೈಲು ಸೇವೆ ಈ ಮೊದಲು ಜನವರಿ 1, 2025 ರವರೆಗೆ ಸಂಚರಿಸಲು ನಿಗದಿಪಡಿಸಲಾಗಿತ್ತು, ಈಗ ಜನವರಿ 2, 2025 ರಿಂದ ಜುಲೈ 1, 2025 ರವರೆಗೆ ವಿಸ್ತರಿಸಲಾಗಿದೆ ಎಂದು ನೈರುತ್ಯ ರೈಲ್ವೆ, ಹುಬ್ಬಳ್ಳಿಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ ಕನಮಡಿ ತಿಳಿಸಿದ್ದಾರೆ.

# ಜಮ್ಮು : ಈ ವರ್ಷದ ಉಗ್ರವಾದಿ ದಾಳಿಗಳಲ್ಲಿ 44 ಸಾವು

ಜಮ್ಮು, ನ. 11 – ಜಮ್ಮು ವಲಯದಲ್ಲಿ ಈ ವರ್ಷ ನಡೆದ ಉಗ್ರವಾದಿ ದಾಳಿಗಳಲ್ಲಿ 18 ಭದ್ರತಾ ಸಿಬ್ಬಂದಿ ಸೇರಿದಂತೆ 44 ಜನ ಸಾವನ್ನಪ್ಪಿದ್ದಾರೆ. ಗಡಿ ಜಿಲ್ಲೆಗಳಾದ ರಜೌರಿ ಹಾಗೂ ಪೂಂಚ್ ಜಿಲ್ಲೆಗಳಿಂದ ಇತರೆ ಆರು ಪ್ರದೇಶಗಳಲ್ಲಿ ಉಗ್ರವಾದಿ ಘಟನೆಗಳು ಹರಡಿವೆ ಎಂದು ಭದ್ರತಾ ಅಧಿಕಾರಿಗಳು ತಿಳಿಸಿದ್ದಾರೆ.

2024ರಲ್ಲಿ ರಜೌರಿ ಹಾಗೂ ಪೂಂಚ್ ಜಿಲ್ಲೆಗಳಲ್ಲಿ ಉಗ್ರವಾದಿ ದಾಳಿಗಳ ಸಂಖ್ಯೆ ಕಡಿಮೆಯಾಗಿದೆ. ಆದರೆ, ರಿಯಾಸಿ, ದೊಡಾ, ಕಿಶ್ತವರ್, ಕಥುವಾ, ಉಧಾಂಪುರ್ ಹಾಗೂ ಜಮ್ಮು ಜಿಲ್ಲೆಗಳಲ್ಲಿ ಏಪ್ರಿಲ್ - ಮೇ ನಂತರ ಉಗ್ರವಾದಿ ದಾಳಿಗಳು ಹೆಚ್ಚಾಗಿವೆ.

ಶಾಂತಿಯುತ ಪ್ರದೇಶಗಳಲ್ಲಿ ಪಾಕಿಸ್ತಾನ ಬೆಂಬಲಿತ ಉಗ್ರವಾದ ಹರಡುವುದನ್ನು ತಡೆಯಲು ಭದ್ರತಾ ಸಿಬ್ಬಂದಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಪೊಲೀಸ್ ಹಾಗೂ ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗಳ ಸಮನ್ವಯತೆಯಿಂದ ಉಗ್ರರ ವಿರುದ್ಧ ನಿರಂತರ ಕಾರ್ಯಾಚರಣೆ ನಡೆಸಲಾಗುತ್ತಿದೆ.

ಈ ವರ್ಷ ದೊಡಾ, ಕಥುವಾ ಹಾಗೂ ರಿಯಾಸಿ ಜಿಲ್ಲೆಗಳಲ್ಲಿ ತಲಾ ಒಂಭತ್ತು ಹತ್ಯೆಗಳು ನಡೆದಿವೆ. ಕಿಶ್ತವರ್‌ನಲ್ಲಿ ಐವರು, ಉಧಾಂಪುರದಲ್ಲಿ ನಾಲ್ವರು, ಜಮ್ಮು ಮತ್ತು ರಜೌರಿಗಳಲ್ಲಿ ತಲಾ ಮೂವರನ್ನು ಹತ್ಯೆಗೈಯ್ಯಲಾಗಿದೆ. ಪೂಂಚ್ ಜಿಲ್ಲೆಯಲ್ಲಿ ಇಬ್ಬರನ್ನು ಹತ್ಯೆ ಮಾಡಲಾಗಿದೆ.

ಈ ಉಗ್ರವಾದಿ ದಾಳಿಗಳಲ್ಲಿ ಭಾಗಿಯಾದ 13 ಉಗ್ರವಾದಿಗಳನ್ನು ಹೊಡೆದುರುಳಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. 14 ನಾಗರಿಕರನ್ನು ಉಗ್ರವಾದಿಗಳು ಹತ್ಯೆ ಮಾಡಿದ್ದಾರೆ. ಇವರಲ್ಲಿ ಏಳು ಜನ ಶಿವ ಖೌರಿ ದೇವಾಲಯದಿಂದ ಮರಳುತ್ತಿದ್ದ ಯಾತ್ರಿಗಳಾಗಿದ್ದಾರೆ.

ದಾಳಿಗಳು ನಡೆದ ಪ್ರದೇಶದಲ್ಲಿ ಹೆಚ್ಚಿನ ಭದ್ರತಾ ಸಿಬ್ಬಂದಿಯನ್ನು ರವಾನಿಸಲಾಗಿದೆ. ಇತ್ತೀಚಿನ ವರ್ಷಗಳಲ್ಲಿ ಪರಿಸ್ಥಿತಿ ಸುಧಾರಿಸಿದ ಹಿನ್ನೆಲೆಯಲ್ಲಿ ಈ ಪ್ರದೇಶಗಳಲ್ಲಿ ಭದ್ರತಾ ಸಿಬ್ಬಂದಿ ಸಂಖ್ಯೆ ಕಡಿಮೆ ಮಾಡಲಾಗಿತ್ತು ಹಾಗೂ ಕೆಲವು ಪ್ರದೇಶಗಳಲ್ಲಿ ಭದ್ರತಾ ಸಿಬ್ಬಂದಿಯನ್ನು ಸಂಪೂರ್ಣ ವಾಪಸ್ ಕರೆಸಲಾಗಿತ್ತು.

ಈ ಪ್ರದೇಶದಲ್ಲಿ ರಾತ್ರಿ ಗಸ್ತು ಪ್ರಮಾಣ ಹೆಚ್ಚಿಸಲಾಗಿದೆ. ಗಡಿಯಲ್ಲಿ ಉಗ್ರರ ನುಸುಳುವಿಕೆ ತಡೆಯಲು ವ್ಯಾಪಕ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಿ.ಜಿ. ಆಸ್ಪತ್ರೆಯಲ್ಲಿ ಅಪರಿಚಿತನ ಸಾವು

ದಾವಣಗೆರೆ, ನ.11- ಯಾವುದೋ ಕಾಯಿಲೆಯಿಂದ ನಗರದ ಸಿ.ಜಿ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಸುಮಾರು 40 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿ ಅಕ್ಟೋಬರ್ 31 ರಂದು ಮೃತಪಟ್ಟಿದ್ದಾನೆ.

ಈ ವ್ಯಕ್ತಿ ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ಬಿಳಿಕೂದಲು ಮತ್ತು ಕಪ್ಪು ಬಿಳಿ ಕುರುಚಲು ಗಡ್ಡ ಹೊಂದಿರುತ್ತಾನೆ. ಮೈ ಮೇಲೆ ಕಪ್ಪು ಬಣ್ಣದ ಜರ್ಕಿನ್, ನೀಲಿ ಮತ್ತು ಬಿಳಿ ಚುಕ್ಕೆ ಇರುವ ತುಂಬು ತೋಳಿನ ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್‌ಪ್ಯಾಂಟ್ ಧರಿಸಿರುತ್ತಾರೆ. ಸಂಬಂಧಪಟ್ಟವರು ಹೆಚ್ಚಿನ ಮಾಹಿತಿಗಾಗಿ ಬಡಾವಣೆ ಪೊಲೀಸ್ ಠಾಣೆ (ದೂರವಾಣಿ 08192-272012, 259213) ಯನ್ನು ಸಂಪರ್ಕಿಸಬಹುದು.

## ಹರಿಹರದಲ್ಲಿ ಇಂದು ನೀರು ಪೂರೈಕೆಯಲ್ಲಿ ವ್ಯತ್ಯಯ

ಹರಿಹರ ಹೊರವಲಯದ ಕವಲೆತ್ತು ಗ್ರಾಮದ ಬಳಿ ಇರುವ ಜಾಕ್‌ವೆಲ್‌ನಲ್ಲಿ ಇಂದು ಸಂಜೆ 5.10 ರಿಂದ ತಡರಾತ್ರಿವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ನಗರದಲ್ಲಿ ನೀರು ಪೂರೈಕೆ ಇರುವುದಿಲ್ಲ ಎಂದು ಜಲಸಿರಿ ಅಧಿಕಾರಿ ನವೀನ್ ಕುಮಾರ್ ತಿಳಿಸಿದ್ದಾರೆ.

## ನಗರದಲ್ಲಿ ಅಪರಿಚಿತನ ಶವ ಪತ್ತೆ

ದಾವಣಗೆರೆ, ನ.11- ಕೃಷ್ಣಪ್ಪ ಬಿನ್ ಭೀಮಪ್ಪ ಎಂಬ 60 ವರ್ಷ ವಯಸ್ಸಿನ ವ್ಯಕ್ತಿ ಕಳೆದ ಅ.23 ರಂದು ಸಂಜೆ ನಗರದ ಪಿ.ಬಿ.ರಸ್ತೆ ಹತ್ತಿರ ಇರುವ ಸಾಗರ ಬೆಣ್ಣೆದೋಸೆ ಹೋಟೆಲ್ ಮುಂಭಾಗದ ಫುಟ್‌ಪಾತ್ ಮೇಲೆ ಮೃತಪಟ್ಟಿದ್ದಾರೆ.

ಈ ವ್ಯಕ್ತಿ ಎಣ್ಣೆ ಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ಬಿಳಿ ಕೂದಲು, ಬಿಳಿಗಡ್ಡ ಹೊಂದಿರುತ್ತಾನೆ. ಮೃತ ವ್ಯಕ್ತಿಯ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಬಡಾವಣೆ ಪೊಲೀಸ್ ಠಾಣೆ (ದೂರವಾಣಿ 08192-272012, 259213) ಯನ್ನು ಸಂಪರ್ಕಿಸಬಹುದು.

# ಏಯ್ ಕುಮಾರಸ್ವಾಮಿ ನಿನ್ನ ಬೆಲೆ ಎಷ್ಟು? ಎಂದ ಜಮೀರ್



ಬೆಂಗಳೂರು, ನ. 11 – ಬಿಜೆಪಿ ಜೊತೆ ತೆರಳಿರುವ ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಹೆಚ್.ಡಿ. ಕುಮಾರಸ್ವಾಮಿ ಮುಸ್ಲಿಮರ ಮತ ಖರೀದಿಸಬಹುದು ಎಂದುಕೊಂಡಿದ್ದಾರೆ. ಮುಸ್ಲಿಮರಿಗೆ ಇಡೀ ಕುಮಾರಸ್ವಾಮಿ ವಂಶ ಖರೀದಿಸುವ ತಾಕತ್ತಿದೆ ಎಂದು ಸಚಿವ ಜಮೀರ್ ಅಹಮದ್ ಖಾನ್ ಹೇಳಿದ್ದಾರೆ.

ರಾಮನಗರದಲ್ಲಿ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಂಡಿದ್ದ ಅವರು, ಜೆಡಿಎಸ್‌ನ ಕುಮಾರಸ್ವಾಮಿ ಅವರು ಬಿಜೆಪಿಗಿಂತಲೂ ಅಪಾಯಕಾರಿ. ಅವರು 'ಕರಿಯ' ಎಂದು ಲೇವಡಿ ಮಾಡಿದ್ದಾರೆ.

ನನಗೆ ಮುಸ್ಲಿಮರ ಮತಗಳು ಬೇಕಿಲ್ಲ ಎಂದು ಕುಮಾರಸ್ವಾಮಿ ಈ ಹಿಂದೆ ಹೇಳಿದ್ದರು. ಅವರಿಗೆ ನೀವು ಮತ ಹಾಕುತ್ತೀರಾ? ಎಂದು ಚುನಾವಣಾ ಸಭೆಯಲ್ಲಿ ಜಮೀರ್ ಪ್ರಶ್ನಿಸಿದರು.

ಹಣ ನೀಡಿ ಮುಸ್ಲಿಮರ ಮತ ಖರೀದಿಸಬಹುದು ಎಂದು ಅವರು ಭಾವಿಸಿದ್ದಾರೆ. ಆದರೆ, 'ಏಯ್ ಕುಮಾರಸ್ವಾಮಿ, ನಿನ್ನ ಬೆಲೆ ಎಷ್ಟು ಎಂದು ಹೇಳು, ಮುಸ್ಲಿಂ ಸಮುದಾಯ ನಿನ್ನ ಇಡೀ 'ಖಾನ್‌ದಾನ್' (ವಂಶ) ಖರೀದಿಸುವ ತಾಕತ್ತು ಹೊಂದಿದೆ' ಎಂದು ಹೇಳಿದರು.

ನಂತರ ಪತ್ರಿಕಾಗೋಷ್ಠಿಯಲ್ಲಿ ಕುಮಾರಸ್ವಾಮಿ ಅವರನ್ನು ಕರಿಯ ಎಂದಿದ್ದನ್ನು ಸಮರ್ಥಿಸಿಕೊಂಡಿರುವ ಜಮೀರ್, ನಾನು ಹಾಗೂ ಕುಮಾರಸ್ವಾಮಿ ಈ ಹಿಂದೆ ಆತ್ಮೀಯರಾಗಿದ್ದೆವು. ಆಗ ಕುಮಾರಸ್ವಾಮಿ ಅವರಿಗೆ ಕರಿಯಣ್ಣ ಎನ್ನುತ್ತಿದ್ದೆ, ನನ್ನನ್ನು ಕುಳ್ಳ ಎನ್ನುತ್ತಿದ್ದರು ಎಂದಿದ್ದಾರೆ.

ಇದಕ್ಕೆ ತಿರುಗೇಟು ನೀಡಿರುವ ಜೆಡಿಎಸ್, ನಿಮ್ಮನ್ನು ರಾಜಕೀಯವಾಗಿ ಬೆಳೆಸಿದ ದೇವೇಗೌಡ ಕುಟುಂಬವನ್ನು ಖರೀದಿಸುವ ಅಧಿಕಾರ ಹಾಗೂ ದುಡ್ಡಿನ ದರ್ಪ ಬಹಳ ದಿನ ಉಳಿಯುವುದಿಲ್ಲ ಎಂದು ಹೇಳಿದೆ.

ಜಮೀರ್ ವರ್ಣ ನಿಂದನೆ ಹಾಗೂ ಜನಾಂಗೀಯ ದ್ವೇಷಿ. ರಾಜಕೀಯವಾಗಿ ಬೆಳೆಸಿದ್ದ ದೇವೇಗೌಡರ ಕುಟುಂಬವನ್ನೇ ಖರೀದಿ ಮಾಡುತ್ತೇನೆ ಎನ್ನುವ ಅಧಿಕಾರ ಮತ್ತು ದುಡ್ಡಿನ ದರ್ಪ ಹೆಚ್ಚು ದಿನ ಉಳಿಯಲ್ಲ. ಕನ್ನಡಿಗರಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಬಣ್ಣ ಯಾವುದು ? ಸಚಿವರಾದ ಹೆಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ಕೆ.ಹೆಚ್. ಮುನಿಯಪ್ಪ ಹಾಗೂ ಕೆ.ಜೆ. ಜಾರ್ಜ್ ಅವರ ಬಣ್ಣ ಯಾವುದು? ಕಾಂಗ್ರೆಸ್ ಮುಖಂಡರಾದ ಡಿ.ಕೆ. ಸುರೇಶ್ ಹಾಗೂ ರಹೀಮ್ ಖಾನ್ ಅವರ ಬಣ್ಣ ಯಾವುದು ? ಮನುಷ್ಯರ ಚರ್ಮ ಕಪ್ಪಾದರೇನು, ಬಿಳಿಯಾದರೇನು ? ಎಂದು ಜೆಡಿಎಸ್ ಪ್ರಶ್ನಿಸಿದೆ.

ಈ ಬಗ್ಗೆ ಹೇಳಿಕೆ ನೀಡಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸಚಿವ ಜಮೀರ್ ಅವರು ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧ ಜನಾಂಗೀಯ ಹೇಳಿಕೆ ನೀಡಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಸಲಹೆಗಾರ ದಕ್ಷಿಣ ಭಾರತೀಯರನ್ನು ಆಫ್ರಿಕನ್ನರಿಗೆ ಹೋಲಿಸಿದ್ದರು ಎಂದಿದ್ದಾರೆ.

**ಇಡೀ 'ಖಾನ್‌ದಾನ್' ಖರೀದಿಸುವ ತಾಕತ್ತು ಮುಸ್ಲಿಮರಿಗಿದೆ ಎಂದ ಸಚಿವ ಖಾನ್**

# ಕೇಂದ್ರ ಸಚಿವ ಜೋಶಿ ವಿರುದ್ಧ ರಾಜ್ಯಪಾಲರಿಗೆ ದೂರು

ಬೆಂಗಳೂರು, ನ. 11 - ನ್ಯಾಯಮೂರ್ತಿ ಮೈಖೆಲ್ ಡಿಕುನ್ಹಾ ಅವರು ಏಜೆಂಟ್ ಎಂದು ಹೇಳಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕ್ಷಮೆ ಕೇಳಬೇಕು ಎಂದು ಸಚಿವರಾದ ದಿನೇಶ್ ಗುಂಡೂರಾವ್ ಹಾಗೂ ಕೃಷ್ಣಭೈರೇಗೌಡ ಒತ್ತಾಯಿಸಿದ್ದಾರೆ.

ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರಿಗೆ ಜೋಶಿ ವಿರುದ್ಧ ದೂರು ನೀಡಿರುವ ಸಚಿವರು, ಜೋಶಿ ಹೇಳಿಕೆಗೆ ಸಂಬಂಧಿಸಿದಂತೆ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಹಗರಣದ ಕುರಿತು ನ್ಯಾಯಮೂರ್ತಿ ಡಿಕುನ್ಹಾ ಅವರ ನೇತೃತ್ವದ ತನಿಖಾ ಆಯೋಗ ವಿಚಾರಣೆ ನಡೆಸಿದ್ದು, ಪ್ರಾಥಮಿಕ ವರದಿ ಸಲ್ಲಿಸಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಮಾಜಿ ಆರೋಗ್ಯ ಸಚಿವ ಬಿ. ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್‌ಗೆ ವರದಿಯಲ್ಲಿ ತಿಳಿಸಲಾಗಿದೆ.

ನಿವೃತ್ತ ನ್ಯಾಯಮೂರ್ತಿಯನ್ನು ಕಾಂಗ್ರೆಸ್ ಏಜೆಂಟ್ ಎಂದು ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ನ್ಯಾಯಮೂರ್ತಿ ವಿರುದ್ಧ ಈ ರೀತಿ ವಾಗ್ದಾಳಿ ನಡೆಸುವುದು ಸರಿಯಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಈ ಬಗ್ಗೆ ಸ್ಪಷ್ಟನೆ ನೀಡಿರುವ ಜೋಶಿ, ನಾನು ಡಿಕುನ್ಹಾ ಅವರನ್ನು ಏಜೆಂಟ್ ಎಂದು ಕರೆದಿಲ್ಲ. ಡಿಕುನ್ಹಾ ಅವರ ಪ್ರಾಮಾಣಿಕತೆ ಪ್ರಶ್ನಿಸಿದ್ದೇನೆ ಎಂಬ ಭಾವನೆ ಬಂದಿದ್ದರೆ ಅದಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದಿದ್ದಾರೆ.

# ಕಾವೇರಿಯೂ ಕೈ ತಪ್ಪಿಯಾಳು

(1ನೇ ಪುಟದಿಂದ) ಮಾಧ್ಯಮದಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆ. ಶ್ರೀಮಠದ ದಾಸೋಹವು ನಿಸ್ವಾರ್ಥ ಸೇವೆಯಾಗಿದೆ. ಶಿಕ್ಷಣವು ದುಬಾರಿಯಾಗುತ್ತಿರುವ ಇಂದಿನ ಕಾಲದಲ್ಲಿ ಸಿರಿಗೆರೆ ಮಠವು ಮಕ್ಕಳಿಗೆ ಉಚಿತ ದಾಸೋಹದ ಮೂಲಕ ಶಿಕ್ಷಣ ನೀಡುತ್ತಿದೆ. ಇದು ಕಾಯಕದ ಪರಮ ಸೇವೆ ಹಾಗೂ ಶಿಕ್ಷಣ ಜ್ಯೋತಿಯ ಮಾರ್ಗವಾಗಿದೆ ಎಂದರು.

ಚಿತ್ರದುರ್ಗ ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಂ. ಶಿವಸ್ವಾಮಿ ಮಾತನಾಡಿ, ಸಿರಿಗೆರೆಯ ತರಳಬಾಳು ನುಡಿ ಹಬ್ಬವು ಗತವೈಭವ ಸಾರುವ ಹಾಗೆ ಯಶಸ್ವಿಯಾಗಿದೆ. ಇಂತಹ ಹತ್ತು ಹಲವು ಕಾರ್ಯಕ್ರಮಗಳು ಶ್ರೀಮಠದಿಂದ ಜರುಗಿದರೆ ಮಕ್ಕಳಲ್ಲಿ ಸಂಸ್ಕಾರ, ಶ್ರದ್ಧೆ ರೂಪಗೊಳ್ಳುತ್ತದೆ ಎಂದರು.

ದಾವಣಗೆರೆ ಜಿಲ್ಲಾ ಕಸಾಪ ಅಧ್ಯಕ್ಷ ಬಿ. ವಾಮದೇವಪ್ಪ ಮಾತನಾಡಿ ಶ್ರೀಗಳು ಆಡಳಿತಕ್ಕಾಗಿ ವಿಶೇಷ ತಂತ್ರಾಂಶವನ್ನು ರೂಪಿಸಿದ್ದು, ಆದರ್ಶ ಶಿಕ್ಷಣ ಸಂಸ್ಥೆಯಾಗಿ ಸಿರಿಗೆರೆ ಮಠ ಬೆಳೆದಿದೆ. ಜೊತೆಗೆ ಸಮಾಜಕ್ಕೆ ತನ್ನದೇ ಆದ ಕೊಡುಗೆ ನೀಡುತ್ತಿದೆ ಎಂದರು.

2024ರ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಚಿಕ್ಕಜಾಜೂರಿನ ಡಾ.ಎಚ್.ಆರ್. ಸ್ವಾಮಿ, ಚಿತ್ರದುರ್ಗದ ಎಚ್.ಬಿ.ಓಬಳೇಶ್ ಅವರನ್ನು ಶ್ರೀಮಠದಿಂದ ಸನ್ಮಾನಿಸಲಾಯಿತು. ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಶಾಲಾ-ಕಾಲೇಜುಗಳಲ್ಲಿ ಕನ್ನಡ ವಿಷಯದಲ್ಲಿ ಶೇ.100ರಷ್ಟು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.


ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತಾಕಾರಿ ಡಾ.ಎಚ್.ವಿ.ವಾಮದೇವಪ್ಪ, ವಿಶೇಷಾಧಿಕಾರಿ ವೀರಣ್ಣ. ಎಸ್ ಜತ್ತಿ, ವಿದ್ಯಾಸಂಸ್ಥೆಯ ಎಲ್ಲಾ ಶಿಕ್ಷಕರು, ಉಪನ್ಯಾಸಕರು, ವಿದ್ಯಾರ್ಥಿಗಳು ಇದ್ದರು.

# ಪ್ರಜ್ವಲ್ ಜಾಮೀನು ಅರ್ಜಿ ವಜಾ

(1ನೇ ಪುಟದಿಂದ) ಮುಕುಲ್ ರೋಹಟಗಿ, ಪ್ರಕರಣ ಸಂಬಂಧ ಈಗಾಗಲೇ ಆರೋಪ ಪಟ್ಟಿ ಸಲ್ಲಿಕೆಯಾಗಿದೆ. ಪ್ರಜ್ವಲ್ ವಿರುದ್ಧದ ದೂರಿನಲ್ಲಿ ಐಪಿಸಿ 376ರ ಉಲ್ಲೇಖ ಇಲ್ಲ ಎಂದು ಹೇಳಿ ಜಾಮೀನು ನೀಡುವಂತೆ ಮನವಿ ಮಾಡಿದ್ದರು.

ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡಿತ್ತು, ಹೈಕೋರ್ಟ್ ಆದೇಶ ಪ್ರಶ್ನಿಸಿ ಪ್ರಜ್ವಲ್ ಪರ ವಕೀಲರು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಪ್ರಜ್ವಲ್ 6 ತಿಂಗಳ ನಂತರ ಮತ್ತೆ ಜಾಮೀನು ಅರ್ಜಿ ಸಲ್ಲಿಸಬಹುದೇ ಎಂಬ ಮುಕುಲ್ ರೋಹಟಗಿ ಮನವಿಗೆ, ಈ ಬಗ್ಗೆ ನಾವೇನು ಹೇಳುವುದಿಲ್ಲ ಎಂದು ನ್ಯಾಯಪೀಠ ತಿಳಿಸಿತು.

# ಗ್ಯಾರಂಟಿ ನಿಲ್ಲಿಸುವುದು ಬಿಜೆಪಿ-ಜೆಡಿಎಸ್ ಹಣೆಯಲ್ಲಿ ಬರೆದಿಲ್ಲ : ಡಿಕೆಶಿ



ಬೆಂಗಳೂರು, ನ. 11 - ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲು ಬಿಜೆಪಿ-ಜೆಡಿಎಸ್ ಹಣೆಯಲ್ಲಿ ಬರೆದಿಲ್ಲ, ಇಂತಹ ಹೇಳಿಕೆಗಳಿಂದ ಜನ ಹುಷಾರಾಗಿರಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ.

ನಮ್ಮ ತಾಯಂದಿರ ಬದುಕು ಹಾಗೂ ಸಂಸಾರ ಉತ್ತಮವಾಗಿ ಸಾಗಲಿ ಎಂಬ ಕಾರಣಕ್ಕೆ ನಾವು ಗೃಹಲಕ್ಷ್ಮಿ ಹಣ ನೀಡುತ್ತಿದ್ದೇವೆ, ಇದನ್ನು ತಪ್ಪಿಸಲು ಪ್ರತಿಪಕ್ಷಗಳು ಹೊರಟಿವೆ ಎಂದು ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಜನ ನಮ್ಮ ಗ್ಯಾರಂಟಿ ಯೋಜನೆಗಳು ಹಾಗೂ ಆಡಳಿತವನ್ನು ಒಪ್ಪಿದ್ದು, ಈ ಬಾರಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಲಿದೆ ಎಂದರು. ಬಿಜೆಪಿ ಏನೇ ತಂತ್ರ ಪ್ರಯೋಗಿಸಿದರೂ ವಿಧಾನಸಭೆ ಚುನಾವಣೆಯಲ್ಲಿ ಮತದಾರರು ಬೆಂಬಲ ನೀಡಿದಂತೆ, ಈ ಮೂರು ಕ್ಷೇತ್ರಗಳ ಉಪಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ಅಬಕಾರಿ ಇಲಾಖೆಯಲ್ಲಿ 700 ಕೋಟಿ ರೂ. ವಸೂಲಿ ಮಾಡಲಾಗಿದೆ ಎಂಬ ಪ್ರಧಾನಿ ನರೇಂದ್ರ ಮೋದಿ ಆರೋಪ ಸುಳ್ಳು. ಅವರನ್ನು ಯಾರೋ ದಾರಿ ತಪ್ಪಿಸಿದ್ದಾರೆ. ಆರೋಪ ಸಾಬೀತುಪಡಿಸಿದರೆ ರಾಜಕೀಯ ತ್ಯಜಿಸುವುದಾಗಿ ಮುಖ್ಯಮಂತ್ರಿಗಳು ಬಹಿರಂಗ ಸವಾಲು ಹಾಕಿದ್ದಾರೆ, ಇದಕ್ಕಿಂತ ಬೇರೇನು ಬೇಕು? ಎಂದು ಪ್ರಶ್ನಿಸಿದರು.

ಕೋವಿಡ್ ಕಿಟ್ ಖರೀದಿ ಅಕ್ರಮ ವಿಚಾರದಲ್ಲಿ ನ್ಯಾಯಮೂರ್ತಿ ಮೈಕೆಲ್ ಡಿ.ಕುನ್ಹಾ ಸಮಿತಿ ಸರ್ಕಾರದ ಏಜೆಂಟ್‌ರಂತೆ ನಡೆದುಕೊಳ್ಳುತ್ತಿದೆ ಎಂಬ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಟೀಕೆಗೆ ಪ್ರತಿಕ್ರಿಯಿಸಿ, ಅವರ ಪರವಾಗಿ ವರದಿ ಕೊಟ್ಟರೆ ಎಲ್ಲವೂ ನ್ಯಾಯಬದ್ಧವಾಗಿರುತ್ತವೆ. ಅವರ ವಿರುದ್ಧವಾಗಿ ನೀಡುವ ವರದಿಗೆ ಆರೋಪ ಮಾಡುತ್ತಾರೆ. ದ್ವೇಷ ರಾಜಕಾರಣ ಮಾಡುತ್ತಿರುವವರು ಬಿಜೆಪಿ, ಅವರು ಯಾವುದೇ ಆರೋಪ ಮಾಡಿಕೊಳ್ಳಲಿ ಎಂದರು.

## ವರ್ಷದ ಮುಂಗಾರು - ಪೂರಕವಾಗದ ಕೃಷಿ ಕ್ಷೇತ್ರ

# ಹಿಂಗಾರು ಮಳೆಯ ಬೆಳೆಗಳಿಂದ ಆರ್ಥಿಕ ಸಬಲತೆ



ಮೂರು ನಾಲ್ಕು ವರ್ಷಗಳಲ್ಲಿ ಮಳೆ ಅವಲಂಬಿತ ರೈತ ಸಮೂಹ ಒಮ್ಮೆ ಭೂಮಿಯೆಡೆಗೆ ಕಣ್ಣು ನೆಟ್ಟರೆ 10 ಬಾರಿ ಆಕಾಶದೆಡೆಗೆ ತನ್ನ ದೃಷ್ಟಿ ಬೀರಿ ಮಳೆಯ ಬರುವಿಕೆಗೆ ಕಾಯುತ್ತಾ ಪ್ರಾರ್ಥಿಸುತ್ತಿದ್ದ. ಈ ವರ್ಷದ ಮುಂಗಾರು ಬೇಗನೆ ಪ್ರಾರಂಭಗೊಂಡು ರೈತರಲ್ಲಿ ಉತ್ಸಾಹದ ಬಿತ್ತನೆ ಕಾರ್ಯಕ್ಕೆ ಅನುವು ಮಾಡಿಕೊಟ್ಟರೂ, ನಂತರ ಕೆಲವು ದಿನ ಮಳೆ ಬಾರದೇ ಎರಡೆರಡು ಸಲ ಬಿತ್ತನೆ ಮಾಡಿದ್ದುಂಟು. ಬಿತ್ತಿದ ಕೆಲವು ದಿನಗಳ ನಂತರ ಅಧಿಕ ಮಳೆಯಿಂದಾಗಿ ಬೆಳೆ ಕುಂಠಿತಗೊಂಡು ರೈತರೂ ಸಹ ಬೆಳೆಯ ಜೊತೆ ಸಹಗಮವಾದರು.

ಸಂತೆಬೆನ್ನೂರು ಗ್ರಾಮದ ಸುತ್ತಮುತ್ತ ಪಾಪ್ಕಾರ್ನ್ ಮೆಕ್ಕೆಜೋಳ ಬೆಳೆಗೆ ಕೃಷಿ ಭೂಮಿ ಪೂರಕವಾಗಿದ್ದು, ಅದರಂತೆ ಹಲವಾರು ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಪಾಪ್ಕಾರ್ನ್ ಮೆಕ್ಕೆಜೋಳ ಬಿತ್ತಲಾಗಿತ್ತು, ಬೇಗನೆ ಕಟಾವಿಗೆ ಬರುವ ಈ ಬೆಳೆ ಕಟಾವಾದ ತಕ್ಷಣ ಹೊಲ ಸಿದ್ದಗೊಳಿಸಿಕೊಂಡು ಹಿಂಗಾರು ಮಳೆಗೆ ಅಲಸಂದೆ, ಕಡಲೆ, ಅವರೆ, ರಾಗಿ, ಜೋಳ, ಸೂರ್ಯ ಕಾಂತಿ ಬಿತ್ತಲು ಪ್ರಾರಂಭಿಸುತ್ತಾರೆ. ಜೋಳ ಮತ್ತು ಸೂರ್ಯಕಾಂತಿ ಬೆಳೆ ತೆನೆ ಆದಾಗ ಪಕ್ಷಿಗಳ ಕಾಟದಿಂದ ಅಶಕ್ತರಾದ ರೈತರು ಸಂಪೂರ್ಣ ಭೂಮಿ ಒಳಗೆ ಬೆಳೆಯಲ್ಪಡುವ ಅಲಸಂದಿ, ಕಡ್ಲೆ, ಶೇಂಗಾ ಬೆಳೆಗೆ ಮಾರುಹೋದರು. ಅದರಂತೆ ಈ ವರ್ಷ ಚನ್ನಗಿರಿ ತಾಲ್ಲೂಕಿನಲ್ಲಿ ಹೆಚ್ಚಾಗಿ ಅಲಸಂದೆ ಬೆಳೆ ಬೆಳೆಯಲಾಗಿದ್ದು, ತದನಂತರ ಕಡಲೆ, ಅವರೆ, ರಾಗಿ, ಶೇಂಗಾ ಬೆಳೆಗಳು ಹಸಿರಿನಿಂದ ಕಂಗೊಳಿಸುತ್ತಿವೆ.

ಎಕರೆಗೆ 10 ಕೆಜಿ ಬೀಜ 10 ಕೆಜಿ ಗೊಬ್ಬರದೊಡನೆ ಬೆರೆಸಿ ಬಿತ್ತಲ್ಪಡುವ ಅಲಸಂದಿ 15-20 ದಿನಗಳ ನಂತರ ಕಳೆನಾಶಕ ಒಮ್ಮೆ ಸಿಂಪಡಿಸಿ ರೋಗ, ಕೀಟಗಳು ಬಂದರೆ ರೋಗಬಾಧೆ ಮತ್ತು ಕೀಟಬಾಧೆ ಔಷಧಿಗಳನ್ನು ಸಿಂಪಡಿಸಿದರೆ ಸಾಕು. ಬೆಳೆದ ಬೆಳೆಗೆ ಇಬ್ಬನಿ ನೀರಿಗೆ ಒಳ್ಳೆಯ ಇಳುವರಿಯ ಅಲಸಂದಿ ಕಾಯಿಗಳನ್ನು ಕಾಣಬಹುದು. ಅದರಂತೆ ಚನ್ನಗಿರಿ ತಾಲ್ಲೂಕಿನಲ್ಲಿ ಸುಮಾರು 2200 ರಿಂದ 2300 ಹೆಕ್ಟೇರ್‌ನಲ್ಲಿ ಅಲಸಂದಿ ಮತ್ತು ಕಡ್ಲೆ 600 ರಿಂದ 700 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗಿದ್ದು, ಹಿಂಗಾರು ಪ್ರಾರಂಭಗೊಂಡ ಸಮಯದಿಂದ ಪ್ರತಿಯೊಂದು ರೈತ ಸಂಪರ್ಕ ಕೇಂದ್ರದಲ್ಲಿ ರೈತರಿಗೆ ಬೇಕಾಗುವ ಹಿಂಗಾರು ಬೆಳೆಗಳ ಬೀಜಗಳನ್ನು ಮತ್ತು ಅವಕ್ಕೆ ಸಿಂಪಡಿಸುವ ಔಷಧಿಗಳನ್ನು ಸಮಯಕ್ಕೆ ಸರಿಯಾಗಿ ಕೃಷಿ ಇಲಾಖೆಯ ಮಾಹಿತಿಗಳೊಡನೆ ರೈತರಿಗೆ ವಿತರಿಸಲಾಗಿದೆ ಎಂದು ಚನ್ನಗಿರಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಎಸ್. ಹೆಚ್. ಅರುಣ್ ಕುಮಾರ್ ತಿಳಿಸಿದರು.

ಅಲಸಂದಿ ಬೆಳೆ ಎಕರೆಗೆ ಮೂರರಿಂದ ಆರು ಕ್ವಿಂಟಾಲ್ ಇಳುವರಿ ಬರುವ ಬೆಳೆಯಾಗಿದ್ದು, ಈಗ ನಡೆಯುತ್ತಿರುವ ಧಾರಣೆ 9,500/ರೂ ರಿಂದ 10,500/ರೂ ಕ್ವಿಂಟಾಲ್ ವರೆಗೆ ಮಾರುಕಟ್ಟೆಯಲ್ಲಿ ನಡೆಯುತ್ತಿದೆ. ಅದೇ ರೀತಿ ಕಡ್ಲೆ ಎಕರೆಗೆ ನಾಲ್ಕರಿಂದ ಎಂಟು ಕ್ವಿಂಟಾಲ್ ಇಳುವರಿ ಬರುವ ಮುನ್ಸೂಚನೆ ಇದ್ದು, ಅದಕ್ಕೂ ಸಹ ಮಾರುಕಟ್ಟೆಯಲ್ಲಿ ಒಳ್ಳೆಯ ಧಾರಣೆ ಇದೆ ಎಂದು ಗ್ರಾಮದ ಪ್ರಗತಿಪರ ರೈತರಾದ ಶ್ರೀಕಾಂತ್ ಪೂಜಾರ್ ತಮ್ಮ ಹೊಲದ ಬೆಳೆ ತೋರಿಸುತ್ತಾ ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಾರೆ. ಕೃಷಿ ಇಲಾಖೆಯಲ್ಲಿ ವಿತರಿಸಿದ ಸಬ್ಸಿಡಿ ಬಿತ್ತನೆ ಬೀಜಗಳನ್ನು ಹೊರತುಪಡಿಸಿ ಖಾಸಗಿ ಅಂಗಡಿಗಳಲ್ಲಿ ಮತ್ತು ಮನೆಯಲ್ಲಿನ ಬಿತ್ತನೆ ಬೀಜಗಳು ಹಿಂಗಾರು ಬೆಳೆಗೆ ಸಹಕಾರಿಯಾಗಿವೆ.

ಸಂತೇಬೆನ್ನೂರು ಗ್ರಾಮದ ಸುತ್ತ ಈ ವರ್ಷ ಹಿಂಗಾರು ಮಳೆಗೆ ಯಥೇಚ್ಛವಾಗಿ ಬೆಳೆದಿರುವ ಅಲಸಂದಿ ಬೆಳೆಯ ಹಚ್ಚಹಸಿರಿನ ಬೆಳೆಯ ದೃಶ್ಯ ನೋಡಲು ಚಂದ.

**- ಕೆ. ಸಿರಾಜ್ ಅಹಮ್ಮದ್**
ಸಂತೆಬೆನ್ನೂರು

# ಮಣಿಪುರ : ಭದ್ರತಾ ಪಡೆಗಳ ಗುಂಡಿಗೆ 11 ಉಗ್ರರು ಹತ

ಇಂಫಾಲ್, ನ. 11 - ಮಣಿಪುರದ ಜಿರಿಬಮ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳ ಜೊತೆ ಗುಂಡಿನ ಚಕಮಕಿ ನಡೆಸಿದ 11 ಶಂಕಿತ ಉಗ್ರರನ್ನು ಹೊಡೆದುರುಳಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಈ ಗುಂಡಿನ ಚಕಮಕಿಯಲ್ಲಿ ಸಿಆರ್‌ಪಿಎಫ್‌ನ ಇಬ್ಬರು ಸಿಬ್ಬಂದಿಗೆ ಗಾಯಗಳಾಗಿವೆ. ಇವರಲ್ಲಿ ಒಬ್ಬರ ಪರಿಸ್ಥಿತಿ ಗಂಭೀರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಉಗ್ರರು ಮಧ್ಯಾಹ್ನ 2.30ರ ಸಮಯದಲ್ಲಿ ಸಿಆರ್‌ಪಿಎಫ್ ಶಿಬಿರದ ಮೇಲೆ ದಾಳಿ ನಡೆಸಿದ್ದಾರೆ. ಆಗ ಗುಂಡಿನ ಚಕಮಕಿ ಆರಂಭವಾಗಿದೆ.

ಕೆಲವು ಉಗ್ರರು ಅಲ್ಲಿಂದ ನುಸುಳಿಕೊಂಡು ಹತ್ತಿರದಲ್ಲೇ ಇದ್ದ ಮಾರುಕಟ್ಟೆ ಒಂದಕ್ಕೆ ನುಗ್ಗಿ ಅಲ್ಲಿನ ಅಂಗಡಿಗಳಿಗೆ ಬೆಂಕಿ ಹಚ್ಚಿದ್ದಾರೆ.

ಭದ್ರತಾ ಪಡೆಗಳು ನಡೆಸಿದ ಪ್ರತಿದಾಳಿಗೆ ಸಿಲುಕಿ 11 ಶಂಕಿತ ಉಗ್ರರು ಹತರಾಗಿದ್ದಾರೆ. ಸುಮಾರು ಒಂದು ಗಂಟೆ ಕಾಲ ಗುಂಡಿನ ಚಕಮಕಿ ನಡೆಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಪುರಸಭೆ ಅಧ್ಯಕ್ಷರಾಗಿ ಫಾತೀಮಾಬೀ



(1ನೇ ಪುಟದಿಂದ) ಎಂ.ಪಿ.ಲತಾ ಮಲ್ಲಿಕಾರ್ಜುನ್ ಮಾತನಾಡಿ, ಪುರಸಭೆಯ ಅಭಿವೃದ್ದಿಗೆ ನಾವೂ ಸಹಕಾರ ನೀಡುತ್ತೇವೆ. ಎಪ್ಪತ್ತು ಸಾವಿರಕ್ಕೂ ಅಧಿಕ ಜನಸಂಖ್ಯೆ ಇರುವ ಪಟ್ಟಣದಲ್ಲಿ ಮೂಲಭೂತ ಸೌಕರ್ಯಗಳು ಆಗಬೇಕು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ.ಅಂಜಿನಪ್ಪ ಮಾತನಾಡಿ ಚರಂಡಿ, ಒಳಚರಂಡಿಗಾಗಿ ಪುರಸಭೆಗೆ ವಿಶೇಷ ಅನುದಾನ ನೀಡಬೇಕು ಎಂದು ಸಂಸದರಲ್ಲಿ ಮತ್ತು ಶಾಸಕರಲ್ಲಿ ಮನವಿ ಮಾಡಿದರು. ಪುರಸಭೆ ಸದಸ್ಯ ಡಿ.ಅಬ್ದುಲ್ ರಹಿಮಾನ್ ಸಾಬ್ ಮಾತನಾಡಿದರು. ಪುರಸಭೆ ಸದಸ್ಯರಾದ ಗೊಂಗಡಿ ನಾಗರಾಜ ಜೋಗಿನ, ಭರತೇಶ್, ಟಿ.ವೆಂಕಟೇಶ್, ಲಾಟಿ ದಾದಾಪೀರ್, ಗಣೇಶ್, ಮುಖ್ಯಾಧಿಕಾರಿ ಎರಗುಡಿ ಶಿವಕುಮಾರ್ ಸೇರಿದಂತೆ ಇತರರು ಇದ್ದರು.

# ಓಬವ್ವನ ಶೌರ್ಯದ ಗುಣ ಅಳವಡಿಸಿಕೊಳ್ಳಿ

(1ನೇ ಪುಟದಿಂದ) ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಜಿಲ್ಲಾ ಛಲವಾದಿ ಸಮಾಜದ ಮುಖಂಡ ಜೈ ಪ್ರಕಾಶ್, ಉಪಾಧ್ಯಕ್ಷೆ ರುದ್ರಮ್ಮ, ಜಿಲ್ಲಾ ಮಾದಿಗ ಸಮಾಜದ ಮುಖಂಡ ವೀರಭದ್ರಪ್ಪ ಮತ್ತು ಕೆಎಸ್‌ಎಸ್ ಕಾಲೇಜಿನ ವಿದ್ಯಾರ್ಥಿಗಳಿದ್ದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಛಲವಾದಿ ಮಹಾಸಭಾ ಇವರ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ನಡೆಯಿತು.

# ಆನ್‌ಲೈನ್ ಮೂಲಕ 10.45 ಕೋಟಿ ವಂಚನೆ

(1ನೇ ಪುಟದಿಂದ) ಹೂಡಿಕೆ ಮಾಡುವಂತೆ ಹೇಳಿದ್ದಾರೆ. ಈ ವೇಳೆ ತಾನು ವಂಚನೆಗೊಳಗಾದ ಬಗ್ಗೆ ತಿಳಿದು ವಿಜಯಲಕ್ಷ್ಮಿ ವೀರಮಾಚಿನೇನಿ ಸಿಇಎನ್ ಪೊಲೀಸ್ ಠಾಣೆಯಲ್ಲಿ ಆ.7ರಂದು ದೂರು ದಾಖಲಿಸಿದ್ದಾರೆ.

# ಸದೃಢ, ಸ್ವಾಸ್ಥ್ಯ ದೇಶಕ್ಕಾಗಿ ತಂಬಾಕು ಮುಕ್ತರಾಗಿ

## ತಂಬಾಕು ಮುಕ್ತ ಯುವ ಅಭಿಯಾನದ ಕಾರ್ಯಕ್ರಮದಲ್ಲಿ ನ್ಯಾ. ಮಹಾವೀರ ಮ. ಕರೆಣ್ಣವರ



ದಾವಣಗೆರೆ, ನ.11- ಸದೃಢ ಹಾಗೂ ಸ್ವಾಸ್ಥ್ಯ ದೇಶಕ್ಕಾಗಿ ನಾವೆಲ್ಲರೂ ಜಾಗೃತಿ ವಹಿಸಿ ತಂಬಾಕು ಮುಕ್ತರಾಗೋಣ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಮ. ಕರೆಣ್ಣವರ ಹೇಳಿದರು.

ನಗರದ ಗಾಂಧಿ ಭವನದಲ್ಲಿ ಸೋಮವಾರ ನಡೆದ 'ತಂಬಾಕು ಮುಕ್ತ ಯುವ ಅಭಿಯಾನ'ದ ಅಂಗವಾಗಿ ಸಮುದಾಯ ಆರೋಗ್ಯಾಧಿಕಾರಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಇಂದಿನ ಯುವಕರು ಕೆಟ್ಟ ಸ್ನೇಹಿತರ ಸಹವಾಸದಿಂದ ದುಶ್ಚಟಕ್ಕೆ ಬಲಿಯಾಗುವ ಜತೆಗೆ, ಇನ್ನಿತರೆ ದುರಭ್ಯಾಸಗಳಿಗೆ ತಮ್ಮ ಬದುಕನ್ನೇ ನಾಶಪಡಿಸಿಕೊಳ್ಳುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಕೋಟ್ಪಾ-2003ರ ಕಾಯ್ದೆಯ ಅನುಷ್ಠಾನ ಮತ್ತು 'ತಂಬಾಕು ಮುಕ್ತ ಯುವ ಅಭಿಯಾನ 2.0' ಮಾರ್ಗದರ್ಶನದ ಅನುಸಾರ ಜಿಲ್ಲೆಯಲ್ಲಿ ತಂಬಾಕು ಮುಕ್ತ ಗ್ರಾಮ ಮಾಡುವ ನಿಟ್ಟಿನಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದ್ದು, ಎಲ್ಲರೂ ಇದಕ್ಕೆ ಸಹಕರಿಸಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಪೋಷಕರು ತಮ್ಮ ಮಕ್ಕಳ ಬಳಿ ತಂಬಾಕು ಪದಾರ್ಥಗಳನ್ನು ತರಿಸುವುದರಿಂದ ಮಕ್ಕಳು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ ಎಂದರು.

ಪ್ರತಿ ದಿನಕ್ಕೆ 293 ಹದಿ-ಹರೆಯದ ಮಕ್ಕಳು ಹೊಸದಾಗಿ ತಂಬಾಕು ಸೇವಿಸಲು ಪ್ರಾರಂಭಿಸುತ್ತಿರುವುದು ವಿಷಾದನೀಯ. ಹಾಗಾಗಿ ಯುವಕರಿಗೆ, ಪೋಷಕರಿಗೆ ಹಾಗೂ ಸಮುದಾಯಕ್ಕೆ ಈ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಜರುಗಬೇಕು ಎಂದು ಕರೆ ನೀಡಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್. ಷಣ್ಮುಖಪ್ಪ, ಬಾಪೂಜಿ ದಂತ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಸಿ.ಶುಭ, ಡಾ.ಜಿ.ವಿ.ಉಷಾ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರ ಸತೀಶ್ ಕಲಹಾಳ್, ಶೈಲಾ ಶಾಮನೂರು ಮತ್ತು ಜಿಲ್ಲೆಯ ಸಮುದಾಯ ಆರೋಗ್ಯಾಧಿಕಾರಿಗಳಿದ್ದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಇವರ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಿತು.

# ಇಂದು ಪಿಯು ಕಾಲೇಜುಗಳ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆ

ದಾವಣಗೆರೆ, ನ.11- ನಗರದ ನೇತಾಜಿ ಸುಭಾಷ್ ಚಂದ್ರ ಬೋಸ್ ಒಳಾಂಗಣ ಕ್ರೀಡಾಂಗಣದಲ್ಲಿ ನಾಳೆ ದಿನಾಂಕ 12ರಿಂದ 14ರ ವರೆಗೆ 2024-25ನೇ ಸಾಲಿನ ಪದವಿ ಪೂರ್ವ ಕಾಲೇಜುಗಳ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆ ನಡೆಯಲಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕ ಎಸ್. ಜಿ. ಕರಿಸಿದ್ದಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ರಾಘವೇಂದ್ರ ಹೈ-ಟೆಕ್ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಕ್ರೀಡಾಕೂಟ ಜರುಗಲಿದೆ ಎಂದು ಹೇಳಿದರು.

ನಾಳೆ ಮಂಗಳವಾರ ಸಂಜೆ 5ಕ್ಕೆ ಕ್ರೀಡಾ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸಲಿದ್ದು, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಕ್ರೀಡಾ ಜ್ಯೋತಿ ಸ್ವೀಕಾರ ಮಾಡಲಿದ್ದಾರೆ. ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ, ಎಸ್ಪಿ ಉಮಾ ಪ್ರಶಾಂತ್, ಜಿ.ಪಂ. ಸಿಇಓ ಸುರೇಶ್ ಬಿ. ಇಟ್ನಾಳ್, ಶಾಸಕರಾದ ಕೆ.ಎಸ್. ಬಸವಂತಪ್ಪ, ಬಸವರಾಜು ವಿ. ಶಿವಗಂಗಾ, ಬಿ.ಪಿ. ಹರೀಶ್, ಡಿ.ಜಿ. ಶಾಂತನಗೌಡ ಸೇರಿದಂತೆ ಗಣ್ಯರು ಪಾಲ್ಗೊಳ್ಳಲಿದ್ದಾರೆ.

13ರಿಂದ 14ರ ವರೆಗೆ ಹೊನಲು ಬೆಳಕಿನ ಕರಾಟೆ ಪಂದ್ಯಾವಳಿ ನಡೆಯಲಿದ್ದು, ಪ್ರತಿ ಜಿಲ್ಲೆಗಳಿಂದ ಬಾಲಕರು ಹಾಗೂ ಬಾಲಕಿಯರ ತಂಡಗಳು ಆಗಮಿಸಲಿದ್ದು, ಒಟ್ಟು 793 ಕ್ರೀಡಾಪಟುಗಳು ಭಾಗವಹಿಸಬಹುದು ಎಂದು ಅಂದಾಜಿಸಲಾಗಿದೆ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಎಸ್. ಪ್ರದೀಪ್ ಕುಮಾರ್, ರಾಘವೇಂದ್ರ ಹೈ-ಟೆಕ್ ಪಿಯು ಕಾಲೇಜಿನ ಪ್ರಾಚಾರ್ಯ ಡಾ. ಅನಿಲ್ ಕುಮಾರ್ ಶ್ಯಾಗಲೆ, ದೈ.ಶಿ.ವಿಭಾಗದ ಜಿಲ್ಲಾ ಕ್ರೀಡಾ ಸಂಯೋಜಕ ಎಂ. ಗಣೇಶ್, ಉಪನ್ಯಾಸಕರಾದ ನಾಗರಾಜ್, ರಾಘವೇಂದ್ರ ಇದ್ದರು.

# ವಿಪಕ್ಷ ನಾಯಕರ ಹತ್ತಿಕ್ಕಲು ಪೊಲೀಸ್ ದುರುಪಯೋಗ :

## ಕೇಂದ್ರ ಸಚಿವ ಕುಮಾರಸ್ವಾಮಿ ಆರೋಪ

ಬೆಂಗಳೂರು, ನ. 11 - ವಿರೋಧ ಪಕ್ಷದ ನಾಯಕರನ್ನು ಹತ್ತಿಕ್ಕಲು ಪೊಲೀಸ್ ಇಲಾಖೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ನನ್ನ ವಿರುದ್ಧ ಇಲ್ಲಸಲ್ಲದ ಆರೋಪ ಹೊರಿಸಿ ಎಫ್‌ಐಆರ್‌ಗಳನ್ನು ಹಾಕಿಸಿದ ಬೆನ್ನಲ್ಲೇ ಬಿಜೆಪಿ ಹಿರಿಯ ಮುಖಂಡ ಹಾಗೂ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಮೇಲೆ ಭ್ರಷ್ಟಾಚಾರ ಆರೋಪ ಹೊರಿಸಿ ಕ್ರಿಮಿನಲ್ ದಾವೆ ಹೂಡಲು ಹೊರಟಿದ್ದಾರೆ ಎಂದು ಗುಡುಗಿದರು.

ನನ್ನ ಸಹೋದ್ಯೋಗಿ ಸಚಿವ ವಿ.ಸೋಮಣ್ಣ ನುಡಿದಿರುವ ಭವಿಷ್ಯದಂತೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಆಧಿಕಾರ ಕಳೆದುಕೊಳ್ಳುವ ಕಾಲ ಸನ್ನಿಹಿತವಾಗಿದೆ ಎಂಬುದು ನಿಜ ಎಂದರು.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಸಾರ್ವಜನಿಕ ಸಮಾವೇಶದಲ್ಲಿ ಮಾತನಾಡಿದ ಅವರು, ನಾನಾಗಲೀ, ಯಡಿಯೂ ರಪ್ಪ ಆಗಲೀ ಅಧಿಕಾರದಲ್ಲಿ ಇದ್ದ ವೇಳೆ ವಿರೋಧಿಗಳ ಮೇಲೆ ಸುಳ್ಳು ಮೊಕದ್ದಮೆಗಳನ್ನು ದಾಖಲಿಸುವ ಕೆಲಸ ಮಾಡಿರಲಿಲ್ಲ.

ಆದರೆ, ಸಿದ್ದರಾಮಯ್ಯ ಅಧಿಕಾರಕ್ಕೆ ಬಂದ ದಿನದಿಂದಲೂ ನಮ್ಮ ಎರಡೂ ಕುಟುಂಬಗಳನ್ನು ರಾಜಕೀಯವಾಗಿ ಮುಗಿಸಲು ಸುಳ್ಳು ಮೊಕದ್ದಮೆಗಳನ್ನು ಹಾಕಿಸುತ್ತಿದ್ದಾರೆ ಎಂದು ಆರೋಪಿಸಿದರು.

# ಉಗ್ರ ಚಟುವಟಿಕೆ : ದೇಶಾದ್ಯಂತ ಎನ್.ಐ.ಎ. ಶೋಧ

ನವದೆಹಲಿ, ನ. 11 - ಬಾಂಗ್ಲಾದೇಶದ ಮೂಲಕ ಉಗ್ರವಾದಕ್ಕೆ ಪ್ರಚೋದನೆ ನೀಡುತ್ತಿರುವ ಸಂಬಂಧ ರಾಷ್ಟ್ರೀಯ ತನಿಖಾ ಸಂಸ್ಥೆಯು (ಎನ್.ಐ.ಎ.) ದೇಶಾದ್ಯಂತ ಹಲವೆಡೆ ಶೋಧ ನಡೆಸಿದೆ. ಕರ್ನಾಟಕ, ಜಮ್ಮು ಮತ್ತು ಕಾಶ್ಮೀರ, ಪಶ್ಚಿಮ ಬಂಗಾಳ, ಬಿಹಾರ, ತ್ರಿಪುರ ಹಾಗೂ ಅಸ್ಸಾಂಗಳಲ್ಲಿ ಶೋಧ ನಡೆಸಲಾಗಿದೆ. ಅಲ್ ಕೈದಾ ಸಂಘಟನೆಗೆ ಸೇರಿದ ಕೆಲ ಬಾಂಗ್ಲಾದೇಶಿಯರು ಉಗ್ರವಾದಿ ಚಟುವಟಿಕೆಗಳಿಗೆ ಕುಮ್ಮಕ್ಕು ನೀಡುತ್ತಿರುವುದಾಗಿ ಎನ್.ಐ.ಎ. ತಿಳಿಸಿದೆ. ಬಾಂಗ್ಲಾದೇಶದ ಅಲ್ - ಕೈದಾ ಜಾಲದ ಪರ ಇರುವವರನ್ನು ಗುರಿಯಾಗಿಟ್ಟುಕೊಂಡು ಶೋಧ ನಡೆಸಲಾಗಿದೆ.

## ಸಾರ್ವಜನಿಕ ಪ್ರಕಟಣೆ

ನಾನು ಬಿ.ಲೋಕೇಶ ಬಿನ್ ಭೀಮಪ್ಪ, ಗುಮ್ಮನೂರು ಗ್ರಾಮ, ದಾವಣಗೆರೆ ತಾಲ್ಲೂಕು ವಾಸಿಯಾಗಿದ್ದು, ನನ್ನ ಹೆಸರಿನಲ್ಲಿರುವ ಅಣಜಿ ಗ್ರಾಮ ಪಂಚಾಯಿತಿಯಿಂದ 1996ರಲ್ಲಿ ಮಂಜೂರು ಮಾಡಿ ಹಕ್ಕು ಪತ್ರ ನೀಡಿದ್ದ ನಿವೇಶನ ಸಂಖ್ಯೆ 1, 30x40 ಅಡಿ ಅಳತೆಯ ಹಾಲಿ ಇ-ಸ್ವತ್ತು ನಂ. 151200203100300827, ಸದರಿ ಸೊತ್ತಿನ ಮೂಲ ನಿವೇಶನದ ಹಕ್ಕು ಪತ್ರ ದಿನಾಂಕ 24.04.2024 ರಂದು ಅಣಜಿ ಗ್ರಾಮದಲ್ಲಿ ಜೆರಾಕ್ಸ್ ಮಾಡಿಸಲು ಹೋದಾಗ ಆಕಸ್ಮಿಕವಾಗಿ ಕಳೆದಿರುತ್ತದೆ. ಈ ಸಂಬಂಧ ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಿನಾಂಕ : 5.11.2024 ರಂದು ದೂರು ದಾಖಲಿಸಲಾಗಿದೆ. ಸಿಕ್ಕವರು ಮೇಲ್ಕಂಡ ವಿಳಾಸಕ್ಕಾಗಲೀ, ಹತ್ತಿರದ ಪೊಲೀಸ್ ಠಾಣೆಗಾಗಲೀ ಅಥವಾ ಮೊ.ನಂ. **99162 43923**ಗೆ ತಿಳಿಸಲು ಕೋರುತ್ತೇನೆ.

**REQUIRED**
**Qualified Lab Technicians (DMLT)**
**Qualified Nurses (Female)**
Interested Candidates Can Contact :
91646 28481, 97425 88163
**Hi-Tech Clinical Laboratories (HCL)**
SS Speciality Clinic, Modi Compoud,
MCC `A' Block, Davanagere - 577002

**ಕಂಪನಿಯಲ್ಲಿ ಕೆಲಸಕ್ಕೆ ಬೇಕಾಗಿದ್ದಾರೆ**
**BANSAL ARADHYA STEEL PVT LTD**
Haluvarthy near Anagodu,
Davangere - 577 556.
**SSLC, PUC, ITI-any Trade, BSc.,**
**ವಯಸ್ಸು : 19 ರಿಂದ 35ರ ಒಳಗೆ**
**ನೇರ ಸಂದರ್ಶನದ ಸಮಯ : ಬೆಳಗ್ಗೆ 10.00 ರಿಂದ 4.00**

# ದೇವೇಗೌಡ ಒಬ್ಬ ಒಕ್ಕಲಿಗನನ್ನೂ ಬೆಳೆಯಲು ಬಿಟ್ಟಿಲ್ಲ : ಸಿದ್ದರಾಮಯ್ಯ



ಬೆಂಗಳೂರು, ನ. 11 - ದೇವೇಗೌಡರು ಮತ್ತು ಕುಮಾರಸ್ವಾಮಿ ಅವರು ಒಬ್ಬ ಒಕ್ಕಲಿಗನನ್ನೂ ಬೆಳೆಯಲು ಬಿಟ್ಟಿಲ್ಲ, ನಾನು ಹಿಂದುಳಿದವನು ಅಂತ ನನ್ನನ್ನು ವಿರೋಧಿಸುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದ್ದಾರೆ.

ವೈ.ಕೆ.ರಾಮಯ್ಯ, ನಾಗೇಗೌಡ, ಬಚ್ಚೇಗೌಡ, ವರದೇಗೌಡ, ಭೈರೇಗೌಡ ಸೇರಿ ಸಾಲು-ಸಾಲು ಒಕ್ಕಲಿಗರ ರಾಜಕೀಯ ಬದುಕನ್ನು ಮುಗಿಸಿದರು. ಅಷ್ಟೇ ಅಲ್ಲ, ಬೇರೆಯವರು ಒಕ್ಕಲಿಗ ನಾಯಕರಾಗಿ ಬೆಳೆಯದಂತೆ ಮಾಡುತ್ತಿದ್ದಾರೆ ಎಂದರು.

ಬುದ್ಧಿವಂತ, ರಾಜಕೀಯ ಪ್ರಜ್ಞೆ ಇರುವ ಒಕ್ಕಲಿಗರನ್ನು ದೇವೇಗೌಡರು ಬೆಳೆಯಲು ಬಿಡದೇ ಮುಗಿಸುತ್ತಾರೆ, ಈಗ ಡಿ.ಕೆ.ಶಿವಕುಮಾರ್, ಡಿ.ಕೆ.ಸುರೇಶ್ ಅವರನ್ನೂ ಮುಗಿಸುವ ಪ್ರಯತ್ನ ಮಾಡುತ್ತಿದ್ದಾರೆ, ಆದರೆ ಇದು ನಡೆಯಲ್ಲ ಎಂದು ಹೇಳಿದರು.

ಜಿ.ಟಿ.ದೇವೇಗೌಡರಿಗೂ ಎಚ್ಚರಿಸಿದ್ದೀನಿ, ಆ ಪಕ್ಷದಲ್ಲಿದ್ದರೆ ಮುಗಿಸುತ್ತಾರೆ, ಬೇಗ ಹೊರಗೆ ಬಂದ್ರೆ ನಿಮಗೆ ಒಳ್ಳೆಯದು, ಮನೆ ಮಗ ಅಂತಿದ್ದ ಬಿ.ಎಲ್.ಶಂಕರ್, ವೈ.ಕೆ.ರಾಮಯ್ಯ ಅವರನ್ನೇ ಮುಗಿಸಿದವರು ಇನ್ನು ಯೋಗೇಶ್ವರ್ ಅವರನ್ನು ಸಹಿಸುತ್ತಾರಾ? ಎಂದರು.

ನರೇಂದ್ರ ಮೋದಿ ಅವರಂತಹ ಸುಳ್ಳು ಪ್ರಧಾನಿಯನ್ನು ನಾನು ಹಿಂದೆಂದೂ ನೋಡಿಲ್ಲ, ಮೋದಿ ಮತ್ತೆ ಪ್ರಧಾನಿಯಾದರೆ ದೇಶ ಬಿಟ್ಟು ಹೋಗುವುದಾಗಿ ದೇವೇಗೌಡರು ಹೇಳಿದ್ದರು, ಈಗ ಮೋದಿ ಅವರನ್ನೇ ಯದ್ವಾತದ್ವಾ ಹೊಗಳುತ್ತಿದ್ದಾರೆ ಎಂದು ಮುಖ್ಯಮಂತ್ರಿ ಛೇಡಿಸಿದರು.

ಚುನಾವಣೆ ಮುಗಿದ ಮೇಲೆ ಗೃಹಲಕ್ಷ್ಮಿ ಸೇರಿ ಗ್ಯಾರಂಟಿಗಳನ್ನು ಸರ್ಕಾರ ಬಂದ್ ಮಾಡುತ್ತದೆ ಎಂದು ದೇವೇಗೌಡರು ಪರಮ ಸುಳ್ಳು ಹೇಳಿದ್ದಾರೆ. ಆದರೆ, ಒಂದು ಮಾತು ಹೇಳುವೆ, ಸಿದ್ದರಾಮಯ್ಯ ಒಮ್ಮೆ ಮಾತು ಕೊಟ್ಟರೆ ಯಾವುದೇ ಕಾರಣಕ್ಕೂ ತಪ್ಪಲ್ಲ, ನಮ್ಮ ಸರ್ಕಾರ ಯಾವ ಗ್ಯಾರಂಟಿಗಳನ್ನೂ ನಿಲ್ಲಿಸುವುದಿಲ್ಲ ಎಂದು ಘೋಷಿಸಿದರು.

ವಕ್ಫ್ ವಿಚಾರದಲ್ಲೂ ಬಿಜೆಪಿ ಜೊತೆ ಸೇರಿ ಸುಳ್ಳು ಹೇಳುತ್ತಿದ್ದಾರೆ, ಯಾವುದೇ ಕಾರಣಕ್ಕೂ ಒಬ್ಬ ರೈತರನ್ನೂ ಒಕ್ಕಲೆಬ್ಬಿಸುವುದಿಲ್ಲ ಎಂಬುದಾಗಿ ಅಧಿಕೃತ ಘೋಷಣೆ ಮಾಡಿದ್ದೇವೆ ಎಂದು ಪುನರುಚ್ಚರಿಸಿದರು.

# ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹಳ್ಳಿ ಮಕ್ಕಳದ್ದೇ ಮೇಲುಗೈ

ದಾವಣಗೆರೆ, ನ.11- ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಪ್ರೇರಣಾ ಕೋಶ ಉದ್ಘಾಟನೆ ಹಾಗೂ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಯಾಗಿ ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ನಗರದ ಸಮೃದ್ಧಿ ಅಕಾಡೆಮಿಯ ಸಂಸ್ಥಾಪಕ ನಿರ್ದೇಶಕ ಮಂಜುನಾಥ್ ಸಂಭಾಜಿ ಅವರು ಸ್ಪರ್ಧಾರ್ಥಿಗಳನ್ನು ಕುರಿತು ಈಗಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಹಳ್ಳಿಯ ಮಕ್ಕಳದೇ ಮೇಲುಗೈ ಎಂದರು.

ಹಳ್ಳಿಯಿಂದ ನಗರದ ಕಾಲೇಜುಗಳಿಗೆ ಬರುವ ಮಕ್ಕಳಲ್ಲಿ ಶ್ರದ್ಧೆ ಹಾಗೂ ನಿಷ್ಠೆಯಿಂದ ಶ್ರಮಪಡುವ ಗುಣವಿರುತ್ತದೆ. ಹಾಗೆಯೇ ನಗರದಲ್ಲಿರುವ ಮಕ್ಕಳಲ್ಲಿಯೂ ಸಹಾ ಆತ್ಮಸ್ಥೈರ್ಯವಿರುತ್ತದೆ. ಆದರೆ ಅವರಿಗೆ ಸರಿಯಾದ ಮಾರ್ಗದರ್ಶನ ಹಾಗೂ ತರಬೇತಿಯ ಅವಶ್ಯಕತೆ ಇರುತ್ತದೆ. ಈ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರದ ಅತ್ಯುತ್ತಮ ಕಾರ್ಯಕ್ರಮವಾದ ಪ್ರೇರಣಾ ಕೋಶದ ಅಡಿಯಲ್ಲಿ ಮಾರ್ಗದರ್ಶನ ನೀಡುವ ಸದುದ್ದೇಶವಾಗಿರುತ್ತದೆ.

ಸ್ಪರ್ಧಾರ್ಥಿಗಳು ಈ ಕಾರ್ಯಕ್ರಮದ ಸಂಪೂರ್ಣ ಉಪಯೋಗವನ್ನು ಪಡೆದುಕೊಂಡು ತಮ್ಮ ನೆಚ್ಚಿನ ಸರ್ಕಾರಿ ಉದ್ಯೋಗಗಳನ್ನು ಪಡೆದುಕೊಳ್ಳುವ ಮೂಲಕ ತಮ್ಮ ಕುಟುಂಬದ ಘನತೆ ಹಾಗೂ ಸಮಾಜದ ಸಧೃಡತೆಯನ್ನು ಹೆಚ್ಚಿಸಬೇಕೆಂದು ನೆರೆದಿದ್ದ ಸ್ಪರ್ಧಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಮಂಜಣ್ಣ ಅವರು, ಪ್ರೇರಣಾ ಕೋಶವನ್ನು ಉದ್ಘಾಟಿಸಿ ಸ್ಪರ್ಧಾತ್ಮಕ ಪರೀಕ್ಷೆಗಳ ಮಹತ್ವ ಹಾಗೂ ಯಶಸ್ಸಿನ ಮಾರ್ಗಗಳ ಬಗ್ಗೆ ಸುಲಲಿತವಾಗಿ ತಿಳಿಸಿಕೊಟ್ಟರು.

ಐಕ್ಯೂಎಸಿ ಸಂಚಾಲಕ ಡಾ. ಬೀಮಣ್ಣ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮದ ರುವಾರಿ ಡಾ. ಕಾವ್ಯಶ್ರೀ ಅವರು ಪ್ರೇರಣಾ ಕೋಶದ ಮೂಲಕ ವಿಧ್ಯಾರ್ಥಿಗಳ ಸಬಲೀಕರಣವಾಗುವ ಮಹತ್ವವನ್ನು ವಿವರಿಸಿದರು. ಕಾಲೇಜಿನ ಅಧೀಕ್ಷಕ ಶೇಷಪ್ಪ ಹಾಗೂ ಕಾಲೇಜಿನ ಸಿಬ್ಬಂದಿ ಉಪಸ್ಥಿತರಿದ್ದರು. ಕವನ ಹಾಗೂ ಕಲ್ಪನ ಪ್ರಾರ್ಥಿಸಿದರೆ, ಕೀರ್ತನ ವಂದಿಸಿದರು.



**ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿನ ಪ್ರೇರಣಾ ಕೋಶ ಉದ್ಘಾಟನೆಯಲ್ಲಿ ಸಮೃದ್ಧಿ ಅಕಾಡೆಮಿಯ ಸಂಸ್ಥಾಪಕ ನಿರ್ದೇಶಕ ಮಂಜುನಾಥ್ ಸಂಭಾಜಿ**

# ವ್ಯಕ್ತಿತ್ವ ವಿಕಸನಕ್ಕೆ ಅಧಾತ್ಮ ಅವಶ್ಯಕ : ಮಧುಕುಮಾರ್



ಚನ್ನಗಿರಿ, ನ.11- ಆಹಾರ, ಗಾಳಿ, ನೀರು, ವ್ಯಕ್ತಿಯ ದೈಹಿಕ ಬೆಳವಣಿಗೆಗೆ ಕಾರಣವಾದರೆ ವ್ಯಕ್ತಿಯ ವ್ಯಕ್ತಿತ್ವದ ವಿಕಸನಕ್ಕೆ ಅಧಾತ್ಮದ ಜ್ಞಾನ ಅವಶ್ಯಕವಾಗಿದೆ ಎಂದು ಚನ್ನಗಿರಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಲ್. ಜಿ.ಮಧುಕುಮಾರ್ ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಗವಿಮಠದ ಶ್ರೀ ಹಾಲಸ್ವಾಮಿ ಸಮುದಾಯ ಭವನದಲ್ಲಿ ಭಾನುವಾರ ಆಯೋಜಿಸಿದ್ದ 52ನೇ ವರ್ಷದ ಇಷ್ಟಲಿಂಗ ಶಿವಯೋಗಾನುಷ್ಠಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮನುಷ್ಯನ ಅಂತರಂಗ ಮತ್ತು ಬಹಿರಂಗ ಎರಡನ್ನೂ ಪರಿಶುದ್ದಗೊಳಿಸಲು ಅಧಾತ್ಮದ ಜ್ಞಾನ ಸಂಪತ್ತು ಅಗತ್ಯವಾಗಿ ಬೇಕಾಗುತ್ತದೆ. ಇಂದಿನ ಯಾಂತ್ರಿಕ ಯುಗದಲ್ಲಿನ ಉದ್ವೇಗ, ಒತ್ತಡ, ಆತಂಕಗಳ ಸುಳಿಗೆ ಸಿಲುಕಿರುವ ಜನಸಮುದಾಯಕ್ಕೆ ಮಠಗಳ ಆಶ್ರಯದಲ್ಲಿ ನಡೆಯುವ ಅಧಾತ್ಮದ ಕಾರ್ಯಕ್ರಮಗಳು ನವಚೈತನ್ಯವನ್ನು ತಂದು ಕೊಡುತ್ತವೆ ಎಂದರು.

ಸೂರ್ಯ-ಚಂದ್ರರ ಮೇಲೆ ಆವಿಷ್ಕಾರಗಳು ಆಗುತ್ತಿರುವ ಇಂದಿನ ದಿನಮಾನಗಳಲ್ಲಿ ಮನುಷ್ಯ-ಮನುಷ್ಯರ ಮಧ್ಯೆ ದ್ವೇಷ, ಅಸೂಯೆ, ಈರ್ಷೆ ಮನೋಭಾವದ ಸಣ್ಣತನದ ಗೋಡೆಗಳನ್ನು ಕಟ್ಟಿ ಕೊಳ್ಳಲಾಗುತ್ತಿದೆ. ಮಾನವೀಯ ಸಂಬಂಧಗಳಿಗೆ ಬೆಲೆ ಇಲ್ಲದಂತಾಗಿರುವ ಇಂದಿನ ದಿನಮಾನ ಗಳಲ್ಲಿ ಗುರು ಪರಂಪರೆಯಲ್ಲಿ ನಡೆಯುವ ಧಾರ್ಮಿಕ ಸಮ್ಮೇಳನಗಳು ಹಾಗೂ ಅಧಾತ್ಮ ಕಾರ್ಯಕ್ರಮಗಳು ನಮ್ಮಲ್ಲಿನ ಜಡತ್ವ, ಸಂಕುಚಿತ ಗುಣಗಳನ್ನು ಹೋಗಲಾಡಿಸಿ, ವಿಶಾಲ ಮನೋಭಾವನೆಗಳನ್ನು ಬೆಳೆಸಲು ಸಹಕಾರಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಗವಿಮಠದ ಶ್ರೀ ಶಿವಕುಮಾರ ಹಾಲಸ್ವಾಮಿಗಳು ಸಾನ್ನಿಧ್ಯವನ್ನು ವಹಿಸಿದ್ದರು. ಮಠದ ಕಲಾವಿದರಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಮಠದ ಸಂಚಾಲಕ ಕೆ.ಎಂ.ವೀರಯ್ಯ, ಅಂಗಡೇರ ನಾಗರಾಜಪ್ಪ ಸುಧಾಕರ್, ಮಂಜುನಾಥ್ ಪೂಜಾರ್, ಭಾಗ್ಯ ಮಲ್ಲಿಕಾರ್ಜುನಸ್ವಾಮಿ ಮತ್ತಿತರರು ಇದ್ದರು.

# ವಿದ್ಯಾರ್ಥಿಗಳು ಓಬವ್ವನ ಇತಿಹಾಸ ತಿಳಿಯಲಿ

### ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಸೈಯದ್ ಕಲೀಂವುಲ್ಲಾ



ಜಗಳೂರು, ನ.11- ಮಹಿಳೆಯರ ಧೈರ್ಯ, ಶೌರ್ಯದ ಪ್ರತೀಕವಾಗಿರುವ ವೀರ ವನಿತೆ ಓಬವ್ವನ ಇತಿಹಾಸವನ್ನು ವಿದ್ಯಾರ್ಥಿಗಳು ತಿಳಿಯಬೇಕಿದೆ ಎಂದು ತಹಶೀಲ್ದಾರ್ ಸೈಯದ್ ಕಲೀಂವುಲ್ಲಾ ಹೇಳಿದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ, ತಾಲ್ಲೂಕು ಛಲವಾದಿ ಮಹಾಸಭಾ ವತಿಯಿಂದ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವೀರ ವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಆತ್ಮಸ್ಥೈರ್ಯ ಹಾಗೂ ಸಮಯ ಪ್ರಜ್ಞೆಯಿಂದ ನಾಡಿನ ರಕ್ಷಣೆಗಾಗಿ ಪಣತೊಟ್ಟು ಎದುರಾಳಿಗಳ ವಿರುದ್ಧ ಹೋರಾಡಿದ ಒನಕೆ ಓಬವ್ವ ಆದರ್ಶ ವ್ಯಕ್ತಿಯಾಗಿದ್ದಾರೆ. ಹಾಗಾಗಿ ಪ್ರತಿಯೊಬ್ಬ ಮಹಿಳೆಯರು ಓಬವ್ವನ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಛಲವಾದಿ ಸಮಾಜದ ಮುಖಂಡರಾದ ಸಿ. ತಿಪ್ಪೇಸ್ವಾಮಿ, ಬಿ. ಪರಮೇಶ್ವರಪ್ಪ ಮಾತನಾಡಿದರು.

ಕಾರ್ಯಕ್ರಮದಲ್ಲಿ ಛಲವಾದಿ ಮಹಾಸಭಾದ ತಾಲ್ಲೂಕು ಅಧ್ಯಕ್ಷ ನಿಜಲಿಂಗಪ್ಪ, ಕಾರ್ಯದರ್ಶಿ ವೀರಸ್ವಾಮಿ, ಪ್ರಾಚಾರ್ಯ ಜಗದೀಶ್, ಉಪನ್ಯಾಸಕ ಮಂಜುನಾಥ ರೆಡ್ಡಿ, ಧನ್ಯಕುಮಾರ್, ಎಚ್.ಎಂ. ಹೊಳೆ, ಮಲೆಮಾಚಿಕೆರೆ ಸತೀಶ್, ಮಾದಿಹಳ್ಳಿ ಮಂಜಪ್ಪ, ಉಪನ್ಯಾಸಕರಾದ ಸ್ವಪ್ನ ಇದ್ದರು.

# ಪೇಜರ್ ದಾಳಿ ಒಪ್ಪಿಕೊಂಡ ಇಸ್ರೇಲ್ ಪ್ರಧಾನಿ

ಜೆರುಸಲೇಮ್, ನ. 11 - ಕಳೆದ ಸೆಪ್ಟೆಂಬರ್ ತಿಂಗಳಲ್ಲಿ ಹೆಜ್ಬುಲ್ಲ ಉಗ್ರರ ಮೇಲೆ ನಡೆಸಲಾದ ಪೇಜರ್ ಹಾಗೂ ವಾಕಿ-ಟಾಕಿ ದಾಳಿಗಳಲ್ಲಿ ಇಸ್ರೇಲ್ ಭಾಗಿಯಾಗಿತ್ತು ಎಂದು ಪ್ರಧಾನ ಮಂತ್ರಿ ಬೆಂಜಮಿನ್ ನೇತನ್ಯಾಹು ಮೊದಲ ಬಾರಿಗೆ ಒಪ್ಪಿಕೊಂಡಿದ್ದಾರೆ. ಈ ದಾಳಿಗಳಲ್ಲಿ 39 ಜನ ಸಾವನ್ನಪ್ಪಿದ್ದರು ಹಾಗೂ 3 ಸಾವಿರಕ್ಕೂ ಹೆಚ್ಚು ಜನ ಗಾಯಗೊಂಡಿದ್ದರು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿದ್ದವು.

ಪೇಜರ್ ಕಾರ್ಯಾಚರಣೆ ಹಾಗೂ ಹೆಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲ ನಿವಾರಿಸುವ ಕಾರ್ಯಾಚರಣೆಯನ್ನು ಕೈಗೊಳ್ಳಲಾಗಿತ್ತು. ರಕ್ಷಣಾ ಸಂಸ್ಥೆಗಳ ಉನ್ನತ ಅಧಿಕಾರಿಗಳ ವಿರೋಧದ ನಡುವೆಯೂ ಈ ಕಾರ್ಯಾಚರಣೆ ನಡೆಸಲಾಗಿತ್ತು ಎಂದು ನೇತನ್ಯಾಹು ತಿಳಿಸಿದ್ದಾರೆ.

ಪೇಜರ್ ದಾಳಿಯ ಹೊಣೆಯನ್ನು ಇಸ್ರೇಲ್ ಬಹಿರಂಗವಾಗಿ ಒಪ್ಪಿಕೊಂಡಿರಲಿಲ್ಲ. ಆದರೆ ಪೇಜರ್ ಮತ್ತು ವಾಕಿ - ಟಾಕಿ ದಾಳಿಗಳಲ್ಲಿ ಇಸ್ರೇಲ್ ಭಾಗಿಯಾಗಿದೆ ಎಂದು ಅಂದಾಜಿಸಲಾಗಿತ್ತು.

ಸೆಪ್ಟೆಂಬರ್ 16ರಂದು ಲೆಬನಾನ್ ಹಾಗೂ ಸಿರಿಯಾಗಳಲ್ಲಿ ಹೆಜ್ಬುಲ್ಲ ಉಗ್ರರು ಬಳಸುವ ಸಾವಿರಾರು ಪೇಜರ್‌ಗಳು ಸಿಡಿದಿದ್ದವು. ಮರುದಿನ ಸೆಪ್ಟೆಂಬರ್ 17ರಂದು ವಾಕಿ-ಟಾಕಿಗಳು ಸಿಡಿದಿದ್ದವು.

ನೇತನ್ಯಾಹು ಅವರು ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಅವರನ್ನು ಸಂಪುಟದಿಂದ ವಜಾಗೊಳಿಸಿದ್ದರು. ಯುದ್ಧದ ಶ್ರೇಯವನ್ನು ತಾವೇ ಪಡೆಯಲು ನೇತನ್ಯಾಹು ಈ ಹೇಳಿಕೆ ನೀಡಿದ್ದಾರೆ ಎನ್ನಲಾಗುತ್ತಿದೆ.

# 14ರಿಂದ ನಗರದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ

ದಾವಣಗೆರೆ, ನ.11- ಜಿಲ್ಲಾ, ನಗರ ಕೇಂದ್ರ ಗ್ರಂಥಾಲಯದ ಸಹಯೋಗದೊಂದಿಗೆ ಇದೇ ದಿನಾಂಕ 14 ರಿಂದ 20 ರವರೆಗೆ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಿಸು ತ್ತಿದ್ದು, ಇದರ ಅಂಗವಾಗಿ ದಿನಾಂಕ 12 ರಂದು ದಾವಣಗೆರೆ ನಗರ ವ್ಯಾಪ್ತಿಯಲ್ಲಿ ಮತ್ತು ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಪ್ರಾಂಶುಪಾಲರು ಪ್ರತಿ ಶಾಲಾ, ಕಾಲೇಜುಗಳಿಂದ ಇಬ್ಬರು ವಿದ್ಯಾರ್ಥಿಗಳನ್ನು ಇದೇ ದಿನಾಂಕ 11 ರೊಳಗಾಗಿ ಸಿಲ್ವರ್ ಜ್ಯೂಬಿಲಿ ಶಾಖಾ ಗ್ರಂಥಾಲಯ, ಬಡಾವಣೆ ಪೊಲೀಸ್ ಠಾಣೆ ಎದುರು. ಹೈಸ್ಕೂಲ್ ಮೈದಾನ ಹತ್ತಿರ, ಇಲ್ಲಿ ನೋಂದಾಯಿಸಕೊಳ್ಳಬಹುದು.

ದಿನಾಂಕ 12 ರಂದು ಬೆಳಿಗ್ಗೆ 10.30 ರಿಂದ 11.30 ರವರೆಗೆ ನಗರದ ಸಿಲ್ವರ್ ಜ್ಯೂಬಿಲಿ ಶಾಖಾ ಗ್ರಂಥಾಲಯ ದಲ್ಲಿ ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ, 2 ರಿಂದ 7ನೇ ತರಗತಿಯವರೆಗೆ, ವಿಷಯ: ನಮ್ಮ ಪರಿಸರದ ಬಗ್ಗೆ.

ದಿನಾಂಕ 12 ರಂದು ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ಪ್ರಬಂಧ ಸ್ಪರ್ಧೆ 8 ರಿಂದ 10 ನೇ ತರಗತಿಯವರೆಗೆ ವಿಷಯ ಕನ್ನಡ ಸಾಹಿತ್ಯಕ್ಕೆ ಜ್ಞಾನಪೀಠ ಪ್ರಶಸ್ತಿ ಪಡೆದಂತಹ ಸಾಹಿತಿಗಳ ಕುರಿತು.

ದಿನಾಂಕ 12 ರಂದು ಮಧ್ಯಾಹ್ನ 12 ರಿಂದ 1 ರವರೆಗೆ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ, ದಾವಣಗೆರೆ ಜಿಲ್ಲೆಯ ಪ್ರೇಕ್ಷಣೀಯ ಸ್ಥಳದ ವಿಷಯದ ಕುರಿತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

# ಕರಾಟೆ : ನಿಧಿ ಬೇತೂರ್‌ಗೆ ಚಿನ್ನ



ದಾವಣಗೆರೆ, ನ. 11 - ಮೈಸೂರಿನಲ್ಲಿ ನಡೆದ ರಾಷ್ಟ್ರ ಮಟ್ಟದ ಕರಾಟೆ ಚಾಂಪಿಯನ್ ಶಿಪ್ (ಮೈಸೂರು ಕಪ್ 2024) ಸ್ಪರ್ಧೆಯ 10-11 ವರ್ಷದ ಸಬ್ ಜ್ಯೂನಿಯರ್ ವಿಭಾಗದಲ್ಲಿ ನಗರದ ನಿಧಿ ಬೇತೂರ್ ಕರಾಟೆ ಸ್ಪರ್ಧೆಯ ಕಟಾ ಹಾಗೂ ಕುಮಿಟೆ ವಿಭಾಗಗಳಲ್ಲಿ ತಲಾ 1 ಚಿನ್ನದ ಪದಕ ಪಡೆದಿದ್ದಾಳೆ. ಕೆ.ಪಿ. ಜೋಸ್ ಅವರಿಂದ ತರಬೇತಿ ಪಡೆದಿರುವ ನಗರದ ನಿಜಲಿಂಗಪ್ಪ ಬಡಾವಣೆಯ ಬಾಪೂಜಿ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ನಿಧಿ ಅಭಿಷೇಕ್ ಬೇತೂರು ಹಾಗೂ ಶ್ವೇತಾ ದಂಪತಿ ಪುತ್ರಿ.

# ಅತಿಥಿ ಶಿಕ್ಷಕರ ನೇಮಕಕ್ಕೆ ಅರ್ಜಿ

ದಾವಣಗೆರೆ, ನ.11- ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಹೊಸದಾಗಿ ಮಂಜೂರಾಗಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆ ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಇದೇ ದಿನಾಂಕ 14 ರೊಳಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ಇಲ್ಲಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಮಾಹಿತಿಗಾಗಿ ದೂ.ಸಂ:08192-250022 ನ್ನು ಸಂಪರ್ಕಿಸಬಹುದು.

# ಮಾತಾ ಶಾಲೆಯಲ್ಲಿ ಕರ್ನಾಟಕ ರಾಜ್ಯೋತ್ಸವ



**ರಾಣೇಬೆನ್ನೂರು**

ರಾಣೇಬೆನ್ನೂರು, ನ.11- ಚೋಳಮರಡೇಶ್ವರ ನಗರದಲ್ಲಿರುವ ಮಾತಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ 69ನೇ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಶಾಲಾ ಕಾರ್ಯದರ್ಶಿ ಲತಾ ಸಿ. ಎಸ್ ಧ್ವಜಾರೋಹಣ ಮಾಡಿದರು.

ಮುಖ್ಯೋಪಾಧ್ಯಾಯ ಚನ್ನಬಸಪ್ಪ, ಮಹಮ್ಮದ್ ರಫೀಕ್ ರಟ್ಟಿಹಳ್ಳಿ, ಸಿಬ್ಬಂದಿ ವರ್ಗದ ನಾಗರಾಜ್ ಎಮ್, ಪುಷ್ಪ ಉಜ್ಜೇರ್, ಆಶಾ ಬಿ.ಎ, ಗೀತಾ ಕಮ್ಮಾರ, ಪ್ರವೀಣಗೌಡ ಪಾಟೀಲ್, ಶಹರಬಾನು ಹಾಜೀ, ಮಮತ ಕೆ.ಎಮ್, ಐಶ್ವರ್ಯ ಎಸ್, ಚೈತ್ರ ಸಿ.ಪಿ, ದೀಪಾ ಕೆ, ಅನಿತಾ ಪಿ.ಎಮ್, ಈರಮ್ಮ, ಬಸವರಾಜ ಕಣವಿ ಮತ್ತಿತರರು ಉಪಸ್ಥಿತರಿದ್ದರು.

# 16ರಂದು ನಗರದಲ್ಲಿ ಭಗವದ್ಗೀತೆ ಸ್ಪರ್ಧೆ

ದಾವಣಗೆರೆ, ನ. 11 - ನಗರದ ಬ್ರಾಹ್ಮಣ ಸಮಾಜ ಸೇವಾ ಸಂಘದ ಮಹಿಳಾ ವಿಭಾಗದಿಂದ ಗೀತಾ ಜಯಂತಿ ಅಂಗವಾಗಿ ಭಗವದ್ಗೀತೆ ಸ್ಪರ್ಧೆಯನ್ನು ಇದೇ ದಿನಾಂಕ 16 ರ ಶನಿವಾರ ಬೆಳಿಗ್ಗೆ 12 ಗಂಟೆಗೆ ನಗರದ ಶ್ರೀ ಶಾರದಾಂಬ ದೇವಸ್ಥಾನದಲ್ಲಿ ಏರ್ಪಡಿಸಲಾಗಿದೆ.

**ಸ್ಪರ್ಧೆಯ ವಿವರ:** ಅಧ್ಯಾಯ ಒಂಭತ್ತು, ರಾಜ ವಿದ್ಯಾ ರಾಜಗುಹ್ಯ ಯೋಗಃ ಒಂದರಿಂದ 6 ವರ್ಷದ ಮಕ್ಕಳಿಗೆ ಮೊದಲಿಂದ 5 ಶ್ಲೋಕ, ಏಳರಿಂದ 12 ವರ್ಷದ ಮಕ್ಕಳಿಗೆ ಮೊದಲಿಂದ 10 ಶ್ಲೋಕ, 13 ರಿಂದ 20 ವರ್ಷದವರಿಗೆ ಮೊದಲಿಂದ 15 ಶ್ಲೋಕ. ದಾವಣಗೆರೆ ತಾಲ್ಲೂಕಿನವರು ಮಾತ್ರ ಭಾಗವಹಿಸಲು ಅವಕಾಶವಿದ್ದು, 15 ನಿಮಿಷ ಮುಂಚಿತವಾಗಿ ಬಂದು ಹೆಸರು ನೋಂದಾಯಿಸಬೇಕು. ವಿವರಗಳಿಗೆ ಶ್ರೀಮತಿ ಚಂದ್ರಶೇಖರ ಅಡಿಗ (9964027146), ಶ್ರೀಮತಿ ನಳಿನಿ ಅಚ್ಯುತ್ (9886058866)ಗೆ ಸಂಪರ್ಕಿಸಬಹುದು.

# ಹರಿಹರ : ಪರಿಶಿಷ್ಟ ಜಾತಿ ರೈತರಿಂದ ಅರ್ಜಿ ಆಹ್ವಾನ

ಹರಿಹರ, ನ.11- ತಾಲ್ಲೂಕಿನ ತೋಟಗಾರಿಕೆ ಇಲಾಖೆಯಿಂದ 2025-26ನೇ ಸಾಲಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ನರೇಗಾದಡಿ ಸಣ್ಣ, ಅತಿ ಸಣ್ಣ ರೈತರು ಇದೇ ದಿನಾಂಕ 30 ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಅಥವಾ ಆಯಾ ಗ್ರಾಮ ಪಂಚಾಯತಿಗೆ ಅರ್ಜಿ ಸಲ್ಲಿಸಬಹುದು.


**ಸೈಟ್ ಮಾರಾಟಕ್ಕೆ (KHB)**
ಕರ್ನಾಟಕ ಗೃಹ ಮಂಡಳಿ
120 ಅಡಿ ರಸ್ತೆಗೆ ಕಮರ್ಷಿಯಲ್ 40x60 ಉತ್ತರ (84 ಲಕ್ಷ)
ಕಿರಣ್ ಬೂಸ್ನೂರ್ (ಏಜೆಂಟ್)
98440-63409, 97315-63409
(ನೇರವಾಗಿ ಮಾಲೀಕರು)

**ಸೈಟ್‌ಗಳು ಮಾರಾಟಕ್ಕಿವೆ**
ಡಾಲರ್ಸ್ ಕಾಲೋನಿಯಲ್ಲಿ ಡಾಲರ್ಸ್ ಕಾಲೋನಿ ಪಕ್ಕದ ಲೇಔಟ್‌ನಲ್ಲಿ 40x60, 40x60 North ಅಕ್ಕ-ಪಕ್ಕ 40 ಅಡಿ ರೋಡಿಗಿದೆ, 30x40 North, 30x40 South, 30x50 North.
ಐನಳ್ಳಿ ಚನ್ನಬಸಪ್ಪ ಏಜೆಂಟ್
99166 12110

**ಸೈಟುಗಳು ಮಾರಾಟಕ್ಕಿವೆ**
ಹದಡಿ ರಸ್ತೆ, ಶಿರಮಗೊಂಡನಹಳ್ಳಿ ಸುತ್ತ-ಮುತ್ತ 30x50 ಪಶ್ಚಿಮ ಅಕ್ಕ-ಪಕ್ಕ, 30x46 ಪೂರ್ವ ಅಕ್ಕ-ಪಕ್ಕ, 30x50 ಪೂರ್ವ, 30x40 ಪಶ್ಚಿಮ.
ಸ್ವಾಮಿ ಏಜೆಂಟ್, ವಿದ್ಯಾನಗರ
97421 44715

**ಬೇಕಾಗಿದ್ದಾರೆ**
ಸ್ಯಾನಿಟರಿ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ. ಪ್ಲಂಬಿಂಗ್ ಕ್ಷೇತ್ರದಲ್ಲಿ ಅನುಭವ ಇದ್ದವರಿಗೆ ಮೊದಲ ಆದ್ಯತೆ.
ಸಪ್ತಗಿರಿ ಪೈಪ್ಸ್ ಅಂಡ್ ಟ್ಯಾಪ್ಸ್
ಹದಡಿ ರಸ್ತೆ, ದಾವಣಗೆರೆ.
98446 49626, 90080 58121

**ಸೈಟ್, ಮನೆ ಮಾರಿಸುತ್ತೇವೆ, ಕೊಡಿಸುತ್ತೇವೆ**
ಕೇವಲ ಅರ್ಧ ಪರ್ಸೆಂಟ್ (1/2%) ಕಮೀಷನ್‌ಗೆ
ಕಿರಣ್ ಬೂಸ್ನೂರ್ (ಏಜೆಂಟ್)
98440 63409, 97315 63409

**ಮನೆ ಕ್ಲೀನಿಂಗ್ ಮಾಡಿಕೊಡಲಾಗುವುದು**
ಮನೆ ಕ್ಲೀನಿಂಗ್ ಮತ್ತು ಹಳೆಮನೆ ಬಾಡಿಗೆ ಕೊಡುವ ಮನೆಗಳನ್ನು ಕ್ಲೀನಿಂಗ್ ಮಾಡಿಕೊಡಲಾಗುವುದು. ಹಾಗೂ ಬಾತ್ ರೂಂ ಆಸಿಡ್ ವಾಶ್ ಮಾಡಿಕೊಡಲಾಗುವುದು.
99863 61250, 80730 24690

**ತಕ್ಷಣ ಬೇಕಾಗಿದ್ದಾರೆ**
25 ವರ್ಷದೊಳಗಿನ ಯುವಕ/ಯುವತಿಯರು ದಾವಣಗೆರೆ ನ್ಯೂರೋಥೆರಪಿ ಕೇಂದ್ರದಲ್ಲಿ ಕೆಲಸ, ಉಚಿತ ತರಬೇತಿ, 9 ರಿಂದ 12 ಸಾವಿರ ಸಂಬಳ, ಉಚಿತ ವಸತಿ ಆಸಕ್ತರು ಇಂದೇ ಸಂಪರ್ಕಿಸಿ.
99726 00713

**ಮನೆ ಲೀಸ್‌ಗೆ ಇದೆ**
ಡಬಲ್ ಬೆಡ್ ರೂಮ್‌ಗಳನ್ನು ಹೊಂದಿರುವ ಹೊಸ ಮನೆ ಲೀಸ್‌ಗಾಗಿ ಸಂಪರ್ಕಿಸಿ : ಕೊಂಡಜ್ಜಿ ರಸ್ತೆ, ವಿನಾಯಕ ಪಬ್ಲಿಕ್ ಸ್ಕೂಲ್ ಹಿಂಭಾಗ, ದಾವಣಗೆರೆ.
95356 10817

**HOUSE FOR RENT**
# 5628/D-23, "Shivaratna", 2 BHK, ground floor, 4th main, 6th cross (left) East facing, Near, Indoor Neharu Stadium, SS Badavane, 'B' block,
94489 29509

**ಸೈಟ್ ಮಾರಾಟಕ್ಕೆ**
ಶಾಮನೂರಿನ ಶಿವ-ಪಾರ್ವತಿ ಲೇಔಟ್ 40 ಅಡಿ ರಸ್ತೆಗೆ (ಬೋರ್ ನೀರು ಇದೆ) 40x58.5 ಪಶ್ಚಿಮ (96 ಲಕ್ಷ)
ಕಿರಣ್ ಬೂಸ್ನೂರ್ (ಏಜೆಂಟ್)
98440 63409, 97315 63409
(ನೇರವಾಗಿ ಮಾಲೀಕರು)

**ಮಳಿಗೆ ಬಾಡಿಗೆಗಿದೆ**
KSRTC ಹೊಸ ಬಸ್ ನಿಲ್ದಾಣದ ಪಕ್ಕ 4ಸೀಜನ್ ಹೋಟೆಲ್‌ನ ಎದುರಿಗೆ 2ನೇ ಮಹಡಿಯಲ್ಲಿ 18x50 ಅಳತೆ ಇರುವ ಕಛೇರಿಗೆ ಸೂಕ್ತವಾದ ಮಳಿಗೆ ಬಾಡಿಗೆಗಿದೆ. ಸಂಪರ್ಕಿಸಿ:
99644 93693, 89705 26905

**ಸೈಟ್ ಮಾರಾಟಕ್ಕಿದೆ**
ಪಿ.ಜೆ. ಬಡಾವಣೆ, 8ನೇ ಮೇನ್, 8ನೇ ಕ್ರಾಸ್ # 402, ಅಳತೆ 22x100 ಅಡಿ, ಉತ್ತರಾಭಿ ಮುಖ
96117 94684
86187 07118

**ಕೆಲಸಕ್ಕೆ ಬೇಕಾಗಿದ್ದಾರೆ**
ಶಿವಸಂಗಮ ಚಿಟ್ಸ್ ಪ್ರೈ.ಲಿ.
ಶಿವಸಂಗಮ ಫೈನಾನ್ಸ್ (ರಿ)
ದಾವಣಗೆರೆ ಶಾಖೆಯಲ್ಲಿ ಮಾರ್ಕೆಟಿಂಗ್ & ರಿಕವರಿ ಎಕ್ಸಿಕ್ಯೂಟಿವ್ ಬೇಕಾಗಿದ್ದಾರೆ. ಸ್ಥಳ : ಡಾ. ಬಿ.ಆರ್. ಶಿವಶಂಕರ ನಾಗರತ್ನಮ್ಮ ಸಂಕೀರ್ಣ, ಪಿ.ಜೆ. ಬಡಾವಣೆ, 4ನೇ ಮೇನ್, ರಾಮ್ ಅಂಡ್ ಕೋ ಹತ್ತಿರ, ದಾವಣಗೆರೆ.
73533 29440, 81972 20933

**ಬೇಕಾಗಿದ್ದಾರೆ**
ಹರಿಹರದಲ್ಲಿರುವ ಪೆಟ್ರೋಲ್ ಬಂಕ್‌ನಲ್ಲಿ ಲೆಕ್ಕ ಮಾಡಲು ಬೇಕಾಗಿದ್ದಾರೆ.
63641 33480
70195 88900

**ಬೇಕಾಗಿದ್ದಾರೆ**
ದಾವಣಗೆರೆ ತಾಲ್ಲೂಕು ಆನಗೋಡು ಹತ್ತಿರದ ತೋಟವನ್ನು ನೋಡಿಕೊಳ್ಳಲು ಅನುಭವವಿರುವ ಸಣ್ಣ ಕುಟುಂಬ ಬೇಕಾಗಿದೆ. ಆಕರ್ಷಕ ಸಂಬಳ, ವಸತಿ ಸೌಕರ್ಯವಿರುತ್ತದೆ.
90353 62613

**ಬೇಕಾಗಿದ್ದಾರೆ**
ದಾವಣಗೆರೆ ಸೌಹಾರ್ದ ಸಂಸ್ಥೆಗೆ ಕೆಲಸಕ್ಕೆ ಬೇಕಾಗಿದ್ದಾರೆ.
* ಕಲೆಕ್ಷನ್ ಬಾಯ್ * ಅಕೌಂಟೆಂಟ್ * ಆಫೀಸ್ ಬಾಯ್.
ವಯೋಮಿತಿ 20- 40 ವರ್ಷ
ESI & PF ಸೌಲಭ್ಯವಿದೆ.
8050322279, 7847840368

**ಬೇಕಾಗಿದ್ದಾರೆ**
ಟಾಟಾ ಪವರ್ ಸೋಲಾರ್‌ನಲ್ಲಿ ಮಾರ್ಕೆಟಿಂಗ್ ಮಾಡಲು ಪಿಯುಸಿ ಅಥವಾ ಡಿಗ್ರಿ ಮುಗಿಸಿರುವ ಹುಡುಗರು ಬೇಕಾಗಿದ್ದಾರೆ
ಮೆ. ಬಸವಶ್ರೀ ಸೋಲಾರ್ ಟೆಕ್ನಾಲಜೀಸ್
ನಂ. 43H, ಎಸ್‌ಜೆಜೆಎಂ ಕಾಂಪ್ಲೆಕ್ಸ್, ಜಯದೇವ ಸರ್ಕಲ್, ಹದಡಿ ರಸ್ತೆ, ದಾವಣಗೆರೆ.
99001 42052

**ರಕ್ತ ದಾನ ಶ್ರೇಷ್ಠ ದಾನ**

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಪ್ರತಿಪಾದಿತವಾದ ವಸ್ತು, ವಿಷಯ, ವಿಚಾರಗಳು, ಜಾಹೀರಾತುದಾರರ ಅಭಿಪ್ರಾಯ ಆಗಿರುತ್ತವೆಯೇ ಹೊರತು ಆ ಅಭಿಪ್ರಾಯಗಳಿಗೆ ಪತ್ರಿಕೆ ಯಾವುದೇ ರೀತಿಯಿಂದ ಹೊಣೆಯಲ್ಲ.
ಅವುಗಳಲ್ಲಿನ ಮಾಹಿತಿ - ವಸ್ತು ಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

**ಬೇಕಾಗಿದ್ದಾರೆ**
ನಗರದ ಪ್ರತಿಷ್ಠಿತ ಸಿಸಿ ಟಿವಿ ಕ್ಯಾಮೆರಾ ಮತ್ತು ಕಂಪ್ಯೂಟರ್ ಸೇಲ್ಸ್ & ಸರ್ವೀಸ್ ಶೋ ರೂಂಗೆ ಸೇಲ್ಸ್ ಎಕ್ಸಿಕ್ಯೂಟಿವ್ ಬೇಕಾಗಿದ್ದಾರೆ. ಅನುಭವವುಳ್ಳವರಿಗೆ ಆದ್ಯತೆ. ಸಂಪರ್ಕಿಸಿ :
ಕ್ಯಾಮ್ ಕೇರ್
PJ ಬಡಾವಣೆ 5ನೇ ಮೇನ್, ದಾವಣಗೆರೆ.
99161 11194

**ನಾನ್‌ವೆಜ್ ಹೋಟೆಲ್ ಬಾಡಿಗೆಗಿದೆ**
ಶಾಮನೂರು ರಸ್ತೆ, MRP ಶಾಪ್ ಪಕ್ಕದಲ್ಲಿರುವ ಸುಸಜ್ಜಿತವಾದ ನಾನ್‌ವೆಜ್ ಹೋಟೆಲ್ ಬಾಡಿಗೆಗಿದೆ.
98441 27137

**ಜಮೀನು ಮಾರಾಟಕ್ಕಿದೆ**
ವಿಜಯನಗರ ಜಿಲ್ಲೆ ಹರಪನಹಳ್ಳಿ ತಾಲ್ಲೂಕು ದುಗ್ಗಾವತಿ ಗ್ರಾಮಕ್ಕೆ ಸೇರಿದ ಹೈದ್ರಾಬಾದ್ ಟು ಮಂಗಳೂರು ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ವಾಣಿಜ್ಯ ಉಪಯೋಗಕ್ಕೆ ಅನುಕೂಲವಾದ 2 ಎಕರೆ 90 ಸೆಂಟ್ಸ್ ಜಮೀನು ಮಾರಾಟಕ್ಕಿದೆ. ಸಂಪರ್ಕಿಸಿ :
99024 90165

**ಹೋಟೆಲ್ ಮಾರಾಟಕ್ಕಿದೆ**
ಲಕ್ಷ್ಮಿ ಫ್ಲೋರ್ ಮಿಲ್ ಹತ್ತಿರ, ದಾವಣಗೆರೆ - 4.
84948 20288

**ಅಡುಗೆ ಮಾಡುವವರು ಬೇಕಾಗಿದ್ದಾರೆ**
ಕೆ. ಬಿ. ಬಡಾವಣೆ ಕಿರವಾಡಿ ಲೇಔಟ್‌ನಲ್ಲಿರುವ ಮನೆಗೆ ಸಸ್ಯಹಾರಿ ಅಡುಗೆ ಮಾಡುವವರು ಬೇಕಾಗಿದ್ದಾರೆ. ಸಂಪರ್ಕಿಸಿ
98807 39392

**ಶ್ರೀ ಸಾಯಿ ಫೈನಾನ್ಸ್ (ರಿ)**
ನಮ್ಮಲ್ಲಿ ವ್ಯಾಪಾರಿಗಳಿಗೆ ಫೈನಾನ್ಸ್ ನೀಡಲಾಗುವುದು (ಹೋಟೆಲ್, ಬಟ್ಟೆ ಅಂಗಡಿ, ರೆಸ್ಟೋರೆಂಟ್, ಪ್ರಾವಿಜನ್ ಸ್ಟೋರ್, ಎಗ್‌ರೈಸ್ ಸೆಂಟರ್ ಇತ್ಯಾದಿಗಳಿಗೆ ಫೈನಾನ್ಸ್ ನೀಡಲಾಗುವುದು
ಶಿವಪ್ಪಯ್ಯ ಸರ್ಕಲ್, ದಾವಣಗೆರೆ..
96860 22969

**Annual Examination Preparation-205**
Maths, Home Tuition
Achieve 90% above for PUC-II, SSLC State/CBSE for one Free Demo Class
91486 10198

**RAJASTHAN TOUR**
Dep: 29th NOV, Duration: 10 Days
Premium PKG Rs 59,600 pp
DVG WORLD TOURS
P J Exten, Davanagere.
99006 66122

**ಶ್ರೀ ಅಂಜನಾದ್ರಿ ಜ್ಯೋತಿಷ್ಯ ಕೇಂದ್ರ**
ಕನ್ನಡ, ತೆಲುಗು, ಹಿಂದಿ ಭಾಷೆಗಳಲ್ಲಿ ಭವಿಷ್ಯ ಮತ್ತು ಸ್ತ್ರೀ-ಪುರುಷ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಹೇಳುತ್ತಾರೆ.
ಪಂಡಿತ್ ಶ್ರೀ ಲಕ್ಷ್ಮಿಕಾಂತ್ ಗುರೂಜಿ
(ಆಂಧ್ರಪ್ರದೇಶ), ಲಾಯರ್ ರಸ್ತೆ, ದಾವಣಗೆರೆ.
9740064163

**TUITIONS**
ಗುರುದತ್ತ ಬಿ. ನಾಡಿಗೇರ್
PUC I / PUC II / Longterm / PCMB
NEET / IIT - JEE / KCET / CLAT - Printed Notes + Study Materials
97398 65711, 94822 44114

**TUITIONS**
ಗುರುದತ್ತ ಬಿ. ನಾಡಿಗೇರ್
Class 6 ಇಂದ Class 10
CBSE / ICSE Boards,
NEET / IIT - JEE / Olympiads
Memory Techniques + Hand Writing
97398 65711, 94822 44114

**CCTV ಫಿಟ್ಟಿಂಗ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ**
ಶಿಕ್ಷಣ ಅರ್ಹತೆ ಇರುವುದಿಲ್ಲ, ಅನುಭವ ಮುಖ್ಯ, ಉತ್ತಮವಾದ ಸಂಬಳ ಕೊಡಲಾಗುವುದು.
88676 77031

**ಬಾಡಿಗೆಗೆ ಸಂಪರ್ಕಿಸಿ**
ಲಹರಿ ಆಟೋಮೋಟಿವ್ಸ್
# 856/17, ಸಬ್ ರಿಜಿಸ್ಟರ್ ಆಫೀಸ್ ಎದುರುಗಡೆ, ಪಿಬಿ ರಸ್ತೆ, ದಾವಣಗೆರೆ-2. ಕೆಳಗಿನ ಮಹಡಿ 1500 ಅಡಿಗಳು, 1ನೇ ಮಹಡಿ 3500 ಅಡಿಗಳು, ಖಾಲಿ ಜಾಗ 4400 ಚ.ಅ., ಸೈಟ್ ಸೈಜ್ 50x88
98444 20009, 90711 19996

**ಟ್ಯಾಂಕ್ ಕ್ಲೀನಿಂಗ್**
ಮನೆಯ ನೀರಿನ ತೊಟ್ಟಿ, ಟ್ಯಾಂಕ್‌ಗಳು ಗಲೀಜಾಗಿದ್ದರೆ ಯಂತ್ರಗಳನ್ನು ಬಳಸಿ ನಾವು ಕ್ಲೀನ್ ಮಾಡುತ್ತೇವೆ.
ಅತ್ಯುತ್ತಮ ಸೇವೆಗೆ ಸಂಪರ್ಕಿಸಿ
99863 61250
80739 48857

# ನಗರದಲ್ಲಿ ನಾಡಿದ್ದು ಮಧುಮೇಹ ತಪಾಸಣೆ ಶಿಬಿರ, ಸ್ವಾಸ್ಥ್ಯ ಮೇಳ

ದಾವಣಗೆರೆ, ನ.11- ನಗರದ ಬಾಪೂಜಿ ಆಸ್ಪತ್ರೆ ಹೊರ ರೋಗಿಗಳ ವಿಭಾಗ ಹಾಗೂ ಎಸ್.ಎಸ್. ಹೈಟೆಕ್ ಆಸ್ಪತ್ರೆಯ ಆಡಳಿತ ಮಂಡಳಿ ವಿಭಾಗದಲ್ಲಿ ಇದೇ ದಿನಾಂಕ 14 ರಿಂದ 20 ರವರೆಗೆ ಪ್ರತಿ ದಿನ ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಎಸ್.ಎಸ್.ಕೇರ್ ಟ್ರಸ್ಟ್ ವತಿಯಿಂದ ವಿಶ್ವ ಮಧುಮೇಹ ದಿನಾಚರಣೆ ಅಂಗವಾಗಿ ಸ್ವಾಸ್ಥ್ಯ ಮೇಳ ಮತ್ತು ಸಕ್ಕರೆ ಕಾಯಿಲೆ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಎಸ್.ಎಸ್. ಕೇರ್ ಟ್ರಸ್ಟ್ ಕೋರ್ ಕಮಿಟಿ ಸದಸ್ಯ ಡಾ.ಮೂಗನಗೌಡ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ನಾಡಿದ್ದು ದಿನಾಂಕ 14 ರಂದು ಬೆಳಿಗ್ಗೆ 9 ಕ್ಕೆ ಜೆಜೆಎಂ ಮೆಡಿಕಲ್ ಕಾಲೇಜಿನಿಂದ 'ವಾಕಥಾನ್' ಆರಂಭವಾಗಲಿದ್ದು, ಡಾ. ಎಂ.ಸಿ. ಮೋದಿ ವೃತ್ತದ ಮಾರ್ಗವಾಗಿ ಮೋದಿ ಕಣ್ಣಿನ ಆಸ್ಪತ್ರೆ, ಚರ್ಚ್ ರಸ್ತೆ, ರಾಮ್ ಅಂಡ್ ಕೋ ಸರ್ಕಲ್, ಎವಿಕೆ ಕಾಲೇಜು ರಸ್ತೆ, ಜಿಲ್ಲಾ ಕ್ರೀಡಾಂಗಣದ ಮೂಲಕ ಬಾಪೂಜಿ ಆಸ್ಪತ್ರೆಗೆ ಆಗಮಿಸಲಿದೆ. ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ವಾಕಥಾನ್‌ಗೆ ಚಾಲನೆ ನೀಡಲಿದ್ದಾರೆ.

ನಂತರ ಬೆಳಿಗ್ಗೆ 10.30 ರಿಂದ ಮಧುಮೇಹ ಮತ್ತು ಸ್ವಾಸ್ಥ್ಯ ಮೇಳ ನಡೆಯಲಿದೆ. ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಿಬಿರದಲ್ಲಿ ರಕ್ತ ಪರೀಕ್ಷೆ, ಇಸಿಜಿ, ಬಿಪಿ ಪರೀಕ್ಷೆ, ಕಿಡ್ನಿ ರೋಗ ತಜ್ಞರೊಂದಿಗೆ ಸಮಾಲೋಚನೆ, ಮಧುಮೇಹ ಚಿಕಿತ್ಸೆ ಸಮಾಲೋಚನೆ, ಇನ್ಸುಲಿನ್ ಪೆನ್ ಬಳಕೆಯ ತಿಳಿವಳಿಕೆ ನೀಡುವುದು ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆಯಲಿವೆ.

ಭಾರತದಲ್ಲಿ ಪ್ರತಿ ವರ್ಷದಿಂದ ವರ್ಷಕ್ಕೆ ಸಕ್ಕರೆ ಕಾಯಿಲೆಯಿಂದ ಬಳಲುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಿದೆ. ಆಹಾರ, ಜೀವನ ಶೈಲಿ, ದೈಹಿಕ ಶ್ರಮ ಇಲ್ಲದೇ ಇರುವುದು. ಇತರೆ ಕಾರಣಗಳಿಂದ ಸಕ್ಕರೆ ಕಾಯಿಲೆ ಬರುವ ಸಾಧ್ಯತೆ ಇರುತ್ತದೆ. ಸಕ್ಕರೆ ಕಾಯಿಲೆ ಬಗ್ಗೆ ಜಾಗೃತಿ ಮೂಡಿಸುವ ಜೊತೆಗೆ ಮುಂಜಾಗ್ರತಾ ಕ್ರಮ, ಚಿಕಿತ್ಸೆ ಉದ್ದೇಶದಿಂದ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಡಾ. ಲತಾ, ಡಾ. ಶಾಂತಲಾ ಅರುಣ್ ಕುಮಾರ ಉಪಸ್ಥಿತರಿದ್ದರು.

# ಸ್ವಯಂ ಜಾಗೃತಿ ಇದ್ದರೆ ಆನ್‌ಲೈನ್ ವಂಚನೆಗಳಿಂದ ಸುರಕ್ಷತೆ ಸಾಧ್ಯ

## ಜಿಎಂಐಟಿ ಐಎಸ್ ಸಿ ವಿಭಾಗದ ಅಟಲ್ ಪ್ರಾಯೋಜಿತ ಎಫ್ ಡಿಪಿ ಕಾರ್ಯಕ್ರಮದಲ್ಲಿ ಡಾ. ಜಿ.ಟಿ. ರಾಜು



ದಾವಣಗೆರೆ, ನ. 11 - ಸ್ವಯಂ ಜಾಗ್ರತರಾಗಿದ್ದರೆ ಆನ್‌ಲೈನ್ ಮುಖಾಂತರ ವಂಚಿಸುವ ಯಾವುದೇ ಸೈಬರ್ ಅಪರಾಧಗಳಿಗೆ ಒಳಗಾಗದೇ ನಮ್ಮನ್ನು ನಾವು ಸುರಕ್ಷಿತವಾಗಿಸಿ ಕೊಳ್ಳಬಹುದು ಎಂದು ಬೆಳಗಾವಿ ವಿಟಿಯು ಶೈಕ್ಷಣಿಕ ಸೆನೆಟ್ ಸದಸ್ಯರು, ಚಿಕ್ಕಬಳ್ಳಾಪುರ ಎಸ್ ಜೆ ಸಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಪ್ರಾಂಶುಪಾಲ ಡಾ. ಜಿ.ಟಿ. ರಾಜು ತಿಳಿಸಿದರು.

ನಗರದ ಜಿಎಂ ತಾಂತ್ರಿಕ ಮಹಾವಿದ್ಯಾಲಯದ ಜಿಎಂ ಹಾಲಮ್ಮ ಸಭಾಂಗಣದಲ್ಲಿ ಇನ್ಫಾರ್ಮೇಷನ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದಿಂದ ಇಂದು ಹಮ್ಮಿಕೊಳ್ಳಲಾಗಿರುವ ಅಟಲ್ ಪ್ರಾಯೋಜಿತ ಆರು ದಿನಗಳ ಫ್ಯಾಕಲ್ಟಿ ಡೆವಲಪ್‌ಮೆಂಟ್ ಪ್ರೋಗ್ರಾಮ್ ಗೆ ಚಾಲನೆ ನೀಡಿ ಅವರು ಮಾತನಾಡಿದರು.

ವಾಟ್ಸಾಪ್, ಫೇಸ್ಬುಕ್, ಜಿ-ಮೇಲ್ ಸೇರಿದಂತೆ ಸಾಮಾಜಿಕ ಜಾಲ ತಾಣಗಳು ಮಾಹಿತಿಗಾಗಿ ಎಷ್ಟು ಅವಶ್ಯಕವೋ, ಎಚ್ಚರಿಕೆ ವಹಿಸದಿದ್ದರೆ ಅಷ್ಟೇ ಅಪಾಯಕಾರಿ ಸಹ ಆಗಿವೆ.

ಪ್ರಸ್ತುತ ತಂತ್ರಜ್ಞಾನ ಬೆಳೆದಂತೆ ಅವಶ್ಯಕತೆಗೆ ಅನಿವಾರ್ಯವಾಗಿರುವ ಕಾರಣ ಶಿಕ್ಷಣ, ವ್ಯಾಪಾರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಆನ್ ಲೈನ್ ಮುಖಾಂತರ ವ್ಯವಹಾರ, ಸಂವಹನ ಬಳಕೆ ಕಾಣಲಾಗುತ್ತಿದೆ. ಆನ್ ಲೈನ್ ಮುಖಾಂತರ ವಂಚಿಸುವ ಸೈಬರ್ ಅಪರಾಧಗಳು ಕೇವಲ ತಾಂತ್ರಿಕ ವಿಧಾನವಷ್ಟೇ ಆಗಿರದೇ ಪ್ರಸ್ತುತ ದಿನಮಾನಗಳಲ್ಲಿ ವಂಚಕರು ಸಂಸ್ಕೃತಿಯನ್ನಾಗಿಸಿ ಕೊಂಡಿದ್ದಾರೆ ಎಂದು ಹೇಳಿದರು.

ಹೀಗೆ ಸಾಮಾಜಿಕ ಜಾಲ ತಾಣಗಳನ್ನು ಮತ್ತು ಆನ್ ಲೈನ್ ಬಳಕೆ ಮಾಡಿಕೊಳ್ಳುವಾಗ ಅಲ್ಲಿನ ಯಾವುದೇ ವಿಷಯಗಳ ಬಗ್ಗೆ ಜಾಗರೂಕರಾಗಿರ ಬೇಕು. ಸಂಬಂಧಪಡದ ವಿಷಯಗಳು, ಅಪರಿಚಿತ ವ್ಯಕ್ತಿಗಳ ಬಗ್ಗೆ ಕಿವಿಗೊಡದೆ ಜಾಗ್ರತೆ ವಹಿಸಿದಾಗ ಆನ್ ಲೈನ್ ಮುಖಾಂತರ ವಂಚನೆಯಿಂದ ದೂರ ಉಳಿಯಬಹುದು ಎಂದು ಅಭಿಪ್ರಾಯ ಪಟ್ಟರು.

ಬೆಳಗಾವಿ ವಿಟಿಯು ಪಿಹೆಚ್‌ಡಿ ವಿಭಾಗದ ವಿಶೇಷ ಅಧಿಕಾರಿ ಡಾ. ವಿರೂಪಾಕ್ಷಪ್ಪ ಬೆಟಗೇರಿ ಆನ್‌ಲೈನ್ ವಿಡಿಯೋ ಮುಖೇನ ಈ ಕಾರ್ಯಕ್ರಮದ ಯಶಸ್ಸಿಗೆ ಶುಭ ಕೋರುತ್ತಾ, ತಂತ್ರಜ್ಞಾನ ಮುಂದುವರಿದಂತೆ ಅದರ ಬಳಕೆ ಸಹ ಅಷ್ಟೇ ಅವಶ್ಯಕವಾಗಿರುತ್ತದೆ. ಈ ನಿಟ್ಟಿನಲ್ಲಿ ತಂತ್ರಜ್ಞಾನದ ಬಳಕೆ ಮುಖಾಂತರ ಸೈಬರ್ ವಂಚನೆಗಳು ಸಾಕಷ್ಟು ನಡೆಯುತ್ತಿವೆ. ವಂಚನೆಗಳನ್ನು ತಪ್ಪಿಸುವ ಸಲುವಾಗಿ ಪೊಲೀಸ್ ಇಲಾಖೆಯಿಂದ ಅದಕ್ಕೆ ಪ್ರತ್ಯೇಕವಾದಂತಹ ಸೈಬರ್ ವಿಭಾಗವನ್ನೇ ಸ್ಥಾಪಿಸಲಾಗಿದ್ದು, ವಂಚನೆಗೆ ಒಳಗಾಗುವ ತನಕ ವಂಚಿಸುವುದು ತಪ್ಪೋದಿಲ್ಲ. ಹಾಗಾಗಿ ತಂತ್ರಜ್ಞಾನ ಬಳಕೆ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆ ವೇಳೆ ನಮಗೆ ನಾವೇ ಎಚ್ಚರಿಕೆ ವಹಿಸುವುದು ಅಗತ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಎಂಐಟಿ ಪ್ರಾಂಶುಪಾಲ ಡಾ. ಎಂ.ಬಿ. ಸಂಜಯ್ ಪಾಂಡೆ, ಪ್ರಸ್ತುತ ತಂತ್ರಜ್ಞಾನ ಬೆಳೆದಂತೆ ಅದಕ್ಕೆ ತಕ್ಕಂತೆ ವಿದ್ಯಾರ್ಥಿಗಳಿಗೆ ಬೋಧನೆ ಮಾಡಲು ಅಧ್ಯಾಪಕರು ತಿಳುವಳಿಕೆ ಹೊಂದಬೇಕು. ಅದಕ್ಕೆ ಈ ಕಾರ್ಯಕ್ರಮ ಅನುಕೂಲವಾಗಲಿದೆ ಎಂದು ಹೇಳಿದರು.

ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರು, ಜಿಎಂ ಯೂನಿವರ್ಸಿಟಿ ಮತ್ತು ಎಫ್‌ಡಿಪಿ ಸಂಚಾಲಕ ಡಾ. ವೀರಗಂಗಾಧರ ಸ್ವಾಮಿ ಟಿ.ಎಂ. ಅವರು ಅತಿಥಿಗಳನ್ನು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಡೀನ್ ಡಾ. ಕೆ.ಎನ್. ಭರತ್, ಎಫ್ ಡಿ ಪಿ ಸಂಯೋಜಕರುಗಳಾದ ಪ್ರೊ. ಸೌಮ್ಯ ಎತ್ತಿನಹಳ್ಳಿ, ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕರಾದ ತೇಜಸ್ವಿ ಕಟ್ಟಿಮನಿ ಟಿ ಆರ್, ಎಸ್, ಸೌಮ್ಯ ಮತ್ತು ಪ್ರೊ. ಇಮ್ರಾನ್ ಖಾನ್ ಸೇರಿದಂತೆ ಇತರರು ಇದ್ದರು.

ಗಗನ್ ದೀಪ್, ರಕ್ಷಿತಾ ನಿರೂಪಿಸಿದರು. ಐಎಸ್‌ಸಿ ವಿಭಾಗದ ಮುಖ್ಯಸ್ಥರಾದ ಡಾ. ನೀಲಾಂಬಿಕೆ ವಂದಿಸಿದರು.

# ನಗರದಲ್ಲಿ ಇಂದು ವಿದ್ಯಾರ್ಥಿ ನಿಲಯಕ್ಕೆ ಶಂಕುಸ್ಥಾಪನೆ

ದಾವಣಗೆರೆ, ನ.11- ನಗರದ ಜಿ.ಎಂ. ವಿಶ್ವವಿದ್ಯಾಲಯದಲ್ಲಿ ನಾಳೆ ದಿನಾಂಕ 12 ರಂದು ಬೆಳಿಗ್ಗೆ 11 ಗಂಟೆಗೆ ನೂತನ ವಿದ್ಯಾರ್ಥಿ ನಿಲಯದ ಶಂಕುಸ್ಥಾಪನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಚಾರ್ಯ ಡಾ. ಗಿರೀಶ್ ಬೋಳಕಟ್ಟೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಶಂಕುಸ್ಥಾಪನೆಗೆ ಚಾಲನೆ ನೀಡಲಿದ್ದಾರೆ.

ನೂತನವಾಗಿ ನಿರ್ಮಿಸಿರುವ ವಿದ್ಯಾರ್ಥಿ ನಿಲಯವನ್ನು ಮಾಜಿ ಉಪ ಮುಖ್ಯಮಂತ್ರಿ ಆರ್. ಅಶೋಕ್ ಉದ್ಘಾಟಿಸಲಿದ್ದಾರೆ. ನಂತರ ಜಿ.ಎಂ. ಹಾಲಮ್ಮ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಕೇಂದ್ರದ ಮಾಜಿ ಸಚಿವ ಜಿ.ಎಂ. ಸಿದ್ದೇಶ್ವರ ಅಧ್ಯಕ್ಷತೆ ವಹಿಸಲಿದ್ದು, ಮಾಜಿ ಸಚಿವ ಮುರುಗೇಶ್ ನಿರಾಣಿ, ವಿಧಾನ ಪರಿಷತ್ ಸದಸ್ಯರಾದ ಎನ್. ರವಿಕುಮಾರ್, ಕೆ.ಎಸ್.ನವೀನ್, ಹರಿಹರ ಶಾಸಕ ಬಿ.ಪಿ. ಹರೀಶ್, ಜಿಲ್ಲಾ ಬಿಜೆಪಿ ಮಹಿಳಾ ಮುಖಂಡರಾದ ಜಿ.ಎಸ್. ಗಾಯತ್ರಿ ಸಿದ್ದೇಶ್ವರ ಉಪಸ್ಥಿತರಿರುವರು.

ಟ್ರಸ್ಟಿಗಳಾದ ಜಿ.ಎಂ. ಪ್ರಸನ್ನಕುಮಾರ್, ಜಿ.ಎಂ. ಲಿಂಗರಾಜ್, ಜಿ. ಎಸ್. ಅನಿತ್ ಕುಮಾರ್, ಜಿ.ಪಿ. ಮಲ್ಲಿಕಾರ್ಜುನ್, ಶೀಲಾ ಪ್ರಸನ್ನಕುಮಾರ್, ವೀಣಾ ಲಿಂಗರಾಜ್, ಸವಿತಾ ಅನಿತ್ ಕುಮಾರ್, ಜಿ.ಎಲ್. ರಾಜೀವ್, ವಿವಿ ಕುಲಪತಿ ಡಾ.ಎಸ್.ಆರ್. ಶಂಕಪಾಲ್, ಸಹ ಕುಲಪತಿ ಡಾ.ಹೆಚ್.ಡಿ.ಮಹೇಶಪ್ಪ, ಕುಲಸಚಿವ ಡಾ.ಬಿ.ಎಸ್. ಸುನೀಲ್ ಕುಮಾರ್ ಮತ್ತಿತರರು ಭಾಗವಹಿಸಲಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಡಾ. ತೇಜಸ್ವಿ ಕಟ್ಟಿಮನಿ, ಡಾ. ಜೆ. ಪ್ರವೀಣ್, ವಸಂತ ಕುಮಾರ್ ಉಪಸ್ಥಿತರಿದ್ದರು.

# ಕಾಮಗಾರಿ ಪರಿಶೀಲಿಸಿದ ಮೇಯರ್



ದಾವಣಗೆರೆ, ನ.11- ಮೇಯರ್ ಚಮನ್‌ಸಾಬ್ ನೇತೃತ್ವದಲ್ಲಿ ದಾವಣಗೆರೆ ದಕ್ಷಿಣ ಹಾಗೂ ಉತ್ತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಸಿವೇಜ್ ವಾಟರ್ ಟ್ರೀಟ್‌ಮೆಂಟ್ ಪ್ಲಾಂಟ್ ಕಾಮಗಾರಿ ವೀಕ್ಷಿಸಿ, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲಾಯಿತು. ಈ ಸಂದರ್ಭದಲ್ಲಿ ಮುಖಂಡರು ಹಾಗೂ ಪಾಲಿಕೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಎಎಸ್ ಪರೀಕ್ಷೆಗೆ ತರಬೇತಿ

ದಾವಣಗೆರೆ ನ.11- ಕರ್ನಾಟಕ ಲೋಕ ಸೇವಾ ಆಯೋಗವು 2024ರ ಡಿಸೆಂಬರ್ 29ರಂದು ನಡೆಸಲಿರುವ ಕೆಎಎಸ್ ಪರೀಕ್ಷೆಗೆ 30 ದಿನಗಳ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಯುವ ತರಬೇತಿಗೆ ಆಸಕ್ತರು ಇದೇ ದಿನಾಂಕ 16 ರೊಳಗಾಗಿ ಹೆಸರು ನೋಂದಾಯಿಸಿ ಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821-2515944 ಸಂಪರ್ಕಿಸಲು ಕರಾಮುವಿ ಕುಲಸಚಿವರು ತಿಳಿಸಿದ್ದಾರೆ.

# ಐ.ಒ.ಸಿ.ಎಲ್. ಘಟಕದಲ್ಲಿ ಬೆಂಕಿ : ಓರ್ವನ ಸಾವು

ವಡೋದರ, ನ. 11 - ಗುಜರಾತ್‌ನ ವಡೋದರರಲ್ಲಿ ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐ.ಒ.ಸಿ.ಎಲ್.) ಹೊಂದಿರುವ ತೈಲ ಘಟಕದಲ್ಲಿ ಸ್ಫೋಟದ ನಂತರ ಬೆಂಕಿ ಕಾಣಿಸಿಕೊಂಡಿದೆ. ಈ ಅವಘಡದಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ತೈಲ ಸಂಗ್ರಹ ಟ್ಯಾಂಕ್‌ನಲ್ಲಿ ಸ್ಫೋಟ ಸಂಭವಿಸಿದೆ ಎಂದು ವಡೋದರ ಪೊಲೀಸ್ ಆಯುಕ್ತ ನರಸಿಂಹ ಕೊಮಾರ್ ತಿಳಿಸಿದ್ದಾರೆ. ಸಂಜೆ 3.30 ಗಂಟೆಗೆ ಸ್ಫೋಟ ಸಂಭವಿಸಿದ ನಂತರ ಬೆಂಕಿ ಕಾಣಿಸಿಕೊಂಡಿತು. ನಂತರ ಅಲ್ಲಿಂದ ಕಾರ್ಮಿಕರನ್ನು ತೆರವುಗೊಳಿಸಲಾಯಿತು.

# ಕಲಿಕೆ, ರೋಗಿಗಳ ಸೇವೆಗೆ ಹೆಚ್ಚು ಮಹತ್ವ ಕೊಡಿ



**ಜೆ.ಜೆ.ಎಂ. ಮೆಡಿಕಲ್ ಕಾಲೇಜಿನ ವೈಟ್ ಕೋಟ್ ಕಾರ್ಯಕ್ರಮದಲ್ಲಿ ಡಾ. ಮಂಜುನಾಥ್ ಆಲೂರು**

ದಾವಣಗೆರೆ, ನ.11- ನಗರದ ಜೆಜೆಎಂ ವೈದ್ಯಕೀಯ ಮಹಾವಿದ್ಯಾಲಯದಲ್ಲಿ 2024-25ನೇ ಸಾಲಿನ ಪ್ರಥಮ ವರ್ಷದ ಎಂ.ಬಿ.ಬಿ.ಎಸ್. ಬ್ಯಾಚ್‌ನ ಓರಿಯಂಟೇಷನ್ ಮತ್ತು ವೈಟ್ ಕೋಟ್ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ. ಮಂಜುನಾಥ್ ಆಲೂರು, ವೈದ್ಯಕೀಯ ವಿಷಯಗಳನ್ನು ಕಲಿಯುವುದರ ಮೇಲೆ ಹೆಚ್ಚು ಆಸಕ್ತಿ ಇಟ್ಟುಕೊಳ್ಳುವಂತೆ ವಿದ್ಯಾರ್ಥಿಗಳು ಸಲಹೆ ನೀಡಿದರು.

ಯಾವುದೇ ದುಶ್ಚಟಕ್ಕೆ ಬಲಿಯಾಗದೇ ರೋಗಿಗಳ ಸೇವೆಯ ಬಗ್ಗೆ ಹೆಚ್ಚು ಮಹತ್ವ ವಹಿಸಬೇಕು ಎಂದರು.

ಜಜಮು ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ॥ ಶುಕ್ಲಾ ಶೆಟ್ಟಿ, ಸಾಕಷ್ಟು ಕಡೆ ಕೇವಲ ಪಠ್ಯದ ಬಗ್ಗೆ ಹೆಚ್ಚಿನ ಮಹತ್ವ ಕೊಡುತ್ತಾರೆ. ಕೆಲವು ಕಡೆ ಕೇವಲ ಪ್ರಾಯೋಗಿಕವಾಗಿ ಒತ್ತನ್ನು ಕೊಡುತ್ತಾರೆ. ಆದರೆ ನಮ್ಮಲ್ಲಿ ಎರಡೂ ಆಸ್ಪತ್ರೆಗೆ ರೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಹಾಗೂ ಉತ್ತಮ ಉಪನ್ಯಾಸಕರು ಇರುವುದರಿಂದ ನಿಮಗೆ ಪಠ್ಯ ಹಾಗೂ ಪ್ರಾಯೋಗಿಕ ಎರಡರಲ್ಲೂ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಎಸ್.ಎಸ್. ಹೈಟೆಕ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ॥ ಅರುಣ್ ಇತರರು ಈ ಸಂದರ್ಭದಲ್ಲಿದ್ದರು.

# ನಾಡಿದ್ದು ಕೊಂಡಜ್ಜಿ ಬಸಪ್ಪನವರ 42ನೇ ಪುಣ್ಯಸ್ಮರಣೆ ಕಾರ್ಯಕ್ರಮಕ್ಕೆ ಸಿಂಧ್ಯಾ

ಹರಿಹರ, ನ.11- ತಾಲ್ಲೂಕಿನ ಕೊಂಡಜ್ಜಿಯಲ್ಲಿ ಇದೇ ದಿನಾಂಕ 14 ರಂದು ಬೆಳಿಗ್ಗೆ 10 ಗಂಟೆಗೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಕೊಂಡಜ್ಜಿ ಬಸಪ್ಪನವರ 42ನೇ ಪುಣ್ಯಸ್ಮರಣೆ ಹಾಗೂ ದಿ. ಶಾಮನೂರು ಕಲ್ಲಪ್ಪ ಸಾವಿತ್ರಮ್ಮ ಆಡಳಿತ ಕಚೇರಿಯ ನೂತನ ಕಟ್ಟಡ ಮತ್ತು ದಿ. ಎಂ.ಕೆ. ಪಾಣಿ ಅತಿಥಿ ಗೃಹ ಕಟ್ಟಡಗಳ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್, ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಶಾಸಕ ಬಿ.ಪಿ.ಹರೀಶ್, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮತ್ತಿತರರು ಭಾಗವಹಿಸುವರು.

# ಗ್ಯಾಂಗ್‌ನಿಂದ ಬೆದರಿಕೆ ಎಂದು ನ್ಯಾಯಾಧೀಶರ ದೂರು

ಅಲೀಘಡ, ನ. 11 - ತಾವು ಈ ಹಿಂದೆ ಸುಂದರ ಭಾಟಿ ಎಂಬಾತನಿಗೆ ಶಿಕ್ಷೆ ವಿಧಿಸಿದ ಕಾರಣ, ಆತನ ಗ್ಯಾಂಗ್‌ನಿಂದ ಬೆದರಿಕೆ ಇದೆ ಎಂದು ಉತ್ತರ ಪ್ರದೇಶದ ಪರೋಕಾಬಾದ್ ಜಿಲ್ಲೆಯ ನ್ಯಾಯಾಧೀಶರೊಬ್ಬರು ದೂರು ನೀಡಿದ್ದಾರೆ.

ಈ ಬಗ್ಗೆ ಅಕ್ಟೋಬರ್ 29ರಂದು ಎಫ್.ಐ.ಆರ್. ದಾಖಲಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಮೂರ್ತಿ ಅನಿಲ್ ಕುಮಾರ್ ಸಿಂಗ್ ಅವರು ದೂರು ನೀಡಿದ್ದಾರೆ. ಬಿಳಿ ಬಣ್ಣದ ವಾಹನದಲ್ಲಿ ಬಂದಿದ್ದ ಐವರು ತಮ್ಮ ಮೇಲೆ ಗುಂಡು ಹಾರಿಸುವ ಪ್ರಯತ್ನ ನಡೆಸಿದ್ದರು ಎಂದು ದೂರಿನಲ್ಲಿ ಹೇಳಲಾಗಿದೆ. ಸುಂದರ್ ಭಾಟಿ ವಿರುದ್ಧ 40ಕ್ಕೂ ಹೆಚ್ಚು ಅಪರಾಧಿಕ ಪ್ರಕರಣಗಳಿವೆ. ಆತ ಪ್ರಮುಖವಾಗಿ ಉತ್ತರ ಪ್ರದೇಶದ ಪಶ್ಚಿಮ ಭಾಗದಲ್ಲಿ ಕಾರ್ಯನಿರ್ವಹಿಸುತ್ತಾನೆ. ಆತನ ತಂಡ ಗೌತಮ್ ಬುದ್ಧ ನಗರದಲ್ಲಿ ನೆಲೆ ಹೊಂದಿದೆ.

# ಪೊಲೀಸ್ ಚಿಣ್ಣರ ಅಂಗಳದಲ್ಲಿ ಆಟಿಕೆ ವಿತರಣೆ



ದಾವಣಗೆರೆ, ನ.11- ಕ್ರೆಡಿಟ್ ಆಕ್ಸೆಸ್ ಇಂಡಿಯಾ ಫೌಂಡೇಶನ್ ಬೆಂಗಳೂರು ಇವರಿಂದ ಪೊಲೀಸ್ ಚಿಣ್ಣರ ಅಂಗಳ ಶಾಲೆಗೆ ಮಕ್ಕಳ ಆಟಿಕೆಗಳು ಹಾಗೂ ವಿದ್ಯಾಭ್ಯಾಸದ ಆಟಿಕೆಗಳನ್ನು ವಿತರಿಸುವ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಉಮಾ ಪ್ರಶಾಂತ್, ಕ್ರೆಡಿಟ್ ಆಕ್ಸೆಸ್ ಗ್ರಾಮೀಣ್ ಲಿಮಿಟೆಡ್‌ನ ಸರ್ಕಾರ ಮತ್ತು ಸಾರ್ವಜನಿಕ ಸಂಪರ್ಕ ವಿಭಾಗದ ರಾಷ್ಟ್ರಮಟ್ಟದ ಮುಖ್ಯಸ್ಥ ಜಗದೀಶ್ ಬೇಗೂರು, ಸಿಎಜಿಎಲ್‌ನ ಅಧಿಕಾರಿಗಳಾದ ಬೆಳಗಾವಿ ಜೋನಲ್ ಮ್ಯಾನೇಜರ್ ಎಸ್.ಎನ್. ರವಿ, ಸಚಿನ್ ಕುಮಾರ್, ಎಂ. ಆರ್. ವಿನಯ ಕುಮಾರ್ ಹಾಗೂ ಲೈಸನ್ ಅಧಿಕಾರಿ ಪ್ರಹ್ಲಾದ್ (ನಿವೃತ್ತ ಡಿಎಸ್‌ಪಿ) ಮತ್ತು ಪೊಲೀಸ್ ಇಲಾಖೆಯ ಹೆಚ್ಚುವರಿ ಪೊಲೀಸ್ ಅಧೀಕ್ಷಕರುಗಳಾದ ವಿಜಯ ಕುಮಾರ್ ಸಂತೋಷ್, ಮಂಜುನಾಥ, ಡಿಎಆರ್ ಡಿಎಸ್‌ಪಿ ಪ್ರಕಾಶ್, ನಗರ ಡಿಎಸ್‌ಪಿ ಮಲ್ಲೇಶ್ ದೊಡ್ಡಮನಿ ಮತ್ತು ಸೋಮಶೇಖರಪ್ಪ ಆರ್‌ಪಿಐ ಡಿಎಆರ್ ಹಾಜರಿದ್ದರು.

ಪೊಲೀಸ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಡಿಎಆರ್ ಡಿಎಸ್‌ಪಿ ಪ್ರಕಾಶ್, ಮುಖ್ಯ ಪೇದೆ ಅಮರೇಶ್ ನಿರೂಪಿಸಿದರು. ಮಲ್ಲೇಶ್ ದೊಡ್ಡಮನಿ ವಂದಿಸಿದರು.

# ಆನ್‌ಲೈನ್‌ನಲ್ಲಿ ಇಂದು ಶರಣ ಚಿಂತನ ಗೋಷ್ಠಿ

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ವತಿಯಿಂದ ಇಂದು ಸಂಜೆ 7 ರಿಂದ 9 ರವರೆಗೆ ಆನ್‌ಲೈನ್‌ನಲ್ಲಿ ಶರಣ ಚಿಂತನ ಗೋಷ್ಠಿ- ಸಂಚಿಕೆ 18 ಕಾರ್ಯಕ್ರಮ ಆಯೋಜಿಸಲಾಗಿದೆ.

ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಬಿ. ಪರಮೇಶ್ವರಪ್ಪ ಪ್ರಾಸ್ತಾವಿಕವಾಗಿ ಮಾತನಾಡುವರು. 'ಶರಣರ ದೃಷ್ಟಿಯಲ್ಲಿ ಬಸವಣ್ಣ' ಕುರಿತು ಬಸವ ಕಿರಣ ಶರಣರು ವಿಷಯ ಮಂಡನೆ ಮಾಡಲಿದ್ದಾರೆ.

ರಾಯಚೂರು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮಸ್ಕಿ ನಾಗರಾಜ ಅಧ್ಯಕ್ಷತೆ ವಹಿಸುವರು. ಬಿ.ಟಿ. ಪ್ರಕಾಶ್, ಕಲಿವೀರ ಕಳ್ಳಿಮನಿ, ಎಂ. ನಾಗರಾಜ್, ಭರಮಪ್ಪ ಮೈಸೂರು ಮತ್ತಿತರರು ಭಾಗವಹಿಸಲಿದ್ದಾರೆ.

# ಎರಡು ವರ್ಷದ ಬಿ.ಇಡಿ ಕೋರ್ಸ್‌ಗೆ ಅರ್ಜಿ ಆಹ್ವಾನ

ದಾವಣಗೆರೆ, ನ. 11 -2 ವರ್ಷದ ಬಿ.ಇಡಿ ಕೋರ್ಸ್ ಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಇದೇ ದಿನಾಂಕ 14 ಅರ್ಜಿ ಸಲ್ಲಿಸಲು ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಡಯಟ್ ಹಿರಿಯ ಉಪನ್ಯಾಸಕ ಮಹಮ್ಮದ್ ಅಯೂಬ್ ಸೊರಬ್ (9164489972), ಡಯಟ್ ಶಿಕ್ಷಕಿ ಶಾಂತಾ ಮುಧೋಳ್ (9844401092), ಕಚೇರಿಯ ದೂ.ಸಂ. 08192 -231156 ಯನ್ನು ಸಂಪರ್ಕಿಸಲು ಡಯಟ್ ಪ್ರಾಚಾರ್ಯರಾದ ಗೀತಾ ತಿಳಿಸಿದ್ದಾರೆ. ಅರ್ಜಿಯನ್ನು ಇಲಾಖಾ ವೆಬ್‌ಸೈಟ್ https://Schooleducation.karnataka.gov.in/ನಲ್ಲಿ ಪ್ರಕಟಿಸಲಾಗಿದೆ.

# ಬಸವ ಬಳಗದಿಂದ ಮಹಾಮನೆ ಕಾರ್ಯಕ್ರಮ



ದಾವಣಗೆರೆ, ನ.11- ನಗರದ ಬಸವ ಬಳಗದ ವತಿಯಿಂದ ಮನೆಯಲ್ಲಿ ಮಹಾಮನೆ ಕಾರ್ಯಕ್ರಮವನ್ನು ಶ್ರೀಮತಿ ಕುಸುಮ ಜಯಶಂಕರ್ ಇವರ ಮನೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ವೀರಣ್ಣ ಶಿವಶಾಲಿ ಅಧ್ಯಕ್ಷತೆ ವಹಿಸಿ ಮೇದಾರ ಕೇತಯ್ಯನ ಬಗ್ಗೆ ಮಾತನಾಡಿದರು.

# ಕುಮಾರಸ್ವಾಮಿ ಹಗುರ ಮಾತು : ಖಂಡನೆ

ದಾವಣಗೆರೆ, ನ.11- ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಕುರಿತಂತೆ ಹಗುರವಾಗಿ ಮಾತನಾಡಿರುವ ಸಚಿವ ಜಮೀರ್ ಅಹ್ಮದ್ ಅವರ ವರ್ತನೆಯನ್ನು ಜಿಲ್ಲಾ ಜೆಡಿಎಸ್ ಮುಖಂಡ ಎಂ.ಎನ್. ನಾಗರಾಜ್ ಖಂಡಿಸಿದ್ದಾರೆ.

ಯಾರನ್ನೋ ಮೆಚ್ಚಿಸುವ ಭರದಲ್ಲಿ ಕುಮಾರಸ್ವಾಮಿ ಅವರ ಬಗ್ಗೆ ಮಾಡಿರುವ ಆರೋಪ ಮತ್ತು ನಿಂದನೆಯನ್ನು ಸಹಿಸುವುದಿಲ್ಲ ಎಂದು ಹೇಳಿರುವ ನಾಗರಾಜ್, ಕೂಡಲೇ ಜಮೀರ್ ಅಹ್ಮದ್ ಅವರು ಕ್ಷಮೆ ಕೇಳುವಂತೆ ಆಗ್ರಹಿಸಿದ್ದಾರೆ.

# ಹೊನ್ನಾಳಿ : ಕಾಮಗಾರಿ ಪರಿಶೀಲನೆ

ಹೊನ್ನಾಳಿ ತಾಲ್ಲೂಕು ಗೊಲ್ಲರಹಳ್ಳಿ, ಹೊನ್ನಾಳಿ ಪಟ್ಟಣ, ನ್ಯಾಮತಿ ತಾಲ್ಲೂಕಿನ ಸುರಹೊನ್ನೆ ಮುಖ್ಯ ರಸ್ತೆಗಳಲ್ಲಿ ಡಿವೈಡರ್ ಮತ್ತು ರೋಡ್ ಲೈಟ್ ಪಿಲ್ಲರ್‌ಗಳಲ್ಲಿ ಗುಣಮಟ್ಟ ರಹಿತ ಕಾಮಗಾರಿ ನಡೆದಿದೆ ಎಂದು ಆಪಾದಿಸಿ ಸ್ಥಳ ತನಿಖೆ ನಡೆಸುವಂತೆ ಸಾಮಾಜಿಕ ಕಾರ್ಯಕರ್ತ ಸೊರಟೂರು ಹನುಮಂತಪ್ಪ ಲೋಕಾಯಕ್ತಕ್ಕೆ ದೂರು ಸಲ್ಲಿಸಿದ್ದರು.

ಈ ದೂರಿನ ಮೇರೆಗೆ ಇಂದು ಮತ್ತು ನಾಳೆ ಲೋಕಾಯುಕ್ತ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಟಿ. ಶುಭಾ ಅವರು ತಮ್ಮ ತಂಡದೊಂದಿಗೆ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಲಿದ್ದಾರೆ ಎಂದು ಹನುಮಂತಪ್ಪ ತಿಳಿಸಿದ್ದಾರೆ.

# ಹರಿಹರ : ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ಪೂಜಾ ಕಾರ್ಯಕ್ರಮ



ಹರಿಹರ, ನ. 11- ನಗರದಲ್ಲಿ ಹೊಸದಾಗಿ ಮಂಜೂರಾದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಶಾಸಕ ಬಿ.ಪಿ. ಹರೀಶ್, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕೆ.ಹೆಚ್. ಗಾಯತ್ರಿ, ತಾಲ್ಲೂಕು ಅಧಿಕಾರಿ ಆಸ್ಮಾಬಾನು, ವಿಸ್ತರಣಾಧಿಕಾರಿ ಹೆಚ್.ಬಿ. ಪಾಟೀಲ್, ನಿಲಯ ಪಾಲಕರಾದ ಪಿ. ರಂಗನಾಥ್, ಎಂ.ಎನ್. ಹೇಮಾವತಿ, ಎ.ಎಂ. ಯಶೋಧಮ್ಮ ನಿಲಯ ಮೇಲ್ವಿಚಾರಕರಾದ ಎಸ್. ಪಿ. ಸುಮಲತಾ, ಎಂ. ಮಲ್ಲಿಕಾರ್ಜುನಯ್ಯ, ಸಿ. ಖಾಲಿದ್ ಅನ್ವರ್, ತಾಲ್ಲೂಕು ಕಚೇರಿ ಸಿಬ್ಬಂದಿಗಳಾದ ಹೆಚ್.ಎನ್. ಸಂಪತ್ ಕುಮಾರ್, ಜಿ. ಹೆಚ್. ಶಿವಕುಮಾರ್ ಮತ್ತಿತರರು ಭಾಗವಹಿಸಿದ್ದರು.

# ಸಮ ಸಮಾಜ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ವಚನ ಸಾಹಿತ್ಯ



ದಾವಣಗೆರೆ, ನ.11- 12 ನೇ ಶತಮಾನದ ವಚನ ಸಾಹಿತ್ಯವು ನೊಂದವರ, ದಮನಿತರ, ಧ್ವನಿ ಇಲ್ಲದವರ ನಾಲಿಗೆಯಾಗಿತ್ತೆಂದು ಆ ಮುಖೇನ ಶೋಷಿತ ಸಮುದಾಯಗಳಿಗೆ ಸಾಮಾಜಿಕ, ಸಾಂಸ್ಕೃತಿಕ ಸಮಾನತೆ ತಂದು ಕೊಟ್ಟು, ಸಮ ಸಮಾಜ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿತು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಡಾ. ಹೆಚ್.ಎಸ್. ಮಂಜುನಾಥ ಕುರ್ಕಿ ಅಭಿಪ್ರಾಯಪಟ್ಟರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ನಗರದ ರಾಜನಹಳ್ಳಿ ಸೀತಮ್ಮ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಚನ್ನಗಿರಿ ಶಾಸಕ ಬಸವರಾಜ್ ವಿ. ಶಿವಗಂಗಾ ಇವರ ತಂದೆ -ತಾಯಿ ಹೆಸರಿನಲ್ಲಿರುವ ಶ್ರೀಮತಿ ಓಂಕಾರಮ್ಮ ಡಿ. ವೀರಪ್ಪ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ವಚನಗಳಲ್ಲಿ ವೈಚಾರಿಕತೆ' ಎಂಬ ವಿಷಯ ಕುರಿತು ಅವರು ಉಪನ್ಯಾಸ ನೀಡಿದರು.

ವಚನ ಸಾಹಿತ್ಯವು ಅರಿವು, ಆಚಾರ, ಅನುಭವದ ಸಾಹಿತ್ಯವಾಗಿತ್ತೆಂದು ಜನ ಮಾನಸದಲ್ಲಿ ವೈಚಾರಿಕ ಪ್ರಜ್ಞೆ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಬಿ. ಪರಮೇಶ್ವರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಶರಣರ ಆಶಯಗಳನ್ನು ವಚನ ಸಾಹಿತ್ಯದ ಮುಖೇನ ಜನಮಾನಸಕ್ಕೆ ತಲುಪಿಸುವಲ್ಲಿ ಶಾಲೆಗಳಲ್ಲಿ, ಮನೆ, ಮನೆಗಳಲ್ಲಿ ಉತ್ತಮ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಈ ಪ್ರಯತ್ನದ ಫಲವಾಗಿ ಮಕ್ಕಳಲ್ಲಿ ಮತ್ತು ಸಮಾಜದಲ್ಲಿ ವಚನ ಸಾಹಿತ್ಯದ ಆಶಯಗಳು ಬಿಂಬಿತವಾಗಲು ಸಹಾಯಕವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಟಿ.ಎ. ಕುಸಗಟ್ಟಿ ಅವರು, ವಚನ ಸಾಹಿತ್ಯವು ಸಕಲರಿಗೂ ಲೇಸನ್ನೇ ಬಯಸಿದ ಸಾಹಿತ್ಯ ಹಾಗೂ ಜನರಾಡುವ ಜನಮಾನಸದ ಭಾಷೆಯಲ್ಲಿ ನಿರ್ಮಿತವಾದ ಸಾಹಿತ್ಯ ಎಂದರು.

ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷರಾದ ಗಾಯತ್ರಿ ವಸ್ತ್ರದ್ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಿದರು.

ಬುಳ್ಳಾಪುರದ ಮಲ್ಲಿಕಾರ್ಜುನಪ್ಪ, ಭರ್ಮಪ್ಪ ಮೈಸೂರ್, ಆರ್. ಸಿದ್ದೇಶಪ್ಪ, ಜಿ.ಎಂ.ಕುಮಾರಪ್ಪ ಬಿ. ಟಿ.ಪ್ರಕಾಶ್, ನಿರ್ಮಲ ಶಿವಕುಮಾರ್, ವಾಣಿ ರಾಜಕುಮಾರ್, ಅರುಣಕುಮಾರಿ ಬಿರಾದಾರ, ಕಾಲೇಜಿನ ಉಪನ್ಯಾಸಕ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಎಂ.ಜಿ. ಶ್ವೇತ ಸ್ವಾಗತಿಸಿದರು. ಎಂ. ಸುಧಾರಾಣಿ ವಂದಿಸಿದರು. ಅನ್ನಪೂರ್ಣ ಪಾಟೀಲ್ ನಿರೂಪಿಸಿದರು.



ಚಿತ್ರ : ಜಗಳಿ ಪ್ರಕಾಶ್

**ತುಂಬಿ ತುಳುಕುತ್ತಿರುವ ಸೂಳೆಕೆರೆ ...** ಏಷ್ಯಾ ಖಂಡದಲ್ಲೇ 2 ನೇ ಅತಿ ದೊಡ್ಡ ಕೆರೆ ಎಂಬ ಹೆಗ್ಗಳಿಕೆ ಹೊಂದಿರುವ ಮತ್ತು ಅನೇಕ ನಗರ- ಪಟ್ಟಣಗಳ, ಹಳ್ಳಿಗಳ ಜನರಿಗೆ ಕುಡಿಯುವ ನೀರು ಪೂರೈಸುವ ಮತ್ತು ಸಾವಿರಾರು ಎಕರೆಗೆ ನೀರುಣಿಸುವ ಚನ್ನಗಿರಿ ತಾಲ್ಲೂಕಿನ ಸೂಳೆಕೆರೆ ಇತ್ತೀಚಿಗೆ ಸುರಿದ ನಿರಂತರ ಮಳೆಯಿಂದಾಗಿ ಹಾಗೂ ಭದ್ರಾ ನಾಲೆಯ ನೀರಿನಿಂದಾಗಿ ತುಂಬಿ ತುಳುಕುತ್ತಿದ್ದು, ಕೆರೆಯಲ್ಲಿ ಬರುವ ನೀರಿನ ಅಲೆಗಳು ಸಮುದ್ರದ ಅಲೆಗಳಂತೆ ಕಣ್ಮನ ಸೆಳೆಯುತ್ತಿವೆ .

## ನಗರಕ್ಕೆ ಇಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

ಜಿ.ಎಂ. ವಿಶ್ವವಿದ್ಯಾಲಯದಲ್ಲಿ ಇಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ರವರೆಗೆ



ಹಮ್ಮಿಕೊಂಡಿರುವ ವಿದ್ಯಾರ್ಥಿ ನಿಲಯ ಪ್ರತಿಷ್ಠಾನ ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವರು ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ್ ಜೋಶಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ನಂತರ ಮಧ್ಯಾಹ್ನ 2 ಗಂಟೆಗೆ ಸಚಿವರು ಬೆಂಗಳೂರಿಗೆ ಪ್ರಯಾಣಿಸುವರು.



## ಇ-ಆಸ್ತಿ ತಂತ್ರಾಂಶದಲ್ಲಿನ ತೊಂದರೆ ವಿಳಂಬ ಸರಿಪಡಿಸಲು ಆಗ್ರಹ

ದಾವಣಗೆರೆ, ನ.11- ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇ-ಆಸ್ತಿ ತಂತ್ರಾಂಶವನ್ನು ಅನುಷ್ಠಾನಗೊಳಿಸುವಲ್ಲಿ ನಾಗರಿಕರಿಗೆ ಆಗುತ್ತಿರುವ ವಿಳಂಬ ಮತ್ತು ತೊಂದರೆಯನ್ನು ಸರಿಪಡಿಸುವಂತೆ ಪಾಲಿಕೆ ಮಾಜಿ ಸದಸ್ಯರ ಒಕ್ಕೂಟದಿಂದ ಜಿಲ್ಲಾಧಿಕಾರಿಗಳಿಗೆ ಮತ್ತು ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಪಾಲಿಕೆಯ ಮಾಜಿ ಸದಸ್ಯರು, ಪಾಲಿಕೆಯ ಕಂದಾಯ ಶಾಖೆಯ ಸೇವೆಗಳನ್ನು ಸರಳೀಕರಣಗೊಳಿಸಲು ಮತ್ತು ನಾಗರಿಕರಿಗೆ ಉತ್ತಮ ಸೇವೆ ಒದಗಿಸಲು ಇ-ಆಸ್ತಿ ತಂತ್ರಾಂಶವನ್ನು ಅನುಷ್ಠಾನಗೊಳಿಸಲಾಗಿದೆ ಎಂದರು.

ಮಹಾನಗರ ಪಾಲಿಕೆ ವಾಪ್ತಿಯಲ್ಲಿನ ಸ್ವತ್ತಿನ ಮಾಲೀಕರು, ತಮ್ಮ ಹೆಸರಿಗೆ ಸ್ವತ್ತನ್ನು ನೋಂದಣಿ ಕಚೇರಿಯಲ್ಲಿ ನೋಂದಾಯಿಸಿದ ನಂತರ ಪಾಲಿಕೆಯಲ್ಲಿ ಖಾತೆ ನಂಬರನ್ನು ಪಡೆಯಬೇಕಾದ ಸಂದರ್ಭದಲ್ಲಿ ಇ.ಸಿ, ಕ್ರಯ ಪತ್ರ, ದಾನ ಪತ್ರ, ಪಾಲು ವಿಭಾಗ ಪತ್ರ ಹಾಗೂ ಇತರೆ ದಾಖಲೆಗಳನ್ನು ನೀಡಿ ಖಾತಾ ಪಡೆದಿರುತ್ತಾರೆ. ಅವುಗಳನ್ನೇ ಇ-ತಂತ್ರಾಂಶಕ್ಕೆ ಅಳವಡಿಸಿಕೊಂಡು ಇ-ಆಸ್ತಿ (ನಮೂನೆ-2) ನೀಡಬೇಕೆಂದು ಒತ್ತಾಯಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಕಾಯ್ದೆ ಹಾಗೂ ನಿಯಮಾವಳಿಗಳ ಪ್ರಕಾರ ಅಭಿವೃದ್ಧಿಪಡಿಸಲಾಗಿರುವತಂತ್ರಾಂಶದಮೂಲಕವೇ ಇನ್ಮುಂದೆ ಕಂದಾಯ ಶಾಖೆಯು ತೆರಿಗೆದಾರರಿಗೆ ಮತ್ತು ಸಾರ್ವಜನಿಕರಿಗೆ ಸೇವೆಗಳನ್ನು ಒದಗಿಸಬೇಕಾಗಿದೆ. ಇಲ್ಲಿನ ವಾರ್ಡ್‌ಗಳಲ್ಲಿರುವ ಸ್ವತ್ತುಗಳನ್ನು ಇ-ಆಡಳಿತ ತಂತ್ರಾಂಶದಲ್ಲಿಯೂ ಅಧಿಕೃತ ಆಸ್ತಿಗಳೆಂದೇ ಪರಿಗಣಿಸಿ, ಆ ಆಸ್ತಿಗಳಿಗೆ ದಾಖಲೆ ಕೇಳದೆ ಅವುಗಳನ್ನೇ ಅಪ್‌ಲೋಡ್ ಮಾಡಿ ಅಧಿಕೃತಗೊಳಿಸಬೇಕು ಎಂದು ಹೇಳಿದರು.

ಆಸ್ತಿಯು ನಿವೇಶನವಾಗಿದ್ದಲ್ಲಿ ಪ್ರಮುಖ ಸ್ಥಳವನ್ನು ಒಳಗೊಂಡಿರುವ ನಿವೇಶನದ ಫೋಟೋವನ್ನು ತಂತ್ರಾಂಶದಲ್ಲಿ ಅಪ್ ಲೋಡ್ ಮಾಡಬೇಕು. ಒಂದು ವೇಳೆ ನಿವೇಶನದ ಹತ್ತಿರ ಯಾವುದೇ ಪ್ರಮುಖ ಸ್ಥಳಗಳು ಇಲ್ಲದೇ ಇದ್ದಲ್ಲಿ ಮಾಲೀಕರು ನಿವೇಶನದಲ್ಲಿ ನಿಂತಿರುವ ಫೋಟೋವನ್ನು ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು ಎಂದರು. ಇ-ಸ್ವತ್ತು ನಮೂನೆಯನ್ನು ಸರಳೀಕರಿಸಿಕೊಂಡು ಇ-ಆಸ್ತಿ ನಮೂನೆ-2 ನೀಡಬೇಕು. ಅದನ್ನು ಬಿಟ್ಟು ಈಗಾಗಲೇ ಇ-ಸ್ವತ್ತು ನೀಡುವಾಗ ಆಸ್ತಿ ಮಾಲೀಕರಿಗೆ ಆಗಿರುವ ನೋವುಗಳನ್ನು ಕೇಳಿದರೆ ಬೇಸರವಾಗಲಿದೆ ಎಂದು ತಿಳಿಸಿದರು.

ಮಾಜಿ ಮಹಾಪೌರರುಗಳಾದ ಗುರುನಾಥ್, ವಸಂತ್ ಕುಮಾರ್, ಸುಧಾ ಜಯರುದ್ರೇಶ್, ಎಂ.ಎಸ್. ವಿಠ್ಠಲ್, ಜ್ಯೋತಿ ಶಿವರಾಜ್ ಪಾಟೀಲ್, ಪಾಲಿಕೆ ಮಾಜಿ ಸದಸ್ಯರುಗಳಾದ ಆವರಗೆರೆ ಸುರೇಶ್, ಹೆಚ್.ಎನ್. ಶಿವಕುಮಾರ್, ವಿಪಕ್ಷ ನಾಯಕ ಪ್ರಸನ್ನ ಕುಮಾರ್, ಪಾಲಿಕೆ ಸದಸ್ಯ ಕೆ.ಎಂ. ವೀರೇಶ್, ದೂಡಾ ಮಾಜಿ ಅಧ್ಯಕ್ಷ ಎ.ವೈ. ಪ್ರಕಾಶ್, ಕೊಳೇನಹಳ್ಳಿ ಸತೀಶ್, ಬಿ.ಜಿ. ಸಿದ್ದೇಶ್ ಮತ್ತಿತರರು ಈ ಸಂದರ್ಭದಲ್ಲಿದ್ದರು.

# ಎಸ್.ಎಸ್.ಕೆ. ಸಮಾಜಕ್ಕೆ ಸಿಎ ನಿವೇಶನದ ಭರವಸೆ

**ಶ್ರೀ ರಾಜರಾಜೇಶ್ವರಿ ಸಹಸ್ರಾರ್ಜುನ ಮಹಾರಾಜರ ಜಯಂತ್ಯುತ್ಸವದಲ್ಲಿ ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ**

ದಾವಣಗೆರೆ, ನ.11- ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ 11 ಸಿಎ ನಿವೇಶನಗಳಿದ್ದು, ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜದವರು ಅರ್ಜಿ ಸಲ್ಲಿಸಿದರೆ ಮಂಜೂರು ಮಾಡಿಸಿಕೊಡಲಾಗುವುದು ಎಂದು ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಭರವಸೆ ನೀಡಿದರು.

ಶ್ರೀ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜದಿಂದ ನಗರದ ಶಂಕರ ಮಠದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಶ್ರೀ ರಾಜರಾಜೇಶ್ವರಿ ಸಹಸ್ರಾರ್ಜುನ ಮಹಾರಾಜರ ಜಯಂತ್ಯುತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಎಲ್ಲಾ ಸಮಾಜಗಳಿಗೂ ನಿವೇಶನ ಕಲ್ಪಿಸಿದ್ದಾರೆ ಎಂದು ಹೇಳಿದರು. ಕಿರಾಣಿ ಹಾಗೂ ಬಟ್ಟೆಯಂಗಡಿ ನಡೆಸುವ ಸಹಸ್ರಾರ್ಜುನ ಕ್ಷತ್ರಿಯ ಸಮಾಜದವರು ಕಷ್ಟದ ಜೀವಿಗಳು. ಈ ಸಮುದಾಯ ಮತ್ತಷ್ಟು ಸಂಘಟನೆ ಆಗಬೇಕಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಮಕ್ಕಳು ಕೂಡ ಶಿಕ್ಷಣದ ಜತೆಗೆ ಕ್ರೀಡೆ, ಸಾಂಸ್ಕೃತಿಕ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಬೇಕು ಎಂದು ಅವರು ಕಿವಿಮಾತು ಹೇಳಿದರು.

ಕೊರೊನಾ ಅವಧಿಯಲ್ಲಿ ಕುಟುಂಬಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಿದ ಶ್ರೇಯಸ್ಸು ಮಹಿಳೆಯರದು. ಗೃಹಿಣಿಯರು ಮನೆಗಳಲ್ಲಿ ಸುಮ್ಮನೆ ಕೂರದೆ ಬಿಡುವಿನ ವೇಳೆಯಲ್ಲಿ ಔದ್ಯೋಗಿಕ ಚಟುವಟಿಕೆಗಳನ್ನು ನಡೆಸಬೇಕಿದೆ ಎಂದು ದಿನೇಶಿ ಶೆಟ್ಟಿ ಸಲಹೆ ನೀಡಿದರು.

ಹುಬ್ಬಳ್ಳಿಯ ಹೆಸರಾಂತ ಸಂಗೀತಗಾರ ಪಂಡಿತ್ ಬಾಲಚಂದ್ರ ನಾಕೋಡ್ ಸಂಗೀತ ಗಾಯನದೊಂದಿಗೆ ರಂಜಿಸಿದರು. ನಂತರ ಮಾತನಾಡಿ, ಸಹಸಾರ್ಜುನ ಮಹಾರಾಜರ ಜಯಂತಿಯನ್ನು ಅಚ್ಚುಕಟ್ಟಾಗಿ ನಡೆಸುತ್ತಿರುವುದು ಮೆಚ್ಚುಗೆಯ ವಿಚಾರ ಎಂದು ಶ್ಲಾಘಿಸಿದರು.

ರಾಣೇಬೆನ್ನೂರಿನ ನಗರಸಭೆ ಸದಸ್ಯರಾದ ತ್ರಿವೇಣಿ ಎನ್. ಪವಾರ್ ಮಾತನಾಡಿ, ಹಿಂದೂ ಧರ್ಮ, ಸಂಸ್ಕೃತಿ ಉಳಿಯಬೇಕಾದರೆ ಧಾರ್ಮಿಕ ಕಾರ್ಯಕ್ರಮಗಳು ಹೆಚ್ಚಬೇಕೆಂದರು.

ಎಸ್‌ಎಸ್‌ಕೆ ಸಮಾಜದ ಜಿಲ್ಲಾ ಕಾರ್ಯದರ್ಶಿ ಮಹೇಶ್ ಸೋಳಂಕಿ ಮಾತನಾಡಿ, ಕ್ರಿಸ್ತ ಪೂರ್ವ 2600 ರ ಅವಧಿ ಯಲ್ಲಿದ್ದ ಸಹಸ್ರಾರ್ಜುನ ಮಹಾರಾಜರು ಶೌರ್ಯಕ್ಕೆ ಹೆಸರಾಗಿದ್ದರು. ಶತ್ರುಗಳು ಇವರಿಗೆ ಶರಣಾಗುತ್ತಿದ್ದರು. ಸಪ್ತ ಚಕ್ರವರ್ತಿಗಳಲ್ಲಿ ಒಬ್ಬರಾಗಿದ್ದರು ಎಂದು ಸ್ಮರಿಸಿದರು. ಮಹಾಭಾರತ, ವಾಯುಪುರಾಣ ಗ್ರಂಥಗಳಲ್ಲಿ ಸಹಸ್ರಾರ್ಜುನ ಮಹಾರಾಜರ ಉಲ್ಲೇಖವಿದೆ. ಅವರ ಜಪ ಅಥವಾ 108 ಬಾರಿ ಪಾರಾಯಣ ಮಾಡಿದವರಿಗೆ ನಷ್ಟವಾದ ವಸ್ತುಗಳು ಮರಳುತ್ತವೆ ಎಂಬ ನಂಬಿಕೆ ಇದೆ ಎಂದರು.

ಎಸ್‌ಎಸ್‌ಕೆ ಸಮಾಜದ ಜಿಲ್ಲಾಧ್ಯಕ್ಷ ಮಲ್ಲಾರಸಾ ಆರ್. ಕಾಟ್ವೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಶುಭಾಂಜಲಿ ಕಠಾರೆ, ನಾಗರತ್ನಾ ಬದ್ದಿ, ಪ್ರವೀಣ್ ಕಾಟ್ವೆ ಇತರರಿದ್ದರು. ಗಿರೀಶ್ ಮೆಹರ್ವಾಡೆ ಸ್ವಾಗತಿಸಿದರು.

## ಪಿಸಾಳೆ ಕಾಂಪೌಂಡ್ ಒಳಚರಂಡಿ ದುರಸ್ತಿಗೆ ಆಗ್ರಹಿಸಿ ಪ್ರತಿಭಟನೆ



ದಾವಣಗೆರೆ, ನ.11- ನಗರದ ಪಿ.ಜೆ. ಬಡಾವಣೆ ಪಿಸಾಳೆ ಕಾಂಪೌಂಡ್ 3ನೇ ಕ್ರಾಸ್‌ನಲ್ಲಿ ಡ್ರೈನೇಜ್ ದುರಸ್ತಿಗಾಗಿ ಆಗ್ರಹಿಸಿ ಸ್ಥಳೀಯ ನಾಗರಿಕರು ಸ್ಥಳದಲ್ಲಿ ಪ್ರತಿಭಟನೆ ಮಾಡಿದರು.

ಪ್ರತಿಭಟನಾನಿರತ ಪಿಸಾಳೆ ನಾಗರಾಜರಾವ್ ಮಾತನಾಡಿ, ಸ್ಮಾರ್ಟ್ ಸಿಟಿಯಿಂದ ಹೊಸದಾಗಿ ಡ್ರೈನೇಜ್ ನಿರ್ಮಿಸಿದಾಗಿನಿಂದಲೂ ಪ್ರತಿ 15 ದಿನಕ್ಕೊಮ್ಮೆ ಡ್ರೈನೇಜ್ ನೀರು ಉಕ್ಕಿ ಹರಿಯುವುದರಿಂದ ಕಾಂಪೌಂಡ್ ಬಳಿ ನಾಗರಿಕರು ಮೂಗು ಮುಚ್ಚಿಕೊಂಡು ಅಡ್ಡಾಡುವ ಪರಿಸ್ಥಿತಿ ಬಂದಿದೆ.

ಮಹಾನಗರ ಪಾಲಿಕೆ, ಸ್ಮಾರ್ಟ್ ಸಿಟಿ ಹಾಗೂ ವಾರ್ಡಿನ ಸದಸ್ಯ ಅಜಯ್ ಕುಮಾರ್ ಇತ್ತ ಗಮನಹರಿಸುವುದನ್ನೇ ಮರೆತಿದ್ದಾರೆ.

ಪ್ರತಿ ಸಾರಿ ಮನವಿ ಮಾಡಿ ಸಾಕಾಗಿದೆ ಹಾಗೂ ಮಾಜಿ ಮೇಯರ್ ಹಾಗೂ ಹಾಲಿ ಸದಸ್ಯರಾದ ಅಜಯ್ ಕುಮಾರ್ ಅವರಿಗೆ ಸ್ಥಳೀಯ ಸಮಸ್ಯೆಗಳಿಗಾಗಿ ಫೋನ್ ಮಾಡಿದರೆ, ಫೋನ್‌ಗೆ ಉತ್ತರಿಸುವುದಿಲ್ಲ ಎಂದು ದೂರಿದರು.

ಮಧು ಪವಾರ್, ಪದ್ಮಜಾದವ್ ಗಾಯತ್ರಿ ಭಾಯಿ, ಬೇಬಿ ರಾಗಿಣಿ, ಭಾಗ್ಯ, ಸೌಮ್ಯ, ಕವಿತಾ, ಆಶಾ, ಸುರೇಶ್, ರುದ್ರೇಶ್ ಇನ್ನು ಅನೇಕ ಪಿಸಾಳೆ ಕಾಂಪೌಂಡಿನ ನಿವಾಸಿಗಳು ಇದ್ದರು.

## ಸುಪ್ರೀಂ : ಮುಖ್ಯ ನ್ಯಾಯಮೂರ್ತಿಯಾಗಿ ಸಂಜೀವ್ ಖನ್ನಾ



ನವದೆಹಲಿ, ನ. 11 - ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ದೇಶದ 51ನೇ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ನಡೆದ ಸರಳ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಮಾಣ ವಚನ ಬೋಧಿಸಿದ್ದಾರೆ.

ನೂತನ ಮುಖ್ಯ ನ್ಯಾಯಮೂರ್ತಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಅಭಿನಂದಿಸಿದ್ದಾರೆ.

ನ್ಯಾಯಮೂರ್ತಿ ಖನ್ನಾ ಅವರು ಆರು ತಿಂಗಳ ಅಧಿಕಾರ ಅವಧಿ ಹೊಂದಿದ್ದಾರೆ. 65ನೇ ವಯಸ್ಸಿನಲ್ಲಿ ಅವರು ನಿವೃತ್ತರಾಗಲಿದ್ದಾರೆ.

## ನಗರದಲ್ಲಿ ನಾಳೆ ಆರೋಗ್ಯ ತಪಾಸಣೆ

ದಾವಣಗೆರೆ, ನ.11- ನಗರದ ಭಾವಸಾರ ವಿಷನ್ ಇಂಡಿಯಾ, ಬಾಲಾಜಿ ಎಜುಕೇಷನಲ್ ಅಂಡ್ ಸೋಶಿಯಲ್ ವೆಲ್‌ಫೇರ್ ಟ್ರಸ್ಟ್ ಹಾಗೂ ನಗರ ಆರೋಗ್ಯ ಕೇಂದ್ರ 2, ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ದಾವಣಗೆರೆ ತಾಲ್ಲೂಕು ಮತ್ತು ದಾವಣಗೆರೆ ಹೈಟೆಕ್ ಡಯಾಗ್ನೋಸ್ಟಿಕ್ ಸೆಂಟರ್ ಇವರುಗಳ ಸಂಯುಕ್ತಾಶ್ರಯದಲ್ಲಿ ಆರೋಗ್ಯ ತಪಾಸಣಾ ಶಿಬಿರ ನಡೆಯಲಿದೆ.

ನಾಡಿದ್ದು ದಿನಾಂಕ 13 ರ ಬುಧವಾರ ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 2 ರವರೆಗೆ ಮಹಾರಾಜ ಪೇಟೆ ಶ್ರೀ ವಿಠ್ಠಲ ಮಂದಿರದಲ್ಲಿ ಶಿಬಿರ ಏರ್ಪಾಡಾಗಿದೆ.

ಸೌಲಭ್ಯಗಳು: ಆರೋಗ್ಯ ತಪಾಸಣೆ, ರಕ್ತದೊತ್ತಡ, ಮಧುಮೇಹ, ಕಫ, ಮಲೇರಿಯಾ, ಡೆಂಗ್ಯೂ ಹಾಗೂ ಹೆಚ್.ಐ.ವಿ ಪರೀಕ್ಷೆ, ಕಣ್ಣಿನ ಪರೀಕ್ಷೆ, ಉಚಿತ ಆರ್.ಬಿ.ಎಸ್., ಲಿಪಿಡ್ ಪ್ರೊಫೈಲ್ ಕೊಲೆಸ್ಟ್ರಾಲ್ ಪರೀಕ್ಷೆ.

ಮಾಹಿತಿಗಾಗಿ ಶ್ರೀಮತಿ ಸರಳ ಅಮಟೆ (94483 64830), ರಮೇಶ್ ಬಾಬು ಗುಜ್ಜರ್ (99456 59498) ಇವರನ್ನು ಸಂಪರ್ಕಿಸಬಹುದು.

## ಇಂದು ನಗರದಲ್ಲಿ ವಿದ್ಯುತ್ ವ್ಯತ್ಯಯ

ಸಿದ್ದವೀರಪ್ಪ ಬಡಾವಣೆ, ಶಾಮನೂರು ರಸ್ತೆ, ಹೋಟೆಲ್ ಸಂಕಮ ಮತ್ತು ದುರ್ಗಾ ಆಸ್ಪತ್ರೆ ಹಾಗೂ ಸುತ್ತ ಮುತ್ತಲಿನಲ್ಲಿ ಇಂದು ಬೆಳಿಗ್ಗೆ 10 ರಿಂದ ಸಂಜೆ 4ರವರೆಗೆ ವಿದ್ಯುತ್ ಇರುವುದಿಲ್ಲ.







KA/SK/DVG-028/2024-2026. O/P @ B.V. Nagar P.O. **JANATHAVANI -** Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas